07 March 2026 Saturday

SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

**ಭಾವನಾಂತರಂಗ**

ಜಗತ್ತು ಎಷ್ಟೇ ಮುಂದುವರೆದರೂ,
ಜನರು ಎಷ್ಟೇ ಐಷಾರಾಮಿ ಜೀವನ ಪಡೆದರೂ
ನೆಮ್ಮದಿಯನ್ನು ಮಾತ್ರ ದುಡ್ಡಿನಿಂದ ಖರೀದಿಸಲಾಗದು!

-ಸ್ನೇಹಾ ಆನಂದ್

info.varthaman@gmail.com



ಮೇಕೆದಾಟು ಯೋಜನೆಗೆ ಪರಿಷ್ಕೃತ ಡಿಪಿಆರ್ ಸಿದ್ಧಪಡಿಸುವ ಘೋಷಣೆ — ಪುಟ ಸಂ. 2



ಚಾಮರಾಜನಗರ ಜನತೆಗೆ ನಿರಾಸೆ ಮೂಡಿಸಿದ ರಾಜ್ಯಬಜೆಟ್ — ಪುಟ ಸಂ. 3



ರಾಜ್ಯಬಜೆಟ್: ರಾಜ್ಯದ ಐಟಿ ನಗರವಾಗಿ ಮೈಸೂರು — ಪುಟ ಸಂ. 4


9742504916 ಮೈಸೂರು ಮಂಡ್ಯ ಬೆಂಗಳೂರು ಹಾಸನ ಚಾಮರಾಜನಗರ ರಾಮನಗರ ಬೆಂಗಳೂರು ಗ್ರಾಮಾಂತರ ಕೊಡಗು ಕಾರ್ಯನಿರ್ವಾಹಕ ಸಂಪಾದಕ - ಕೆ.ಆರ್.ಮಿಹಿರ್ ಆಕಾಶ್

VARTHAMAN Volume: 69 Issue: 116 Pages: 06 KA/SK/MYS/1098/2023-2025 R.N.I. No.3577/1957 rthaman.in Price-3

# ದಾಖಲೆಯೇ ಸಾಧನೆ

# ಮೆಚ್ಚುಗೆಗೆ ಸರ್ಕಸ್

## ಜಾತಿ, ಧರ್ಮ, ಸಮುದಾಯ, ಪ್ರದೇಶವಾರು ಓಲೈಕೆಗೆ ಸಿದ್ದರಾಮಯ್ಯ 'ತಂತಿ ಮೇಲಿನ ನಡಿಗೆ'



**ಬೆಂಗಳೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ದಾಖಲೆಯ ಅಧಿಕಾರಾವಧಿ ಪೂರೈಸಿದ ನಂತರ 17ನೇ ಬಾರಿಗೆ ಬಜೆಟ್ ಮಂಡಿಸಿ ಮತ್ತೊಂದು ದಾಖಲೆ ಬರೆದಿದ್ದಾರೆ. ಅಲ್ಲದೇ ಬಜೆಟ್ ಗಾತ್ರದಲ್ಲಿಯೂ ದಾಖಲೆ ಬರೆದಿದ್ದಾರೆ. 4,48,004 ಕೋಟಿ ರೂ. ಗಾತ್ರದ ಬಜೆಟ್ ಮಂಡಿಸಿದ್ದಾರೆ. ಎಲ್ಲರಿಗೂ ಪಾಲು ನೀಡಲು ಸರ್ಕಸ್ ಮಾಡಿದ್ದಾರೆ. ಎಲ್ಲ ಸಮುದಾಯಗಳ ಓಲೈಕೆಗೆ ಸಿದ್ದರಾಮಯ್ಯ 'ತಂತಿ ಮೇಲಿನ ನಡಿಗೆ' ಮಾಡಿದಂತಿದೆ.

ರಾಜ್ಯದ ಪ್ರದೇಶವಾರು, ಜಾತಿ, ಧರ್ಮದ ಆಧಾರದಲ್ಲಿಯೂ ಪಾಲು ಮಾಡಿದ್ದಾರೆ. ಅಲ್ಲದೆ, ಯುವಜನರನ್ನು ಗಮನದಲ್ಲಿರಿಸಿಕೊಂಡು ಹಲವು ಯೋಜನೆಗಳನ್ನು ಪ್ರಕಟಿಸಿದ್ದಾರೆ. ರೈತರು, ಉದ್ಯಮಿಗಳು, ಕೈಗಾರಿಕೋದ್ಯಮಿಗಳನ್ನು ಗಮನದಲ್ಲಿಟ್ಟುಕೊಂಡು ಯೋಜನೆಗಳನ್ನು ರೂಪಿಸಿದ್ದಾರೆ. ಜನರ ಮೇಲೆ ನೇರವಾಗಿ ಯಾವುದೇ ತೆರಿಗೆ ಹೊರೆಯನ್ನು ಹೊರಿಸಿಲ್ಲ. ಆದರೆ ಅದು ಯೋಜನೆಗಳ ಒಳಗೆ ಅಂತರ್ಗತವಾಗಿರಬಹುದು ಎಂಬ ಅನುಮಾನ ಜನರಿಂದ ಮರೆಯಾಗಿಲ್ಲ.


ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶುಕ್ರವಾರ 17ನೇ ಬಾರಿ ಬಜೆಟ್ ಮಂಡಿಸುವ ಮೂಲಕ ಕರ್ನಾಟಕ ಇತಿಹಾಸದಲ್ಲೇ ಅತಿ ಹೆಚ್ಚು ಬಾರಿ ಬಜೆಟ್ ಮಂಡಿಸಿದ ನಾಯಕ ಹಾಗೂ ರಾಷ್ಟ್ರಮಟ್ಟದಲ್ಲಿ ಅತ್ಯಧಿಕ ಬಾರಿ ಬಜೆಟ್ ಮಂಡಿಸಿದ 2ನೇ ನಾಯಕ ಎಂಬ ಸಾಧನೆ ಮಾಡಿದ್ದಾರೆ.

ಶುಕ್ರವಾರ ಬಜೆಟ್ ಭಾಷಣ ಆರಂಭಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಕರ್ನಾಟದಲ್ಲಿ ಅತೀ ಹೆಚ್ಚು ಬಾರಿ ಮತ್ತು ಅತ್ಯಧಿಕ ಸಮಯ ಬಜೆಟ್ ಮಂಡಿಸಿದ ನಾಯಕ ಎಂಬ ಸಾಧನೆ ಮಾಡಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಶುಕ್ರವಾರ 3 ಗಂಟೆ 31 ನಿಮಿಷಗಳ ಸುದೀರ್ಘ ಬಜೆಟ್ ಭಾಷಣ ಮಂಡಿಸಿದ್ದಾರೆ. ಆ ಮೂಲಕ ಸುದೀರ್ಘ ಬಜೆಟ್ ಮಂಡಿಸಿದ ದಾಖಲೆಯನ್ನು ತಮ್ಮದಾಗಿಸಿಕೊಂಡರು. ಬೆಳಿಗ್ಗೆ 10:20ಕ್ಕೆ ಬಜೆಟ್ ಓದಲು ಆರಂಭಿಸಿದ ಅವರು ಮಧ್ಯಾಹ್ನ 1:51ರ ವೇಳೆಗೆ ಮುಕ್ತಾಯಗೊಳಿಸಿದರು. ಬಜೆಟ್ ಮಂಡಣೆಯ ಒಟ್ಟು ಸಮಯ 3:31 ನಿಮಿಷಗಳು. ಈ ಹಿಂದೆ 2025ರಲ್ಲಿ 3 ಗಂಟೆ 26 ನಿಮಿಷಗಳ ಕಾಲ ಅವರು ಬಜೆಟ್ ಮಂಡಿಸಿದ್ದರು. ಅದು ಈ ಹಿಂದಿನ ದಾಖಲೆಯಾಗಿತ್ತು. 2024ರಲ್ಲಿ ಅವರು 3:10 ನಿಮಿಷಗಳ ಕಾಲ ಬಜೆಟ್ ಮಂಡಿಸಿದ್ದರು.



## ಬಜೆಟ್‌ನ ಶೇ.11.37 ಪಾಲು ಗ್ಯಾರಂಟಿಗೆ

### ವಾರ್ಷಿಕ 50,686 ಕೋಟಿ ರೂ. ಅನುದಾನ ಮೀಸಲು



**ಬೆಂಗಳೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಡಿಸಿದ 4,48,004 ಕೋಟಿ ರೂ. ಗಾತ್ರದ ದಾಖಲೆಯ ಬಜೆಟ್ ನಲ್ಲಿ ಪಂಚ ಗ್ಯಾರಂಟಿ ಯೋಜನೆಗಳಿಗೆ 50,686 ಕೋಟಿ ರೂ. ಅನುದಾನವನ್ನು ಮೀಸಲಿಡಲಾಗಿದೆ. ಆದಾಯದ ಅತಿ ಹೆಚ್ಚು ಹಣ ಗ್ಯಾರಂಟಿಗಳ ಪಾಲಾಗಲಿದೆ.

ಕಾಂಗ್ರೆಸ್ಸಿನ 5 ಗ್ಯಾರಂಟಿಗಳ ಪೈಕಿ ಯುವ ನಿಧಿಯ ಹಂಚಿಕೆಯನ್ನು ತೋರಿಸಿಲ್ಲ. ಉಳಿದ ನಾಲ್ಕು ಗ್ಯಾರಂಟಿಗಳಿಗೆ ಅನುದಾನವನ್ನು ಹಂಚಿಕೆ ಮಾಡಲಾಗಿದೆ. ಗೃಹಲಕ್ಷ್ಮಿ 28,608 ಕೋಟಿ ರೂ., ಗೃಹ ಜ್ಯೋತಿ 10,578 ಕೋಟಿ ರೂ., ಅನ್ನ ಭಾಗ್ಯ 6,200 ಕೋಟಿ ರೂ., ಮಹಿಳೆಯರ ಉಚಿತ ಪ್ರಯಾಣ ಒದಗಿಸುವ ಶಕ್ತಿಗೆ 5,300 ಕೋಟಿ ರೂ. ಅನುದಾನವನ್ನು ಕೊಡಲಾಗಿದೆ. ಅಂದರೆ ಒಟ್ಟು ಬಜೆಟ್‌ನ ಸುಮಾರು ಶೇ.11.37 ಪಾಲು ಗ್ಯಾರಂಟಿ ಯೋಜನೆಗಳಿಗೆ ಹೋಗುತ್ತಿದೆ.

ಪುಟ 2ಕ್ಕೆ


## ಆದಾಯ-ಖರ್ಚು ಯಾರಿಗೆ ಎಷ್ಟು?

**ಬೆಂಗಳೂರು:** 2026-27ನೇ ಸಾಲಿನ ಬಜೆಟ್ ಅನ್ನು ಸಿಎಂ ಸಿದ್ದರಾಮಯ್ಯ ಮಂಡಿಸಿದರು. 4.49 ಲಕ್ಷ ಕೋಟಿ ಗಾತ್ರದ ಬಜೆಟ್‌ನ ಒಟ್ಟು ಆದಾಯ ಗಳಿಕೆ ಮತ್ತು ವೆಚ್ಚವನ್ನು ರೂಪಾಯಿ ಲೆಕ್ಕದಲ್ಲಿ ಮಾಡಲಾಗಿದೆ. ರಾಜ್ಯ ಸರ್ಕಾರಕ್ಕೆ ಬರುವ ಒಂದು ರೂಪಾಯಿ ಆದಾಯವನ್ನು ಹೇಗೆ ಖರ್ಚು ಮಾಡಲಿದೆ ಎಂಬ ಬಗ್ಗೆ ವಿವರ ಇಲ್ಲಿದೆ.


## ಆದಾಯದ ಮೂಲ (ಪೈಸೆಗಳಲ್ಲಿ)



- ರಾಜ್ಯ ತೆರಿಗೆ ಆದಾಯ- 49 ಪೈಸೆ
- ಬಂಡವಾಳ ಜಮೆ ಮತ್ತು ಸಾಲಗಳು- 29 ಪೈಸೆ
- ಕೇಂದ್ರದ ತೆರಿಗೆ ಪಾಲು- 14 ಪೈಸೆ
- ರಾಜ್ಯ ತೆರಿಗೆಯೇತರ ರಾಜಸ್ವ- 4 ಪೈಸೆ
- ಕೇಂದ್ರ ಸರ್ಕಾರದ ಸಹಾಯಾನುದಾನ-4 ಪೈಸೆ




## 38 ಲಕ್ಷ ರೈತರಿಗೆ ಶೂನ್ಯ ಬಡ್ಡಿ ದರದ ಸಾಲ



**ಬೆಂಗಳೂರು:** 38 ಲಕ್ಷ ರೈತರಿಗೆ ಶೂನ್ಯ ಬಡ್ಡಿ ದರದಲ್ಲಿ 30,000 ಕೋಟಿ ಕೃಷಿ ಸಾಲ ನೀಡುವ ಗುರಿ ಹೊಂದಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ 2026-27ನೇ ಸಾಲಿನ ಬಜೆಟ್ ಭಾಷಣದಲ್ಲಿ ತಿಳಿಸಿದ್ದಾರೆ. 2025-26ನೇ ಸಾಲಿನಲ್ಲಿ 37 ಲಕ್ಷ ರೈತರಿಗೆ 28,000

ಪುಟ 2ಕ್ಕೆ

## ಯಾವುದಕ್ಕೆ ಎಷ್ಟು ವೆಚ್ಚ?

- ಸಾಲ ಮರುಪಾವತಿ- 20 ಪೈಸೆ
- ಸಾಮಾನ್ಯ ಸೇವೆ- 18 ಪೈಸೆ
- ಸಮಾಜ ಕಲ್ಯಾಣ- 15 ಪೈಸೆ
- ಇತರೆ ಆರ್ಥಿಕ ಸೇವೆ- 14 ಪೈಸೆ
- ಕೃಷಿ, ನೀರಾವರಿ, ಗ್ರಾಮೀಣಾಭಿವೃದ್ಧಿ- 13 ಪೈಸೆ
- ಶಿಕ್ಷಣ- 10 ಪೈಸೆ
- ಆರೋಗ್ಯ- 4 ಪೈಸೆ
- ನೀರು ಪೂರೈಕೆ ಮತ್ತು ನೈರ್ಮಲ್ಯ- 3 ಪೈಸೆ
- ಸಾಮಾಜಿಕ ಸೇವೆಗಳು- 3 ಪೈಸೆ

## ಯಾವ ಇಲಾಖೆಗೆ ಎಷ್ಟು ಖರ್ಚು?

- ಶಿಕ್ಷಣ: 47,224 ಕೋಟಿ ರೂ.
- ಮಹಿಳಾ ಮತ್ತು ಮಕ್ಕಳ ಕಲ್ಯಾಣ: 34,929 ಕೋಟಿ ರೂ.
- ಇಂಧನ: 29,947 ಕೋಟಿ ರೂ.
- ಗ್ರಾಮೀಣಾಭಿವೃದ್ಧಿ: 26,559 ಕೋಟಿ ರೂ.
- ಲೋಕೋಪಯೋಗಿ ಮತ್ತು ಸಾರಿಗೆ: 23,100 ಕೋಟಿ ರೂ.
- ನೀರಾವರಿ: 22,436 ಕೋಟಿ ರೂ.
- ನಗರಾಭಿವೃದ್ಧಿ ಮತ್ತು ವಸತಿ: 22,203 ಕೋಟಿ ರೂ.
- ಕಂದಾಯ: 19,843 ಕೋಟಿ ರೂ.
- ಸಮಾಜ ಕಲ್ಯಾಣ: 18,612 ಕೋಟಿ ರೂ.
- ಆರೋಗ್ಯ: 17,817 ಕೋಟಿ ರೂ.
- ಒಳಾಡಳಿತ (ಗೃಹ): 11,424 ಕೋಟಿ ರೂ.
- ಕೃಷಿ ಮತ್ತು ತೋಟಗಾರಿಕೆ: 8,373 ಕೋಟಿ ರೂ.
- ಆಹಾರ-ನಾಗರಿಕ ಸರಬರಾಜು: 7,942 ಕೋಟಿ ರೂ.
- ಪಶುಸಂಗೋಪನೆ ಮತ್ತು ಮೀನುಗಾರಿಕೆ: 4,084 ಕೋಟಿ ರೂ.
- ಇತರೆ ವಲಯಗಳು: 1,72,757 ಕೋಟಿ ರೂ.

## ರಿಯಾಯತಿ ದರದಲ್ಲಿ 50 ಸಾವಿರ ನಿವೇಶನ

**ಬೆಂಗಳೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ ಶುಕ್ರವಾರ ಮಂಡಿಸಿದ ಬಜೆಟ್ ನಲ್ಲಿ ವಸತಿ ಇಲಾಖೆಗೆ



ಸಂಬಂಧಿಸಿ ಹಲವು ಯೋಜನೆಗಳನ್ನು ಘೋಷಣೆ ಮಾಡಿದ್ದಾರೆ. ಪ್ರಸಕ್ತ ಸಾಲಿನಲ್ಲಿ 3 ಲಕ್ಷ ಮನೆಗಳನ್ನು ಪೂರ್ಣಗೊಳಿಸುವ ಗುರಿಯನ್ನು ಹೊಂದಲಾಗಿದೆ. ಹಿಂದಿನ ಸರ್ಕಾರವು ಅನುದಾನ ನೀಡದೇ ಮಂಜೂರಾತಿ ನೀಡಿರುವ 4.90 ಲಕ್ಷ ಮನೆಗಳನ್ನು ಪೂರ್ಣಗೊಳಿಸಲು ಕ್ರಮ ತೆಗೆದುಕೊಳ್ಳುತ್ತೇವೆ

ಪುಟ 2ಕ್ಕೆ

## ಅತಿಥಿ ಉಪನ್ಯಾಸಕರಿಗೆ 90 ದಿನ ಮಾತೃತ್ವ ರಜೆ

**ಬೆಂಗಳೂರು:** ಪ್ರಥಮ ದರ್ಜೆ ಕಾಲೇಜು, ಪಾಲಿಟೆಕ್ನಿಕ್ ಹಾಗೂ ಇಂಜಿನಿಯರಿಂಗ್ ಕಾಲೇಜುಗಳಲ್ಲಿನ ಮಹಿಳಾ ಅತಿಥಿ ಉಪನ್ಯಾಸಕರಿಗೆ 90 ದಿನಗಳ ಮಾತೃತ್ವ ರಜೆ ಘೋಷಿಸಲಾಗಿದೆ. 2026-27ನೇ ಸಾಲಿನ ಬಜೆಟ್ ಮಂಡಿಸಿದ ಸಿಎಂ ಸಿದ್ದರಾಮಯ್ಯ, 90 ದಿನಗಳ ಮಾತೃತ್ವ ರಜೆ ಸೌಲಭ್ಯ ಕೊಡುವ ಘೋಷಣೆ ಮಾಡಿದ್ದಾರೆ. ಮುಂದಿನ ಶೈಕ್ಷಣಿಕ ವರ್ಷದಿಂದ ಜಾರಿಗೆ ಬರಲಿದೆ.

ಎಡಿಬಿ ನೆರವಿನಡಿ 40 ಪದವಿ ಕಾಲೇಜು ಹಾಗೂ 11 ಪಾಲಿಟೆಕ್ನಿಕ್‌ಗಳ ಅಭಿವೃದ್ಧಿ, 9 ಉತ್ಕೃಷ್ಟತಾ ಕೇಂದ್ರಗಳನ್ನು ಸ್ಥಾಪಿಸಲಾಗುವುದು. ವಿವಿಗಳಲ್ಲಿ 1000

ಪುಟ 2ಕ್ಕೆ

## 16 ವರ್ಷದೊಳಗಿನ ಮಕ್ಕಳಿಗೆ ಸಾಮಾಜಿಕ ಮಾಧ್ಯಮ ನಿಷೇಧ

**ಬೆಂಗಳೂರು:** ರಾಜ್ಯದಲ್ಲಿ 16 ವರ್ಷದೊಳಗಿನ ಮಕ್ಕಳಿಗೆ ಸಾಮಾಜಿಕ ಮಾಧ್ಯಮ ಬಳಕೆ ನಿಷೇಧಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಿಸಿದರು.

2026-27ನೇ ಸಾಲಿನ ಬಜೆಟ್ ಮಂಡನೆ ವೇಳೆ ಮಾತನಾಡಿದ ಅವರು, ಹೆಚ್ಚುತ್ತಿರುವ ಮೊಬೈಲ್ ಬಳಕೆಯಿಂದ ಮಕ್ಕಳ ಮೇಲೆ ಬೀರುವ ಅಡ್ಡಪರಿಣಾಮಗಳನ್ನು ತಡೆಗಟ್ಟುವ ಉದ್ದೇಶದಿಂದ 16 ವರ್ಷದೊಳಗಿನ ಮಕ್ಕಳಿಗೆ ಸಾಮಾಜಿಕ ಜಾಲತಾಣದ ಬಳಕೆಯನ್ನು ನಿಷೇಧಿಸಲಾಗುವುದು ಎಂದು ತಿಳಿಸಿದರು.

ವಿದ್ಯಾರ್ಥಿಗಳ ಆರೋಗ್ಯ, ಭವಿಷ್ಯ ಮತ್ತು ವ್ಯಕ್ತಿತ್ವ ರೂಪಿಸುವ ಸ್ಥಳವಾಗಿರುವ ಶಾಲಾ-

ಪುಟ 2ಕ್ಕೆ

## ಸಮೃದ್ಧಿಯ ಗುರಿ: ಡಿಕೆಶಿ


**ಬೆಂಗಳೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶುಕ್ರವಾರ ದಾಖಲೆಯ 17ನೇ ಬಜೆಟ್ ಮಂಡಿಸಿದ್ದಾರೆ. ಬಜೆಟ್ ಕುರಿತು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಅಭಿವೃದ್ಧಿಯ ಮಂತ್ರ, ಸಮೃದ್ಧಿಯ ಗುರಿ. ಪ್ರತಿಯೊಂದು ವಲಯಕ್ಕೂ ಸಮಾನ ಆದ್ಯತೆ ನೀಡಿ, ಸಮೃದ್ಧ ಕರ್ನಾಟಕದ ನಿರ್ಮಾಣಕ್ಕಾಗಿ 4.48 ಲಕ್ಷ ಕೋಟಿ ಮೊತ್ತದ 2026-2027 ಸಾಲಿನ ಬೃಹತ್ ಬಜೆಟ್ ಮಂಡಿಸಲಾಗಿದೆ ಎಂದು ಹೇಳಿದರು. ಶಿಕ್ಷಣ, ಆರೋಗ್ಯ, ಕೃಷಿ ಹಾಗೂ ಮೂಲ ಭೂತ ಸೌಕರ್ಯಗಳಿಗೆ ವಿಶೇಷ ಒತ್ತು ನೀಡುವ ಜೊತೆಗೆ, ನಮ್ಮ ಗ್ಯಾರಂಟಿ

ಪುಟ 2ಕ್ಕೆ



## ತವರು ಜಿಲ್ಲೆ ಮೈಸೂರಿಗೆ ಸಿದ್ದರಾಮಯ್ಯ ಬಂಪರ್ ಕೊಡುಗೆ

**ಮೈಸೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ ತವರು ಜಿಲ್ಲೆ ಮೈಸೂರಿಗೆ ಈ ಬಾರಿಯ ಬಜೆಟ್‌ನಲ್ಲಿ ಬಂಪರ್ ಕೊಡುಗೆ ನೀಡಿದ್ದಾರೆ. ಇದುವರೆಗೆ 16 ಬಜೆಟ್ ಮಂಡಿಸಿದ್ದರೂ 17ನೇ ಬಜೆಟ್ ನಲ್ಲಿ ನೀಡಿರುವಷ್ಟು ಕೊಡುಗೆಗಳನ್ನು ಈ ಹಿಂದೆ ಸಿದ್ದರಾಮಯ್ಯ ತವರು ಜಿಲ್ಲೆಗೆ ನೀಡಿರಲಿಲ್ಲ. ಇದು ಮೈಸೂರಿನ ಜನರ ಖುಸಿಗೂ ಕಾರಣವಾಗಿದೆ.



ನಗರದ ಲಿಂಗಾಂಬುಧಿ ಸಸ್ಯ ತೋಟವನ್ನು ಸಮಗ್ರವಾಗಿ ಅಭಿವೃದ್ಧಿಪಡಿಸಲಾಗುವುದು. ಜೀವವೈವಿಧ್ಯದ ತಾಣವಾದ ಲಿಂಗಾಂಬುಧಿ ಕೆರೆಗೆ ಮಲಿನ ನೀರು ಸೇರ್ಪಡೆಯಾಗುತ್ತಿರುವುದು ತಲೆ ನೋವಾಗಿದೆ ಸಿಲ್ಕ್ ಪಾರ್ಕ್ ನಿರ್ಮಾಣ, ನಂಜನಗೂಡು ತಾಲ್ಲೂಕಿನ ತಾಂಡವಪುರದಲ್ಲಿ ಸಿಲ್ಕ್ ಪಾರ್ಕ್ ಸ್ಥಾಪನೆ ಬಗ್ಗೆ ಘೋಷಿಸಲಾಗಿದೆ.

### 2ನೇ ಐಟಿ ಸಿಟಿ

ಮೈಸೂರಿನಲ್ಲಿ ಮಾಹಿತಿ ತಂತ್ರಜ್ಞಾನ ಕ್ಷೇತ್ರಕ್ಕೆ ಪ್ರೋತ್ಸಾಹ ನೀಡುವುದರಿಂದ ಇಲ್ಲಿನ 100 ಕಂಪನಿಗಳಲ್ಲಿ 30 ಸಾವಿರಕ್ಕೂ ಹೆಚ್ಚು ಉದ್ಯೋಗಿಗಳು ಕಾರ್ಯನಿರ್ವಹಿಸುತ್ತಿದ್ದಾರೆ. ಬೆಂಗಳೂರಿನ ದಟ್ಟಣೆ ಕಡಿಮೆ ಮಾಡಲು ಹಾಗೂ ವಿಕೇಂದ್ರೀಕೃತ ಆರ್ಥಿಕತೆಯನ್ನು ಪ್ರೋತ್ಸಾಹಿಸಲು ಮೈಸೂರು ನಗರವನ್ನು ರಾಜ್ಯದ 2ನೇ ಐಟಿ ಸಿಟಿಯನ್ನಾಗಿ ಅಭಿವೃದ್ಧಿಪಡಿಸಲಾಗುವುದು ಎಂದು ಬಜೆಟ್ ನಲ್ಲಿ ಘೋಷಿಸಲಾಗಿದೆ. ಮೈಸೂರಿನಲ್ಲಿ ಏರೋಸ್ಪೇಸ್ ಕೈಗಾರಿಕೆಗಳನ್ನು ಉತ್ತೇಜಿಸಲು ಮೈಸೂರು ವಿಮಾನ ನಿಲ್ದಾಣದ ಹತ್ತಿರದಲ್ಲಿ ಏರೋಸ್ಪೇಸ್ ಪಾರ್ಕ್ ಅನ್ನು ಕೆಐಎಡಿಬಿಯಿಂದ ವತಿಯಿಂದ ಅಭಿವೃದ್ಧಿಪಡಿಸಲಾಗುವುದು. ಮೈಸೂರಿನಲ್ಲಿ ಉದ್ಯಮಿಗಳಿಗೆ ಇನ್ಕ್ಯುಬೇಸನ್ ಸೌಲಭ್ಯಗಳನ್ನು ಒದಗಿಸಲು ಕಿಯೋನಿಕ್ಸ್ ಸಂಸ್ಥೆಯ ಮೂಲಕ ಪ್ಲಗ್-ಅಂಡ್-ಪ್ಲೇ ಸೌಲಭ್ಯದ 'ಲೀಪ್ ಲ್ಯಾಬ್ಸ್ ಸ್ಥಾಪಿಸಲಾಗುವುದು ಎಂದು ತಿಳಿಸಲಾಗಿದೆ.



### ಜಯದೇವ ಆಸ್ಪತ್ರೆ ಉನ್ನತೀಕರಣ

**ಮೈಸೂರು:** ನಗರದ ಜಯದೇವ ಆಸ್ಪತ್ರೆ ಮೇಲ್ದರ್ಜೆಗೇರಿಸುವುದಾಗಿ ಬಜೆಟ್‌ನಲ್ಲಿ ಸಿದ್ದರಾಮಯ್ಯ ಘೋಷಿಸಿದ್ದಾರೆ. ಮೈಸೂರಿನ ಕೆ.ಆರ್.ಎಸ್. ರಸ್ತೆಯಲ್ಲಿರುವ 400 ಹಾಸಿಗೆಗಳ ಸಾಮರ್ಥ್ಯದ ಜಯದೇವ ಹೃದ್ರೋಗ ಆಸ್ಪತ್ರೆಯನ್ನು 600 ಹಾಸಿಗೆಗಳ ಸಾಮರ್ಥ್ಯದ ಆಸ್ಪತ್ರೆಯನ್ನಾಗಿ 180 ಕೋಟಿ ರೂ. ವೆಚ್ಚದಲ್ಲಿ ಮೇಲ್ದರ್ಜೆಗೇರಿಸಲಾಗುವುದು. ಇದರಿಂದ ಮೈಸೂರು ಜೊತೆಗೆ, ಮಂಡ್ಯ, ಚಾಮರಾಜನಗರ, ಹಾಸನ, ಕೊಡಗು ಜಿಲ್ಲೆಗಳ ರೋಗಿಗಳಿಗೆ

ಪುಟ 2ಕ್ಕೆ

### ಫಿಲ್ಮ್ ಸಿಟಿಗೆ 500 ಕೋಟಿ



ಮೈಸೂರಿನಲ್ಲಿ ಫಿಲ್ಮ್ ಸಿಟಿ ನಿರ್ಮಿಸಲು ಮೊದಲು 500 ಕೋಟಿಗೆ ಅನುಮೋದನೆ ನೀಡಲಾಗಿತ್ತು. ಫಿಲ್ಮ್ ಸಿಟಿ ಸೌಲಭ್ಯಗಳನ್ನು ಒಳಗೊಂಡಂತೆ ಪ್ರವಾಸಿಗರಿಗೆ ಅನುಕೂಲ ಆಗುವಂತೆ ಥೀಮ್ ಪಾರ್ಕ್, ಸ್ಟಾರ್ ಹೋಟೆಲ್ ಮತ್ತು ರೆಸ್ಟೋರೆಂಟ್‌ಗಳನ್ನು ಒಳಗೊಂಡು ಪಿಪಿಪಿ ಮಾದರಿಯಲ್ಲಿ ನಿರ್ಮಿಸಲು ಆಡಳಿತಾತ್ಮಕ

ಪುಟ 2ಕ್ಕೆ

ಸ್ಥಳೀಯ ಮೇಕೆ ತಳಿಗಳ ಉನ್ನತೀಕರಣಕ್ಕಾಗಿ ಮೈಸೂರಿನಲ್ಲಿ ಬೋಯರ್ ಮೇಕೆ ತಳಿ ಸಂವರ್ಧನಾ ಕೇಂದ್ರ ಸ್ಥಾಪಿಸಲಾಗುವುದು. ಪಿರಿಯಾಪಟ್ಟಣ ತಾಲ್ಲೂಕಿನ ಕಂಪಲಾಪುರದಲ್ಲಿ ಬಂಡೂರು ಕುರಿ ತಳಿ ಸಂವರ್ಧನಾ ಕೇಂದ್ರದ ಸಮಗ್ರ ಅಭಿವೃದ್ಧಿ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಲಾಗಿದೆ.

ಪುಟ 2ಕ್ಕೆ

## ಮದ್ಯ ಪ್ರಿಯರಿಗೆ ತೆರಿಗೆ ಬರೆ

*** ಅಬಕಾರಿಯಿಂದ 45 ಸಾವಿರ ಕೋಟಿ ರಾಜಸ್ವ ಸಂಗ್ರಹ ಗುರಿ**

**ಬೆಂಗಳೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ ಮದ್ಯ ಪ್ರಿಯರಿಗೆ ಶಾಕ್ ನೀಡಿದ್ದಾರೆ. ಮದ್ಯದ ಮೇಲೆ ವಿಧಿಸುವ ತೆರಿಗೆ ಸ್ವರೂಪವನ್ನು ಬದಲಾಯಿಸುವ ಮೂಲಕ ರಾಜ್ಯದ ರಾಜಸ್ವ ಸಂಗ್ರಹವನ್ನು ಗಣನೀಯವಾಗಿ ಏರಿಕೆ ಮಾಡಲು ನಿರ್ಧರಿಸಿದ್ದಾರೆ. ಅಬಕಾರಿಯಿಂದ 2026-27ರಲ್ಲಿ 45,000 ಕೋಟಿ ರೂ. ರಾಜಸ್ವ ಸಂಗ್ರಹಿಸುವ ಗುರಿ ಹೊಂದಲಾಗಿದೆ.

ಮದ್ಯದಲ್ಲಿರುವ ಆಲ್ಕೋಹಾಲ್ ಅಂಶ ಆಧರಿಸಿ ತೆರಿಗೆ ವಿಧಿಸಲಾಗುವುದು. ಎಕ್ಸ್-ಫ್ಯಾಕ್ಟರಿ ದರಪಟ್ಟಿಯ ಆಧಾರದ ಮೇಲೆ ಮದ್ಯದ ಬೆಲೆಯನ್ನು ಒಂದೇ ಬಾರಿಗೆ ಏರಿಸುವ ಬದಲು ಹಂತ ಹಂತವಾಗಿ ಹೆಚ್ಚಿಸಲು ಸರ್ಕಾರ ನಿರ್ಧರಿಸಿದೆ.

ಮದ್ಯಪಾನದ ದುಷ್ಪರಿಣಾಮಗಳು ಸಮಾಜದ ಮೇಲೆ ಉಂಟುಮಾಡುವ ಹಾನಿ





ಯನ್ನು ಗಮನದಲ್ಲಿಟ್ಟುಕೊಂಡು ಜಾಗತಿಕ ಮಟ್ಟದಲ್ಲಿ ಮದ್ಯದ ಅಂಶಗಳನ್ನು ಆಧರಿಸಿದ ತೆರಿಗೆ ಪದ್ಧತಿ ಜಾರಿ ಮಾಡಲಿದ್ದಾರೆ. ಏಪ್ರಿಲ್ 2026ರಿಂದ ಪಾನೀಯಗಳಲ್ಲಿ ಇರುವ ಮದ್ಯದ ಅಂಶವನ್ನು ಆಧಾರವಾಗಿಟ್ಟುಕೊಂಡು ಅಬಕಾರಿ ಸುಂಕ ವ್ಯವಸ್ಥೆಯನ್ನು ಜಾರಿಗೆ ತರಲು ತೀರ್ಮಾನಿಸಲಾಗಿದೆ. ಅಬಕಾರಿ ಸುಂಕ ಏಕರೂಪವಾಗಿರಲಿದೆ. ಮುಂದಿನ ಮೂರರಿಂದ ನಾಲ್ಕು ವರ್ಷಗಳಲ್ಲಿ, ಎಲ್ಲಾ ಪಾನೀಯಗಳ ಮೇಲೆ ಏಕರೂಪವಾಗಿ ಅನ್ವಯಿಸುವಂತೆ ಪ್ರತಿ ಲೀಟರ್‌ನಲ್ಲಿ ಮದ್ಯದ ಅಂಶವನ್ನು ಆಧರಿಸಿ ಅಬಕಾರಿ ಸುಂಕ ವಿಧಿಸುವ ಪ್ರಕ್ರಿಯೆಗೆ ಹಂತ ಹಂತವಾಗಿ ಪರಿವರ್ತನೆಗೊಳ್ಳಲಿದೆ ಎಂದು ಬಜೆಟ್ ನಲ್ಲಿ ಘೋಷಿಸಲಾಗಿದೆ.

ಮಾರುಕಟ್ಟೆ ಪರಿಗಣನೆ ಆಧಾರದ ಮೇಲೆ ಮದ್ಯ ಉತ್ಪನ್ನಗಳನ್ನು

ಪುಟ 2ಕ್ಕೆ

# ರಾಜ್ಯ ಬಜೆಟ್: ಮೇಕೆದಾಟು ಯೋಜನೆಗೆ ಪರಿಷ್ಕೃತ ಡಿಪಿಆರ್ ಸಿದ್ಧಪಡಿಸುವ ಘೋಷಣೆ


## ರೈತ ಸಮುದಾಯದಲ್ಲಿ ನಿರಾಸೆ । ಸಾಮಾನ್ಯ ಜನರಲ್ಲಿ ಮಿಶ್ರ ಪ್ರತಿಕ್ರಿಯೆ

ರಾಮನಗರ: ಮೇಕೆದಾಟು ಯೋಜನೆ ಅನುಷ್ಠಾನಕ್ಕೆ ಆಗ್ರಹಿಸುತ್ತಿದ್ದ ಜಿಲ್ಲೆಯ ಜನತೆಗೆ ಸರ್ಕಾರ ತನ್ನ ಬದ್ಧತೆಯನ್ನು ಪ್ರದರ್ಶಿಸಲು ಮತ್ತೊಮ್ಮೆ ಯತ್ನಿಸುತ್ತಿದೆ. ಯೋಜನೆಯ ಪರಿಷ್ಕೃತ ವಿಸ್ತೃತ ಯೋಜನಾ ವರದಿ (ಡಿ.ಪಿ.ಆರ್) ಸಿದ್ಧ ಪಡಿಸಿ, ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ಶುಕ್ರವಾರ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಮಂಡಿಸಿದ 2026–27ನೇ ಸಾಲಿನ ಬಜೆಟ್‌ನಲ್ಲಿ ಘೋಷಿಸಿದ್ದಾರೆ.

ಮೇಕೆದಾಟು ಯೋಜನೆಗೆ ಸಂಬಂಧಿಸಿದಂತೆ ತಮಿಳುನಾಡು ರಾಜ್ಯವು ಸರ್ವೋಚ್ಚ ನ್ಯಾಯಲಯದಲ್ಲಿ ಸಲ್ಲಿಸಿದ್ದ ತಕರಾರು ಅರ್ಜಿಗಳು ವಜಾಗೊಂಡಿವೆ. ಇದು ಕರ್ನಾಟಕದ ಪಾಲಿಗೆ ಮಹತ್ವದ ಕಾನೂನು ಜಯವಾಗಿದೆ ಎಂದು ಬಜೆಟ್‌ನಲ್ಲಿ ತಿಳಿಸಿದ್ದು, ಯೋಜನೆಗೆ ಪರಿಷ್ಕೃತ ಡಿ.ಪಿ.ಆರ್. ತಯಾರಿಸಲು ಬಜೆಟ್‌ನಲ್ಲಿ ಅವಕಾಶ ಮಾಡಿಕೊಂಡಿರುವುದಾಗಿ ಅವರು ತಿಳಿಸಿದ್ದಾರೆ. ಪರಿಷ್ಕೃತ ಡಿ.ಪಿ.ಆರ್ ಜೊತೆಗೆ ಮೇಕೆದಾಟು ಸಮತೋಲನ ಜಲಾಶಯ ನಿರ್ಮಾಣ ಸಂಬಂಧ ಮತ್ತು ಅರಣ್ಯ ಪ್ರದೇಶ ಬಳಕೆಗೆ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದು ಮುಖ್ಯ ಮಂತ್ರಿಗಳು ತಿಳಿಸಿದ್ದಾರೆ.

### ಶ್ರಮಿಕ ಶಾಲೆ

**ಕಾರ್ಮಿಕ ಇಲಾಖೆ ವತಿಯಿಂದ ರಾಮನಗರ, ಚನ್ನಪಟ್ಟಣ, ಮಾಗಡಿ, ಕನಕಪುರ ಕ್ಷೇತ್ರಗಳಲ್ಲಿ ಶ್ರಮಿಕ ವಸತಿ ಶಾಲೆಗಳ ನಿರ್ಮಾಣಕ್ಕೆ ಅನುಕೂಲವಾಗುವಂತೆ ಬಜೆಟ್‌ನಲ್ಲಿ ಅವಕಾಶ ಮಾಡಿಕೊಳ್ಳಲಾಗಿದೆ.**



> ರಾಮನಗರದಲ್ಲಿ ಸಿಲ್ಕ್‌ಪಾರ್ಕ್ ನಿರ್ಮಾಣ ಮಾಡುವ ಸರ್ಕಾರದ ಉದ್ದೇಶ ಸ್ವಾಗತ. ಆದರೆ ,ಅವೊಮ ಬೆಲೆ ಕುಸಿತದ ಹಿನ್ನೆಲೆಯಲ್ಲಿ ಮಾವು ಬೆಳೆಗಾರರಿಗೆ ಸರ್ಕಾರ ಬಜೆಟ್‌ನಲ್ಲಿ ಯಾವುದೇ ಭರವಸೆಯನ್ನು ಮೂಡಿಸಿಲ್ಲ. ಮೇಕೆದಾಟು ಯೋಜನೆ ನಿರ್ಮಾಣ ವಿಚಾರದಲ್ಲಿ ಸರ್ಕಾರ ಅನುದಾನವನ್ನು ಘೋಷಿಸಿ ತ್ವರಿತಗತಿಯಲ್ಲಿ ಯೋಜನೆಯನ್ನು ಅನುಷ್ಠಾನಗೊಳಿಸಲು ಕಾಳಜಿ ತೋರಬಹುದಿತ್ತು. ರೈತರಿಗೆ ವೈಜ್ಞಾನಿಕ ಮಾರ್ಗದರ್ಶನದ ಜೊತೆಗೆ ವೈಜ್ಞಾನಿಕ ಬೆಲೆಯನ್ನು ನಿಗಧಿಪಡಿಸಬೇಕಿತ್ತು.
>
> **ಬೈರೇಗೌಡ** ಜಿಲ್ಲಾಧ್ಯಕ್ಷ, ಕರ್ನಾಟಕ ರಾಜ್ಯ ರೈತ ಸಂಘ

### ಮಹತ್ತರವಾದ್ದದ್ದು ಏನೂ ಇಲ್ಲ!

ರಾಮನಗರ ಜಿಲ್ಲೆಯ ಹೆಸರನ್ನು ಬೆಂಗಳೂರು ದಕ್ಷಿಣ ಜಿಲ್ಲೆ ಎಂದು ಪುನರ್‌ನಾಮಕರಣ ಮಾಡಿದ ಸರ್ಕಾರ ಹೆಸರಿಗೆ ತಕ್ಕಂತೆ ಮೂಲ ಸೌಕರ್ಯಗಳನ್ನು ಹೆಚ್ಚಿಸಲು ಅನುದಾನ ನೀಡುವ ಬಗ್ಗೆ, ಮಹತ್ತರವಾದ ಯೋಜನೆಯೊಂದನ್ನು ಘೋಷಿಸುವ ನಿರೀಕ್ಷೆ ಇತ್ತು, ಆದರೆ ಸರ್ಕಾರ ನಿರೀಕ್ಷೆಯನ್ನು ಹುಸಿ ಮಾಡಿದೆ ಎಂದು ಸಾಮಾನ್ಯ ನಾಗರೀಕರು ಪ್ರತಿಕ್ರಿಯಿಸಿದ್ದಾರೆ.

ತ್ರಿವಿಧ ದಾಸೋಹಿ ಎಂದೇ ಖ್ಯಾತರಾಗಿದ್ದ ಶಿವಕುಮಾರಸ್ವಾಮೀಜಿ ಮತ್ತು ಆದಿಚುಂಚನಗಿರಿ ಮಠಾಧೀಶರಾಗಿದ್ದ ಬಾಲಗಂಗಾಧರನಾಥ ಸ್ವಾಮೀಜಿಯವರ ಸ್ಮರಣಾರ್ಥ ಘೋಷಣೆಯಾಗಿದ್ದ ಯೋಜನೆಗಳು ಇನ್ನು ಪೂರ್ಣಗೊಂಡಿಲ್ಲ. ಈ ವಿಚಾರದಲ್ಲಿ ಹೆಚ್ಚು ಕಾಳಜಿಯನ್ನು ಸರ್ಕಾರ ತೋರಿಸುತ್ತಿಲ್ಲ. ಈಗ ಸಾಲು ಮರದ ತಿಮ್ಮಕರ ಸ್ಮರಣಾರ್ಥ ಸ್ಮಾರಕ ನಿರ್ಮಾಣ ಮಾಡಲು ಘೋಷಿಸಿದೆ. ತಿಮ್ಮಕ್ಕರ ಸ್ಮಾರಕ ನಿರ್ಮಣ ಯೋಜನೆಯೂ ಆಮೆಗತಿಯಲ್ಲಿ ಸಾಗುವುದು ಬೇಡ ಎಂದು ನಾಗರೀಕರು ಸರ್ಕಾರಕ್ಕೆ ತಿಳಿ ಹೇಳಿದ್ದಾರೆ.

ಕೆಲವು ನಾಗರೀಕರು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿ, ಗ್ಯಾರಂಟಿ ಯೋಜನೆಗಳ ಮೂಲಕ ಫ್ರೀ ಸವಲತ್ತುಗಳನ್ನು ಕೊಡುವ ಬದಲಿಗೆ ಆರ್ಥಿಕ ಸಂಪನ್ಮೂಲಗಳನ್ನು ಗಳಿಸಲು ಕುಟುಂಬಗಳಿಗೆ ಅವಕಾಶಗಳನ್ನು ಕೊಡುವ ಯೋಜನೆಗಳನ್ನು ರೂಪಿಸಬಹುದಿತ್ತು ಎಂದು ತಿಳಿಸಿದ್ದಾರೆ.

ರಾಮನಗರದಲ್ಲೂ ನಾಯಿಗಳ ಹಾವಳಿ ಹೆಚ್ಚಾಗಿದೆ. ಬೀದಿ ನಾಯಿಗಳ ವಿಚಾರದಲ್ಲಿ ಸರ್ಕಾರ ಸಂತಾನಹರಣದ ಮೂಲಕ ನಿಯಂತ್ರಣವನ್ನು ವೈಜ್ಞಾನಿಕ ಹಾಗೂ ಪರಿಣಾಮಕಾರಿ ರೀತಿಯಲ್ಲಿ ಜಾರಿಗೆ ತರಲು ಉದ್ದೇಶಿಸಿದೆ. ಈ ವಿಚಾರದಲ್ಲಿ ಪಶುವೈದ್ಯರು ಮತ್ತು ಪಶುವೈದ್ಯಕೀಯ ವಿದ್ಯರ್ಥಿಗಳಿಗೆ ಉನ್ನತ ಮಟ್ಟದ ತಾಂತ್ರಿಕ ತರಬೇತಿ ನೀಡಲು ಸರ್ಕಾರ ಬಜೆಟ್ ಮೂಲಕ ತಿಳಿಸಿದೆ. ಇದು ಸ್ವಾಗತಾರ್ಹ ವಿಚಾರ. ಸರ್ಕಾರ ತಕ್ಷಣವೇ ತರಬೇತಿ ಆರಂಭಿಸಬೇಕು ಎಂದು ಸಾಮಾನ್ಯ ನಾಗರೀಕರು ಆಗ್ರಹಿಸಿದ್ದಾರೆ.

### ಕೆರೆ ತುಂಬಿಸುವ ಯೋಜನೆ

ರಾಮನಗರ ಹಾಗೂ ಕನಕಪುರ ತಾಲ್ಲೂಕುಗಳ 46 ಕೆರೆಗಳಲ್ಲಿ ನೀರು ತುಂಬಿಸುವ ಯೋಜನೆಗೆ ಬಜೆಟ್ ಮೂಲಕ ಸಿದ್ದರಾಮಯ್ಯ ಸರ್ಕಾರ ಆಡಳಿತಾತ್ಮಕ ಅನುಮೋದನೆ ನೀಡಿದೆ. ಕನಕಪುರ ತಾಲ್ಲೂಕು ಹೊಸದೊಡ್ಡಿ ಗ್ರಾಮದಲ್ಲಿ ಚೆಕ್‌ಡ್ಯಾಂ ನಿರ್ಮಾಣ, ಮಾಗಡಿ ತಾಲ್ಲೂಕಿನ ಗೌರಮ್ಮನ ಕೆರೆ ಹಳ್ಳಕ್ಕೆ ಡ್ರೈನ್ ನಿರ್ಮಾಣಕ್ಕೆ ಸರ್ಕಾರ ಬಜೆಟ್‌ನಲ್ಲಿ ಅವಕಾಶ ಮಾಡಿಕೊಂಡಿದೆ. ಜಲ ಸಂಪನ್ಮೂಲ ಇಲಾಖೆ ವತಿಯಿಂದ ಕನಕಪುರ ಪಟ್ಟಣದಲ್ಲಿ ಅರ್ಕಾವತಿ ನದಿ ತೀರ ಅಭಿವೃದ್ಧಿ ಮಾಡುವುದಾಗಿ ಸರ್ಕಾರ ತಿಳಿಸಿದೆ.

### ತಿಮ್ಮಕ್ಕರ ಸ್ಮಾರಕ ನಿರ್ಮಾಣ

ಸಾಲು ಮರದ ತಿಮ್ಮಕ್ಕ, ವೃಕ್ಷಮಾತೆ ಎಂದು ವಿಶ್ವಮಾತಾಗಿದ್ದ ಮಾಗಡಿ ತಾಲ್ಲೂಕಿನ ನಿವಾಸಿ ತಿಮ್ಮಕ್ಕರ ಸ್ಮರಣಾರ್ಥ ಸರ್ಕಾರ ಹುಲಿಕಲ್ – ಕುದುರು ಬಳಿ ಸ್ಮಾರಕ ನಿರ್ಮಾಣ ಮಾಡುವುದಾಗಿ ಬಜೆಟ್‌ನಲ್ಲಿ ತಿಳಿಸಲಾಗಿದೆ. ಮಾಗಡಿ ತಾಲ್ಲೂಕಿನವರೇ ಆದ ದಲಿತ ಕವಿ ಸಿದ್ದಲಿಂಗಯ್ಯ ಹೆಸರಿನಲ್ಲಿ ಟ್ರಸ್ಟ್ ರಚಿಸಲು ಕ್ರಮ ಕೈಗೊಳ್ಳುವುದಾಗಿ ತಿಳಿಸಲಾಗಿದೆ.

### ವರ್ತುಲ ರಸ್ತೆ

ಬೆಂಗಳೂರು ನಗರದ ದಟ್ಟಣೆಯನ್ನ್ನೆ ಕಡಿಮೆ ಮಾಡಲು ನೆಲಮಂಗಲ – ತಾವರೆಕೆರೆ – ಬಿಡದಿ ಮಧ್ಯಂತರ ವರ್ತುಲ ರಸ್ತೆಯನ್ನು ಬಿಎಂಆರ್‌ಡಿಎ ಹಾಗೂ ಸ್ಥಳೀಯ ಯೋಜನಾ ಪ್ರಾಧಿಕಾರಗಳ ಆರ್ಥಿಕ ಸಂಪನ್ಮೂಲಗಳನ್ನು ಕ್ರೂಢೀಕರಿಸಿ ನಿರ್ಮಿಸಲು ಸರ್ಕಾರ ಬಜೆಟ್ ಮೂಲಕ ಉದ್ದೇಶಿಸಿದೆ. ಲೋಕೋಪಯೋಗಿ ಇಲಾಖೆ ವತಿಯಿಂದ ಮಾಗಡಿ – ಹುಣಸನಹಳ್ಳಿ (ತಮಿಳುನಾಡು ಗಡಿ) (ರಾಮನಗರ , ಕನಕಪುರ ಮಾರ್ಗ ) 95 ಕಿ.ಮೀ ಉದ್ದದ ರಸ್ತೆಯನ್ನು ನಿರ್ಮಿಸಲು ಸಹ ಬಜೆಟ್‌ನಲ್ಲಿ ತಿಳಿಸಲಾಗಿದೆ.

**ಸಿಲ್ಕ್ ಪಾರ್ಕ್ ಸ್ಥಾಪನೆ**

ರೇಷ್ಮೆನಾಡು ಅಂತಲೇ ಖ್ಯಾತಿ ಪಡೆದಿರುವ ಜಿಲ್ಲೆಯಲ್ಲಿ ಸರ್ಕಾರ ಸಿಲ್ಕ್ ಪಾರ್ಕ್ ಸ್ಥಾಪಿಸಲು ಉದ್ದೇಶಿಸಿದೆ. ಈ ವಿಚಾರ ಬಜೆಟ್‌ನಲ್ಲಿ ಪ್ರಸ್ತಾಪವಾ ಗಿದೆ. ರಾಮನಗರದ ಜೊತೆಗೆ ಶಿಡ್ಲಘಟ್ಟ, ಹಾವೇರಿ, ತಾಂಡವಪುರ (ಮೈಸೂರು) ಮತ್ತು ಕಲಬುರ್ಗಿಯಲ್ಲಿ ಸಿಲ್ಕ್ ಪಾರ್ಕ್‌ಗಳನ್ನು ಸ್ಥಾಪಿಸುವುದಾಗಿ ತಿಳಿಸಿದ್ದಾರೆ. ಸಿಲ್ಕ್ ಪಾರ್ಕ್‌ನ ಉದ್ದೇಶವೇನು, ಏನೇನು ವ್ಯವಸ್ಥೆ ಇರಲಿದೆ ಎಂಬಿತ್ಯಾದಿ ವಿಚಾರಗಳು ಮುಂದಿನ ದಿನಗಳಲ್ಲಿ ಸರ್ಕಾರ ತಿಳಿಸಲಿದೆ. ರೇಷ್ಮೆ ಇಲಾಖೆಯ ಆಯ್ದ ಕ್ಷೇತ್ರಗಳಲ್ಲಿ ಲಭ್ಯವಿರುವ ಜಮೀನಿನಲ್ಲಿ ರೈತ ಉದ್ಯಮಿ ಹಾಗೂ ರೈತ ಉತ್ಪಾದಕ ಸಂಸ್ಥೆಗಳ ಸಹಯೋಗದೊಂದಿಗೆ ಚಾಕಿ ಸಾಕಾಣಿಕೆ ಕೇಂದ್ರಗಳನ್ನು ಸ್ಥಾಪಿಸಲು ಸರ್ಕಾರ ಉದ್ದೇಶಿಸಿದೆ.

### ಅಪಘಾತ ಆರೈಕೆ ಸೇವೆ

ಜಿಲ್ಲಾ ಮತ್ತು ತಾಲೂಕು ಆಸ್ಪತ್ರೆಗಳಲ್ಲಿ ಸಮಗ್ರ ಅಪಘಾತ ಆರೈಕೆ ಸೇವೆಗಳನ್ನು ಒದಗಿಸಲು ತುರ್ತು ಚಿಕಿತ್ಸಾ ವಿಭಾಗ, ಶಸ್ತ್ರ ಚಿಕಿತ್ಸಾ ಕೊಠಡಿ ಮತ್ತು ಐಸಿಯುಗಳಿಗೆ ವೈದ್ಯಕೀಯ ಉಪಕರಣಗಳು ಮತ್ತು ಸಾಧನಗಳನ್ನು ಹಂತ ಹಂತವಾಗಿ ಪೂರೈಸಿ ಮೇಲ್ದರ್ಜೆಗೇರಿಸಲು ತಿಳಿಸಿದೆ.

### ನ್ಯಾಯಾಲಯ ಸಂಕೀರ್ಣ

ಜಿಲ್ಲಾ ಕೇಂದ್ರ ರಾಮನಗರದಲ್ಲಿ ಜಿಲ್ಲಾ ನ್ಯಾಯಾಲಯ ಸಂಕೀರ್ಣ ನಿರ್ಮಾಣಕ್ಕೆ ಅವಕಾಶ ಮಾಡಿಕೊಂಡಿರುವ ಸರ್ಕಾರ ಮೊತ್ತವನ್ನು ಕಾಣಿಸಿಲ್ಲ. ಕನಕಪುರದಲ್ಲಿ 2 ಕೋಟಿ ರು. ವೆಚ್ಚದಲ್ಲಿ ತಾಲೂಕು ಕ್ರೀಡಾಂಗಣ ನಿರ್ಮಾಣಕ್ಕೆ ಬಜೆಟ್ ಮೂಲಕ ಘೋಷಿಸಲಾಗಿದೆ.

---

**ಮೊದಲ ಪುಟದಿಂದ**

## ಸಿದ್ದರಾಮಯ್ಯ ಬಂಪರ್ ಕೊಡುಗೆ

ಪ್ರಸಕ್ತ ಸಾಲಿನಲ್ಲಿ ಮೈಸೂರಿನ ಬಂಬೂಬಜಾರ್‌ನಲ್ಲಿರುವ ಕೇಂದ್ರಗಳಲ್ಲಿ ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ವಾಣಿಜ್ಯ ಸಂಕೀರ್ಣ ನಿರ್ಮಾಣ ಮಾಡಲಾಗುವುದು ಎಂದು ತಿಳಿಸಲಾಗಿದೆ. ನಗರದ ನರಸಿಂಹರಾಜ ಕ್ಷೇತ್ರದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಸ್ಥಾಪಿಸಲಾಗುವುದು. ಮೈಸೂರು ನಗರದಲ್ಲಿ ಆಧುನಿಕ ಲ್ಯಾಂಡ್ರಿ ನಿರ್ಮಿಸಿ ಮಡಿವಾಳ ಸಮಾಜದವರಿಗೆ ಅನುಕೂಲ ಕಲ್ಪಿಸಲಾಗುವುದು. ಬೆಂಗಳೂರು ಮತ್ತು ಮೈಸೂರು ಧೋಬಿಘಾಟ್‌ಗಳಲ್ಲಿ ಮಡಿವಾಳ ಸಮಾಜದವರಿಗೆ ವಾಷಿಂಗ್ ಮಷಿನ್, ಡ್ರೈಯರ್ ಮತ್ತು ಐರನಿಂಗ್ ಮೆಷಿನ್ ಮೊದಲಾದ ಸಾಮಗ್ರಿಗಳನ್ನು ಒಳಗೊಂಡಂತೆ ತಲಾ 75 ಲಕ್ಷ ವೆಚ್ಚದಲ್ಲಿ ಆಧುನಿಕ ಲ್ಯಾಂಡ್ರಿ ಸ್ಥಾಪನೆ ಮಾಡಲಾಗುವುದು ಎಂದು ತಿಳಿಸಲಾಗಿದೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಉದ್ಯೋಗಸ್ಥ ಮಹಿಳೆಯರಿಗೆ ತಲಾ 50 ಸಂಖ್ಯಾಬಲದ 10 ವಸತಿನಿಲಯಗಳನ್ನು ಬೆಂಗಳೂರು, ಮೈಸೂರು, ಹುಬ್ಬಳ್ಳಿ–ಧಾರವಾಡ, ಮಂಗಳೂರು, ಬೆಳಗಾವಿ ಮತ್ತು ಕಲಬುರಗಿಯಲ್ಲಿ ಪ್ರಾರಂಭಿಸಲಾಗುವುದು ಎಂದು ತಿಳಿಸಲಾಗಿದೆ. ಇದರಲ್ಲಿ ಮೈಸೂರಿಗೆ ಎಷ್ಟು ದೊರೆಯುತ್ತದೆ ಎಂಬುದು ಸ್ಪಷ್ಟವಾಗಿಲ್ಲ. ಮೈಸೂರಿನಲ್ಲಿ ಷ್ನೈಡರ್ ಎಲೆಕ್ಟ್ರಿಕ್ ಯೂತ್ ಇಂಪ್ಯಾಕ್ಟ್ ಕೇಂದ್ರ ಸ್ಥಾಪನೆಗೆ ಬಗ್ಗೆ 2026–27ನೇ ಸಾಲಿನ ರಾಜ್ಯ ಬಜೆಟ್‌ನಲ್ಲಿ ಘೋಷಿಸಲಾಗಿದೆ. 16 ಕೋಟಿ ವೆಚ್ಚದಲ್ಲಿ ಈ ಕೇಂದ್ರ ಸ್ಥಾಪನೆಗೆ ಉದ್ದೇಶಿಸಿದೆ. ಇದರಿಂದ ಪ್ರತಿ ವರ್ಷ ಒಟ್ಟಾರೆ 2 ಸಾವಿರ ವಿದ್ಯಾರ್ಥಿಗಳಿಗೆ ತರಬೇತಿ ನೀಡಲು ಮತ್ತು ಉದ್ಯೋಗವಕಾಶ ಕಲ್ಪಿಸಲು ನೆರವಾಗಲಿದೆ ಎಂದು ತಿಳಿಸಲಾಗಿದೆ. ಮೈಸೂರಿನಲ್ಲಿ ಪ್ಯಾರಾ ಮೆಡಿಕಲ್ ಕೋರ್ಸ್ ಆರಂಭಿಸಲಾಗುವುದು ಎಂದು ಪ್ರಕಟಿಸಲಾಗಿದೆ.

ನಗರದ ಸಿದ್ಧಾರ್ಥನಗರದಲ್ಲಿರುವ ಚಾಮರಾಜೇಂದ್ರ ದೃಶ್ಯ ಕಲಾ ಕಾಲೇಜಿನ (ಕಾವಾ) ಸಂಸ್ಥೆಯ ಆವರಣದಲ್ಲಿ ಸುಸಜ್ಜಿತ ಕಲಾ ಗ್ಯಾಲರಿ ಸಭಾಂಗಣ ನಿರ್ಮಾಣ, ಲ್ಯಾಂಡ್‌ಸ್ಕೇಪಿಂಗ್ ಶಿಲ್ಪಕಲಾ ಕೃತಿಗಳ ಪೆಡೆಸ್ಟಲ್‌ಗಳ ನಿರ್ಮಾಣ ಮೂಲಸೌಕರ್ಯ ಕಲ್ಪಿಸಲು 2 ಕೋಟಿ ಒದಗಿಸಲಾಗುವುದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಮೈಸೂರಿನ ರಂಗನಿರಂತರ ಸಂಸ್ಥೆಗೆ ಅನುದಾನ ನೀಡುವ ಮೂಲಕ ವಿವಿಧ ಸಾಂಸ್ಕೃತಿಕ ಚಟುವಟಿಕೆಗಳಿಗೆ ಪ್ರೋತ್ಸಾಹ ಕೊಡಲಾಗುವುದು. ಸೈಕ್ಲಿಂಗ್ ಕ್ರೀಡೆಗೆ ಉತ್ತೇಜನ ನೀಡಲು ಮೈಸೂರಿನ ದಟ್ಟಗಳ್ಳಿಯಲ್ಲಿ ಗುರುತಿಸಲಾದ ಜಾಗದಲ್ಲಿ ಆಧುನಿಕ ಸೈಕ್ಲಿಂಗ್ ವೆಲೋಡ್ರೋಮ್ ನಿರ್ಮಿಸಲಾಗುವುದು. ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಸಮಗ್ರ ಮೂಲಸೌಕರ್ಯ ಅಭಿವೃದ್ಧಿಗೆ 10 ಕೋಟಿ. ವರುಣ ಕೆರೆಯ ಪುನರುಜ್ಜೀವನ ಮತ್ತು ಸಂರಕ್ಷಣೆ. ವರುಣ ವಿಧಾನಸಭಾ ಕ್ಷೇತ್ರದಲ್ಲಿ ಸರಣಿ ಚೆಕ್ ಡ್ಯಾಂ ನಿರ್ಮಾಣಕ್ಕೆ ಯೋಜಿಸಲಾಗಿದೆ. ವರುಣ ಕ್ಷೇತ್ರದ ಗ್ರಾಮಗಳ ಕೆರೆಗಳಿಗೆ ಏತ ನೀರಾವರಿ ಕಾಮಗಾರಿ. ಮೈಸೂರು ತಾಲ್ಲೂಕಿನ ಬಿದ್ರಹಳ್ಳಿಹುಂಡಿ ಬಳಿ ಕಾಲುವೆ ಆಧುನೀಕರಣ. ಕಬಿನಿ ಬಲದಂಡೆ ನಾಲೆಯ ವಿತರಣಾ ನಾಲೆ ಸಂ.35ರ ಆಧುನೀಕರಣ. ತಿ. ನರಸೀಪುರ ತಾಲ್ಲೂಕಿನ ನಂಜಾಪುರ ಏತ ನೀರಾವರಿ ಯೋಜನೆ. ಉದಯಗಿರಿಯಲ್ಲಿ ದಕ್ಷಿಣ ಪೊಲೀಸ್ ಠಾಣೆ ಹೊಸದಾಗಿ ಆರಂಭಿಸಲಾಗುವುದು. ವರುಣ, ಎಚ್.ಡಿ. ಕೋಟೆ, ಪಿರಿಯಾಪಟ್ಟಣ, ನಂಜನಗೂಡು, ಕೆ.ಆರ್. ನಗರ ವಿಧಾನಸಭಾ ಕ್ಷೇತ್ರದಲ್ಲಿ ಶ್ರಮಿಕ ವಸತಿ ಶಾಲೆ ನಿರ್ಮಾಣ ಮಾಡಲಾಗುವುದು ಎಂದು ಘೋಷಿಸಲಾಗಿದೆ.

### ಶೇ.11.37 ಪಾಲು ಗ್ಯಾರಂಟಿಗೆ

ಇತರೆ ವಲಯಗಳು 1,72,757 ಕೋಟಿ ರೂ. ಅನುದಾನ ಮೀಸಲಿಡಲಾಗಿದ್ದು ಇದರಲ್ಲಿ ಯಾವುದಕ್ಕೆ ಎಷ್ಟು ಹಣ ಹಂಚಿಕೆ ಮಾಡಲಾಗಿದೆ ಎನ್ನುವುದು ಸ್ಪಷ್ಟವಾಗಿ ತಿಳಿದು ಬಂದಿಲ್ಲ. ರಾಜ್ಯ ಸರ್ಕಾರ ಗ್ಯಾರಂಟಿ ಯೋಜನೆಗಳಿಗೆ ಪರಿಶಿಷ್ಟರ ಕಲ್ಯಾಣದ ನಿಧಿ ಬಳಸುತ್ತಿರುವುದಕ್ಕೆ ಈಗಾಗಲೇ ಆ ಸಮಾಜದ ನಾಯಕರು ಟೀಕೆ ವ್ಯಕ್ತಪಡಿಸುತ್ತಿದ್ದಾರೆ. 2023–24ರಲ್ಲಿ 11,144 ಕೋಟಿ ರೂ., 2024–25ರಲ್ಲಿ 14,282 ಕೋಟಿ ರೂ. ಹಾಗೂ 2025– 26ರಲ್ಲಿ ಈತನಕ 13,433 ಕೋಟಿ ರೂ. ಎಸ್ಸಿಎಸ್ಪಿ, ಟಿಎಸ್ಪಿ ಅನುದಾನವನ್ನು ಗ್ಯಾರಂಟಿ ಯೋಜನೆಗಳಿಗೆ ಸರ್ಕಾರ ಬಳಸಿದೆ. 3 ವರ್ಷಗಳಲ್ಲಿ ಎಸ್ಸಿಎಸ್ಪಿ, ಟಿಎಸ್ಪಿಗೆ ಮೀಸಲಿಟ್ಟಿದ್ದ 39,859 ಕೋಟಿ ಅನುದಾನ ಅನ್ಯ ಉದ್ದೇಶಕ್ಕೆ ಬಳಸಿದೆ.

### ಮದ್ಯ ಪ್ರಿಯರಿಗೆ ತೆರಿಗೆ ಬರೆ

ಸ್ಲ್ಯಾಬ್‌ಗಳಲ್ಲಿ ಇರಿಸುವ ಅಧಿಕಾರವನ್ನು ಸಂಪೂರ್ಣವಾಗಿ ಉತ್ಪಾದಕರಿಗೆ ನೀಡಲಾಗುವುದು. ಮದ್ಯ ದರ ನಿಗದಿ ಸ್ಲ್ಯಾಬ್‌ಗಳನ್ನು ತರ್ಕಬದ್ಧಗೊಳಿಸುವ ಸಲುವಾಗಿ ಪ್ರಸ್ತುತ ಇರುವ 16 ಸ್ಲ್ಯಾಬ್‌ಗಳನ್ನು 8 ಸ್ಲ್ಯಾಬ್‌ಗಳಿಗೆ ಇಳಿಸಲು ತೀರ್ಮಾನಿಸಲಾಗಿದೆ.

2025–26ನೇ ಸಾಲಿನಲ್ಲಿ ಫೆಬ್ರವರಿ ತಿಂಗಳ ಅಂತ್ಯದವರೆಗೆ ಮದ್ಯದಿಂದ ಒಟ್ಟು 36,492 ಕೋಟಿ ರೂ. ಸಂಗ್ರಹಿಸಿದೆ. ಕಳೆದ ಸಾಲಿಗೆ ಹೋಲಿಸಿದರೆ ಶೇ.12.7ರಷ್ಟು ಬೆಳವಣಿಗೆಯಾಗಿದೆ. 2026–27 ಸಾಲಿಗೆ 45,000 ಕೋಟಿ ರೂ. ಸಂಗ್ರಹದ ಗುರಿ ಇಡಲಾಗಿದೆ. ತೆರಿಗೆ ಸೋರಿಕೆಯನ್ನು ತಡೆಯಲು ತಂತ್ರಜ್ಞಾನ ಆಧಾರಿತ ಬ್ಲಾಕ್‌ಚೈನ್ ಡಿಜಿಟಲ್‌ಕಿಂಗ್ ವ್ಯವಸ್ಥೆಗಳನ್ನು ಜಾರಿಗೆ ತರಲಾಗುತ್ತದೆ. ಮದ್ಯ ರವಾನೆಗೆ ಬೆಂಗಾವಲು ವ್ಯವಸ್ಥೆಯ ಬದಲಿಗೆ ಜಿಯೋ–ಫೆನ್ಸ್ ಇ–ಲಾಕ್ ವ್ಯವಸ್ಥೆಯನ್ನು ಅಳವಡಿಸಲಾಗುತ್ತದೆ. ಈ ಕ್ರಮಗಳು ಮೇಲ್ವಿಚಾರಣೆಗೆ ಅವಕಾಶ ಕಲ್ಪಿಸುವ ಮೂಲಕ ಪಾರದರ್ಶಕತೆಯನ್ನು ಹೆಚ್ಚಿಸಲಿದೆ ಎಂದು ಘೋಷಿಸಿದ್ದಾರೆ.

### ಫಿಲ್ಮ್ ಸಿಟಿಗೆ 500 ಕೋಟಿ

**ಅನುಮೋದನೆ ನೀಡಿ ವ್ಯವಹಾರ ವಹಿವಾಟುದಾರರನ್ನು ನೇಮಿಸಲಾಗಿದೆ ಎಂದು ತಿಳಿಸಲಾಗಿದೆ. ಖ್ಯಾತ ಚಲನಚಿತ್ರ ನಿರ್ದೇಶಕ ದಿ.ಪುಟ್ಟಣ್ಣ ಕಣಗಾಲ್ ನಿವಾಸವನ್ನು ವಸ್ತುಸಂಗ್ರಹಾಲಯವನ್ನಾಗಿ ರೂಪಿಸಲಾಗುವುದು. ಮಹಾತ್ಮ ಗಾಂಧೀಜಿ ಭೇಟಿ ಕೊಟ್ಟ ಸ್ಮರಣಾರ್ಥ ಬದನವಾಳು ಖಾದಿ ಗ್ರಾಮೋದ್ಯೋಗ ಕೇಂದ್ರದಲ್ಲಿ ಗಾಂಧಿ ಸ್ಮಾರಕ ಸ್ತಂಭ ನಿರ್ಮಾಣ. ಮೈಸೂರು ನಗರದಲ್ಲಿ ಪ್ರಾಯೋಗಿಕವಾಗಿ ಇ–ಕೋರ್ಟ್ ಸ್ಥಾಪನೆ ಬಗ್ಗೆ ಪ್ರಕಟಿಸಲಾಗಿದೆ.**

### ಜಯದೇವ ಆಸ್ಪತ್ರೆ ಉನ್ನತೀಕರಣ

**ಅನುಕೂಲ ಆಗಲಿದೆ. ಪ್ರಸ್ತುತ, ಈ ಆಸ್ಪತ್ರೆಗೆ ಬರುತ್ತಿರುವ ರೋಗಿಗಳ ಸಂಖ್ಯೆ ದಿನೇ ದಿನೇ ಹೆಚ್ಚುತ್ತಿರುವುದರಿಂದಾಗಿ ಹಾಸಿಗೆಗಳ ಸಾಮರ್ಥ್ಯ ಹೆಚ್ಚಳಕ್ಕೆ ನಿರ್ಧರಿಸಲಾಗಿದೆ. ಮೈಸೂರಿನಲ್ಲಿ ಪೆರಿಫೆರಲ್ ಕ್ಯಾನ್ಸರ್ ಕೇಂದ್ರದ ಕಾಮಗಾರಿ ಪೂರ್ಣಗೊಳಿಸಲಾಗಿದೆ.**

---

## 7 ಹೊಸ ಯೋಜನೆ ಘೋಷಣೆ

ಬೆಂಗಳೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಡಿಸಿದ 17ನೇ ಬಜೆಟ್‌ನಲ್ಲಿ 7 ಹೊಸ ಕಾರ್ಯಕ್ರಮಗಳನ್ನು ಘೋಷಣೆ ಮಾಡಿದ್ದಾರೆ.

**1.ಸಿಎಂ ಕೃಷಿ ವಿಸ್ತಾರ ಯೋಜನೆ**

ಕೃಷಿ ಸಂಸ್ಕರಣೆ, ಕೃಷಿ ತ್ಯಾಜ್ಯಗಳ ಮರುಬಳಕೆ, ಮಾರುಕಟ್ಟೆ ಸಂಪರ್ಕ ಬಲಪಡಿಸಲು ಹೊಸ ಕಾರ್ಯಕ್ರಮ ಘೋಷಿಸಿದ್ದಾರೆ. ರೈತರ ಸ್ಥಿರ ಮತ್ತು ಹೆಚ್ಚುವರಿ ಆದಾಯ ಮೂಲ ರಚಿಸಲು ಈ ಯೋಜನೆ ಪೂರಕವಾಗಿದೆ. ಈ ಮುಂದಿನ ಮೂರು ವರ್ಷಗಳಲ್ಲಿ 100 ಕೋಟಿ ರೂ. ವೆಚ್ಚದಲ್ಲಿ ಈ ಯೋಜನೆ ಜಾರಿಗೆ ಬರಲಿದೆ.

**2.ವಸುಧಾಮೃತ**

ಪರಿಸರ ಸ್ನೇಹಿ ಮತ್ತು ಸುಸ್ಥಿರ ಕೃಷಿ ಪದ್ಧತಿಗಳನ್ನು ಉತ್ತೇಜಿಸಲು ಮುಂದಿನ ಮೂರು ವರ್ಷಗಳಲ್ಲಿ ಜಾರಿಯಾಗಲಿದೆ.

**3.ಸಸ್ಯ ಸಂಜೀವಿನಿ**

ಪರಿಸರ ಸ್ನೇಹಿ ಜೈವಿಕ ಪೀಡನಾಶಕ, ಜೈವಿಕ ಕೀಟನಾಶಕಗಳ ಜೊತೆ ಇತರೆ ಸುರಕ್ಷಿತ ನಿರ್ವಹಣಾ ಕ್ರಮಗಳಿಗಾಗಿ ಮೂರು ವರ್ಷಗಳಲ್ಲಿ ಜಾರಿ ಮಾಡುವ ಉದ್ದೇಶ.

**4.ಫಲಧಾರೆ**

ಜಾನುವಾರುಗಳ ಸಂತಾನೋತ್ಪತ್ತಿ ಸಮಸ್ಯೆ ನಿವಾರಣೆಗೆ ಈ ಕಾರ್ಯಕ್ರಮದಡಿ ಶಿಬಿರಗಳ ಆಯೋಜನೆ ಮಾಡಲಾಗುವುದು. 5 ಕೋಟಿ ರೂ. ವೆಚ್ಚದಲ್ಲಿ 1000 ಗ್ರಾಮ ಪಂಚಾಯತಿಗಳಲ್ಲಿ ಫಲಧಾರೆ ಶಿಬಿರ ನಡೆಸಲಾಗುವುದು.

**5.ಕರ್ನಾಟಕ ಉನ್ನತ ಶಿಕ್ಷಣ ಪರಿವರ್ತನೆ**

40 ಸರ್ಕಾರಿ ಪ್ರಥಮ ದರ್ಜೆ ಕಾಲೇಜು, 11 ಪಾಲಿಟೆಕ್ನಿಕ್ ಕಾಲೇಜುಗಳನ್ನು ಮಾದರಿ ಸಂಸ್ಥೆಗಳಾಗಿ ಅಭಿವೃದ್ಧಿ ಮಾಡುವ ಉದ್ದೇಶದಿಂದ 2,500 ಕೋಟಿ ರೂ. ವೆಚ್ಚದಲ್ಲಿ ಯೋಜನೆ ಜಾರಿ.

**6.ಗೃಹಾಧಾರಿತ ಆರೈಕೆ**

ಮನೆಗಳಲ್ಲೇ ಚಿಕಿತ್ಸಾ ಸೇವೆ, ಗಂಭೀರ ದೀರ್ಘಕಾಲೀನ, ಮಾರಣಾಂತಿಕ ಕಾಯಿಲೆಗಳಿರುವ ರೋಗಿಗಳಿಗೆ ಈ ಯೋಜನೆಯಡಿ ಆರೈಕೆ ಮಾಡಲಾಗುವುದು.

**7.ಮುಖ್ಯಮಂತ್ರಿ ಸೌರಕೃಷಿ ಯೋಜನೆ**

ಕೆಪಿಟಿಸಿಎಲ್ ಉಪಕೇಂದ್ರಗಳಲ್ಲಿ ಸೌರ ವಿದ್ಯುತ್ ಸ್ಥಾವರಗಳ ನಿರ್ಮಾಣ ಮಾಡಲಾಗುವುದು. ಅಂದಾಜು 10,500 ಕೋಟಿ ರೂ. ವೆಚ್ಚದಲ್ಲಿ 300 ಮೆಗಾವ್ಯಾಟ್ ಸಾಮರ್ಥ್ಯದ ಸೌರ ವಿದ್ಯುತ್ ಸ್ಥಾವರಗಳ ಆರಂಭಗೊಳಿಸಲು ನಿರ್ಧರಿಸಲಾಗಿದೆ.

## 9ಕ್ಕೆ ಅಧಿವೇಶನ ಮುಂದೂಡಿಕೆ

ಬೆಂಗಳೂರು: 2026–2027ನೇ ಸಾಲಿನ ರಾಜ್ಯ ಬಜೆಟ್ ಮಂಡನೆ ಮುಕ್ತಾಯದ ನಂತರ ವಿಧಾನಮಂಡಲ ಜಂಟಿ ಅಧಿವೇಶನವನ್ನು ಸೋಮವಾರಕ್ಕೆ ಮುಂದೂಡಲಾಯಿತು. ವಿಧಾನಸಭೆ ಸ್ಪೀಕರ್ ಯು.ಟಿ.ಖಾದರ್ ಅವರು ಕಲಾಪವನ್ನು ಸೋಮವಾರಕ್ಕೆ ಮುಂದೂಡಿಕೆ ಮಾಡಿದರು.ಈ ಬಾರಿಯ ಬಜೆಟ್ ನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸುಮಾರು 3 ಗಂಟೆ 36 ನಿಮಿಷಗಳ ಕಾಲ ಓದಿದರು. ಬಜೆಟ್ ಭಾಷಣದ ಆರಂಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಚನಕಾರ್ತಿ ಅಕ್ಕಮ್ಮ ಅವರ ಧನಶೀಲ ಮನಶೀಲ ತನುಶೀಲ, ಸರ್ವಮಯ ದೃಕ್ಕಿಂಗೆ ಕಾಂಬುದೆಲ್ಲವು ಶೀಲ, ಇಂತೀ ವ್ರತಸಂಪದವೆಲ್ಲವೂ ಅದಾರ ಕುರಿತು ಮಾಡುವ ನೇಮ ಎಂಬುದು ತಾನರಿಯಬೇಕು ಸಾಲುಗಳನ್ನು ಉಲ್ಲೇಖಿಸಿದರು. ಜಲಸಂಪನ್ಮೂಲ ಇಲಾಖೆಯ ಯೋಜನೆಗಳಿಗೆ ಸಂಬಂಧಿಸಿದಂತೆ ಬಜೆಟ್ ಭಾಷಣದಲ್ಲಿ ಕೆಪಿ ಪೂರ್ಣಚಂದ್ರ ತೇಜಸ್ವಿ ಅವರ ನದಿಗಳು ನಮ್ಮೆಲ್ಲ ಮಾನವ ಸಮಾಜ ಮತ್ತು ಸಂಸ್ಕೃತಿಗಳ ಜೀವವಾಹಿನಿ. ಅವು ಕೊಳಕಾದರೆ, ಅವು ಬತ್ತಿದರೆ ನಮ್ಮ ಉಸಿರು ಉಡುಗುತ್ತಾ ಬಂದಂತೆ ಬರಹದ ಸಾಲುಗಳನ್ನು ಉಲ್ಲೇಖ ಮಾಡಿದರು.

**ಮೊದಲ ಪುಟದಿಂದ**

## 16 ವರ್ಷದೊಳಗಿನ ಮಕ್ಕಳಿಗೆ ಸಾಮಾಜಿಕ ಮಾಧ್ಯಮ ನಿಷೇಧ

ಕಾಲೇಜುಗಳು, ವಿಶ್ವಿದ್ಯಾಲಯಗಳಲ್ಲಿ ಮಾದಕ ವಸ್ತುಗಳ ಬಳಕೆಯನ್ನು ತಡೆಯಲು ವಿದ್ಯಾರ್ಥಿಗಳಿಗೆ ಶಿಕ್ಷಣ ಮತ್ತು ಜಾಗೃತಿ ಕಾರ್ಯಕ್ರಮ, ಕಠಿಣ ನಿಯಮ ಹಾಗೂ ಸಹಾಯ ಕೇಂದ್ರಗಳ ಮೂಲಕ ಮಾದಕ ವಸ್ತುಗಳ ಮೇಲೆ ಕಟ್ಟುನಿಟ್ಟಿನ ನಿರ್ಬಂಧ ಹೇರಲಾಗುವುದು ಎಂದು ತಿಳಿಸಿದರು.

1 ರಿಂದ 10ನೇ ತರಗತಿಯವರೆಗೆ ಮೌಲ್ಯ ಶಿಕ್ಷಣ ಪುಸ್ತಕಗಳನ್ನು ಮತ್ತು ಪದವಿ ಪೂರ್ವ ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕಗಳನ್ನು ಉಚಿತವಾಗಿ ನೀಡಲಾಗುವುದು. ಸರ್ಕಾರಿ ಪ್ರಾಥಮಿಕ, ಪ್ರೌಢ ಶಾಲೆಗಳು ಮತ್ತು ಪಿಯು ಕಾಲೇಜುಗಳಲ್ಲಿ ಹೊಸ ಕೊಠಡಿ ನಿರ್ಮಾಣ ಮತ್ತು ಕೊಠಡಿಗಳ ದುರಸ್ತಿ ಕಾಮಗಾರಿಗಳಿಗೆ 565 ಕೋಟಿ ರೂ., ಶೌಚಾಲಯ ನಿರ್ಮಾಣಕ್ಕಾಗಿ 75 ಕೋಟಿ ರೂ. ಹಾಗೂ ಶಾಲೆಗಳಿಗೆ ಪೀಠೋಪಕರಣಗಳನ್ನು ಖರೀದಿಸಲು 25 ಕೋಟಿ ರೂ. ಅನುದಾನವನ್ನು ಒದಗಿಸಲಾಗುವುದು ಎಂದು ತಿಳಿಸಿದರು.

**ಮೊದಲ ಪುಟದಿಂದ**

## ಶೂನ್ಯ ಬಡ್ಡಿ ದರದ ಸಾಲ

**ಕೋಟಿ ಸಾಲವನ್ನು ವಿತರಿಸುವ ಗುರಿ ಹೊಂದಲಾಗಿದೆ. ಫೆಬ್ರುವರಿ 2026ರ ಅಂತ್ಯಕ್ಕೆ 25 ಲಕ್ಷ ರೈತರಿಗೆ 22,000 ಕೋಟಿ ಕೃಷಿ ಸಾಲವನ್ನು ವಿತರಿಸಲಾಗಿದೆ. ಪ್ರಸಕ್ತ ಸಾಲಿನಲ್ಲಿ 38 ಲಕ್ಷ ರೈತರಿಗೆ ಶೂನ್ಯ ಬಡ್ಡಿದರದಲ್ಲಿ 30,000 ಕೋಟಿ ಕೃಷಿ ಸಾಲ ವಿತರಿಸುವ ಗುರಿ ಹೊಂದಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.**

### 50 ಸಾವಿರ ನಿವೇಶನ

**ಎಂದು ಹೇಳಿದ್ದಾರೆ. ಕೆಎಚ್‌ಬಿ ವತಿಯಿಂದ ನಮ್ಮ ಮನೆ ಯೋಜನೆಯಡಿಯಲ್ಲಿ ಮುಂದಿನ ಎರಡು ವರ್ಷಗಳಲ್ಲಿ 50 ಸಾವಿರ ನಿವೇಶನಗಳು ರಿಯಾಯತಿ ದರದಲ್ಲಿ ವಿತರಣೆ ಮಾಡುತ್ತೇವೆ ಎಂದು ತಿಳಿಸಿದ್ದಾರೆ.**

### ಸಮೃದ್ಧಿಯ ಗುರಿ: ಡಿಕೆಶಿ

**ಯೋಜನೆಗಳ ಮೂಲಕ ಪ್ರತಿ ಕನ್ನಡಿಗನ ಬಾಳಿನಲ್ಲಿ ಹೊಸ ಭರವಸೆ ಮೂಡಿಸಲು ನಮ್ಮ ಸರ್ಕಾರ ಬದ್ಧವಾಗಿದೆ. ನಾಡಿನ ಕಟ್ಟಕಡೆಯ ವ್ಯಕ್ತಿಗೂ ಸರ್ಕಾರದ ಸೌಲಭ್ಯಗಳು ತಲುಪಲಿ ಎಂಬ ಆಶಯ ನಮ್ಮದು ಎಂದು ತಿಳಿಸಿದ್ದಾರೆ.**

### 90 ದಿನ ಮಾತೃತ್ವ ರಜೆ

ಬೋಧಕ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ಎಂದು ತಿಳಿಸಿದ್ದಾರೆ. ವಿದ್ಯಾರ್ಥಿನಿಯರು ಹೆಚ್ಚಿರುವ ಕಾಲೇಜುಗಳಿಗೆ 31 ಕೋಟಿ ರೂ. ವೆಚ್ಚದಲ್ಲಿ ಅಗತ್ಯ ಸೌಲಭ್ಯ ಒದಗಿಸಲಾಗುವುದು. 1000ಕ್ಕೂ ಹೆಚ್ಚು ವಿದ್ಯಾರ್ಥಿಗಳು ಇರುವ ಪದವಿ ಕಾಲೇಜುಗಳ ಉನ್ನತೀಕರಣ ಮಾಡಲಾಗುವುದು ಎಂದು ಘೋಷಿಸಿದ್ದಾರೆ.

---

## ಯಾವ ಜಿಲ್ಲೆಗೆ ಏನೇನು ಸಿಕ್ಕಿದೆ?: ರಾಜ್ಯ ಬಜೆಟ್: ಜಿಲ್ಲಾವಾರು ನೀಡಿರುವ ಯೋಜನೆಗಳಿವು

**ಬೆಂಗಳೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶುಕ್ರವಾರ ದಾಖಲೆಯ 17ನೇ ಬಜೆಟ್ ಮಂಡಿಸಿದ್ದಾರೆ. ಈ ಬಾರಿ ಬಜೆಟ್‌ನಲ್ಲಿ ಯಾವ ಯಾವ ಜಿಲ್ಲೆಗಳಿಗೆ ಏನೇನು ಸಿಕ್ಕಿದೆ ಎಂಬುದನ್ನು ಅವರು ಬಜೆಟ್‌ನಲ್ಲಿ ವಿವರಿಸಿದ್ದಾರೆ.**

### ಮಂಡ್ಯ

- ಕೆ.ಆರ್.ಎಸ್. ಯೋಜನೆಯಡಿಯಲ್ಲಿ ಬರುವ ವಿಶ್ವೇಶ್ವರಯ್ಯ ಮುಖ್ಯ ನಾಲೆಯ ಆಧುನೀಕರಣ
- ಹೆಬ್ಬಕವಾಡಿ ಮತ್ತು ನಿಡಘಟ್ಟ ಶಾಖಾ ನಾಲೆ
- ಹೊಸಹೊಳಲು ಎಡಮೇಲ್ದಂಡೆ ನಾಲೆ ಆಧುನೀಕರಣ.
- ಹೇಮಾವತಿ ಯೋಜನೆಯಡಿ ನಾಗಮಂಗಲ ಶಾಖಾ ನಾಲೆಯ ರೀ–ಮಾಡೆಲಿಂಗ್.
- ಮದ್ದೂರು ತಾಲ್ಲೂಕಿನ ಸೂಳೆಕೆರೆಯ ಜೀರ್ಣೋದ್ಧಾರ.
- ಮದ್ದೂರು ತಾಲ್ಲೂಕಿನ ಸೂಳೆಕೆರೆ ನಾಲೆಗಳ ಅಭಿವೃದ್ಧಿ.
- ಹೇಮಾವತಿ ಎಡದಂಡೆ ಕಾಲುವೆ (ಊಐ೫ಅ) ಅಡಿಯಲ್ಲಿ ಪುನರ್‌ನಿರ್ಮಾಣ.
- ಮದ್ದೂರು ತಾಲ್ಲೂಕಿನ ಕಾಲುವೆಗಳ ಆಧುನೀಕರಣ.
- ವಿಶ್ವೇಶ್ವರಯ್ಯ ನಾಲಾ ಜಾಲದಡಿಯಲ್ಲಿ ಬರುವ ನಾಲೆಗಳ ಅಭಿವೃದ್ಧಿ.
- ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ವ್ಯಾಪ್ತಿಯ ಸಿಡಿಎಸ್ ನಾಲೆಗಳ ಅಭಿವೃದ್ಧಿ ಕಾಮಗಾರಿ.
- ಹೇಮಾವತಿ ನದಿಯಿಂದ ನಾಗಮಂಗಲ ಹಾಗೂ ಚನ್ನರಾಯಪಟ್ಟಣ ತಾಲ್ಲೂಕುಗಳ ಕೆರೆಗಳನ್ನು ತುಂಬಿಸುವ ಯೋಜನೆ.
- ಪಾಂಡವಪುರ ಬಳಘಟ್ಟ ಯೋಜನೆಯಲ್ಲಿ ಕೈಬಿಟ್ಟ ಕೆರೆಗಳಿಗೆ ನೀರು ತುಂಬಿಸುವ ಕಾಮಗಾರಿ.
- ಮದ್ದೂರು ತಾಲ್ಲೂಕಿನಲ್ಲಿ ಶಿಂಷಾ ನದಿಗೆ ಬ್ರಿಡ್ಜ್ ಕಂ ಚೆಕ್ ಡ್ಯಾಂ ನಿರ್ಮಾಣ.
- ಮಂಡ್ಯ ಜಿಲ್ಲೆ, ಶ್ರೀರಂಗಪಟ್ಟಣ ತಾಲ್ಲೂಕಿನಲ್ಲಿ ಅರೆಕೆರೆ ಬಳಿ 12 ಕೆರೆಗಳಿಗೆ ಕಾವೇರಿ
- ಮಳವಳ್ಳಿ ಕುಂತೂರು ಭಾಗದ ಕೆರೆಗಳಿಗೆ ಏತ ನೀರಾವರಿ.

### ಕೊಡಗು

- ಹಾರಂಗಿ ಯೋಜನೆಯ ಎಡದಂಡೆ ನಾಲೆಯ ಆಧುನೀಕರಣ
- ಹಾರಂಗಿ ಜಲಾಶಯ ಯೋಜನೆಯಡಿ ಪಿರಿಯಾಪಟ್ಟಣ ಏತ ನೀರಾವರಿ ಕಾಲುವೆಯ ರೀ–ಮಾಡೆಲಿಂಗ್.
- ಹಾರಂಗಿ ಬಲದಂಡೆ ಕಾಲುವೆಯ ಆಧುನೀಕರಣ.
- ಹಾರಂಗಿ ಜಲಾಶಯದ ಕೆಳಭಾಗದಲ್ಲಿ ಸೇತುವೆ ನಿರ್ಮಾಣ.
- ಹಾರಂಗಿ ಎಡದಂಡೆ ನಾಲೆಯ ಅಡಿಯಲ್ಲಿ ಸುಧಾರಣೆ.
- ಮಡಿಕೇರಿಕುಶಾಲನಗರ ಪ್ರದೇಶದಲ್ಲಿ ಚೆಕ್ ಡ್ಯಾಂ ಮತ್ತು ನಾಲೆ ನಿರ್ಮಾಣ ಕಾಮಗಾರಿ.
- ಪೊನ್ನಂಪೇಟೆ ಭಾಗದಲ್ಲಿ ಚೆಕ್ ಡ್ಯಾಂ ಹಾಗೂ ನಾಲೆ ನಿರ್ಮಾಣ.
- ಕೊಡಗು ಜಿಲ್ಲೆ, ಸೋಮವಾರಪೇಟೆ ತಾಲ್ಲೂಕಿನ ಕಿರಿಕೊಡ್ಲಿ ಕೆರೆ ಅಭಿವೃದ್ಧಿ.
- ಕೊಡಗು ಜಿಲ್ಲೆ, ಮಡಿಕೇರಿ ತಾಲ್ಲೂಕಿನ ಕುಂಜಿಲ ಸಾರ್ವಜನಿಕ ಕೆರೆ ಅಭಿವೃದ್ಧಿ.
- ಕೊಡಗು ಜಿಲ್ಲೆ, ವಿರಾಜಪೇಟೆ ತಾಲ್ಲೂಕು ಭಾಗದಲ್ಲಿ ತೋಡಿಗೆ ತಡೆಗೋಡೆ ನಿರ್ಮಾಣ.
- ಕೊಡಗು ಜಿಲ್ಲೆ, ಸೋಮವಾರಪೇಟೆ ತಾಲ್ಲೂಕಿನ ಐಗೂರು–ಅರೆಯೂರಿನಲ್ಲಿ ನಾಲೆ ಹಾಗೂ ತಡೆಗೋಡೆ ಅಭಿವೃದ್ಧಿ.
- ಕೊಡಗು ಜಿಲ್ಲೆ, ಸೋಮವಾರಪೇಟೆ ತಾಲ್ಲೂಕಿನ ಐಗೂರು–ಅರೆಯೂರಿನಲ್ಲಿ ನಾಲೆ ಹಾಗೂ ತಡೆಗೋಡೆ ಅಭಿವೃದ್ಧಿ.

### ಚಾಮರಾಜನಗರ

- ಗುಂಡ್ಲುಪೇಟೆ ತಾಲ್ಲೂಕಿನ ಒಣಗಿದ ಕೆರೆಗಳನ್ನು ತುಂಬಿಸುವ ಯೋಜನೆ. ಚಾಮರಾಜ ಬಲದಂಡೆ ನಾಲೆಯ ಅಕ್ವಾಡಕ್ಸ್ ಪುನರ್ ನಿರ್ಮಾಣ. ರಾಮಸಮುದ್ರ ಕಾಲುವೆಯ ಚಾಮಲಾಪುರ, ಕಗ್ಗೇರೆ ಹಾಗೂ ಬನ್ನಿಕುಪ್ಪೆ ಶಾಖಾ ನಾಲೆಗಳಿಗೆ ಸಿ.ಸಿ. ಲೈನಿಂಗ್.
- ಕೃಷ್ಣರಾಜನಗರ ಶಾಖಾ ನಾಲೆಗೆ ಸಿಮೆಂಟ್ ಕಾಂಕ್ರೀಟ್ ಲೈನಿಂಗ್. ಸುವರ್ಣಾವತಿ ನದಿಯ ವ್ಯಾಪ್ತಿಯ ಸರಣಿ ಕೆರೆಗಳ, ಫೀಡರ್ ನಾಲೆಗಳ ಹಾಗೂ ಅಡ್ಡಮೋರಿ ಕಾಮಗಾರಿ. ಗುಂಡಾಲ್ ನದಿಯ ಅಡಿಯಲ್ಲಿ ಬರುವ ಸರಣಿ ಕೆರೆಗಳ ಸಮಗ್ರ ಅಭಿವೃದ್ಧಿ. ಸುವರ್ಣಾವತಿ ಜಲಾಶಯದ ನಾಲೆಗಳ ಅಭಿವೃದ್ಧಿ.
- ಚಾಮರಾಜನಗರದ ಹನೂರು ತಾಲೂಕಿನಲ್ಲಿ ಅಂತರ್ಜಲ ವೃದ್ಧಿ ಹಾಗೂ 12 ಸಾವಿರ ಎಕರೆ ಬಾಧಿತ ಅಚ್ಚುಕಟ್ಟು ಪ್ರದೇಶಕ್ಕೆ ನೀರಾವರಿ ಒದಗಿಸಲು ರೂ.490 ಕೋಟಿ ವೆಚ್ಚದಲ್ಲಿ ಉಡುತೊರೆಹಳ್ಳ ಯೋಜನೆ ಅನುಷ್ಠಾನ

### ತುಮಕೂರು

- ಅಮಾನಿಕೆರೆ ಕುಡಿಯುವ ನೀರಿನ ಯೋಜನೆ
- ಚಿಕ್ಕನಾಯಕನಹಳ್ಳಿ ಕುಡಿಯುವ ನೀರಿನ ಯೋಜನೆ
- ಗುಬ್ಬಿ ಮತ್ತು ಸಿರಾ ತಾಲ್ಲೂಕಿನ 42 ಗ್ರಾಮಗಳಿಗೆ ಕುಡಿಯುವ ನೀರಿನ ಯೋಜನೆ
- ಶಿಂಷಾ ನದಿಗೆ ಸರಗೂರಿನಿಂದ ಹೊಸಪುರವರೆಗೆ ಸೇತುವೆ ನಿರ್ಮಾಣ.
- ಕೊಟ್ಟಗೆರೆ ಗ್ರಾಮದ ಸಮೀಪ 21 ಕೆರೆಗಳನ್ನು ತುಂಬಿಸುವ ಯೋಜನೆ.
- ಗೂಳೂರು–ಹೆಬ್ಬೂರು ಕುಡಿಯುವ ನೀರಿನ ಯೋಜನೆ.
- ತುಮಕೂರು ಜಿಲ್ಲೆ ಶಿರಾ ತಾಲ್ಲೂಕಿನ ಕೆರೆ ಏರಿ ಮತ್ತು ಕೋಡಿ ಅಭಿವೃದ್ಧಿ.
- ತುಮಕೂರು ಜಿಲ್ಲೆ, ತುರುವೇಕೆರೆ ತಾಲ್ಲೂಕಿನ ಮಾಯಸಂದ್ರ ಚೆಕ್ ಡ್ಯಾಂ ದುರಸ್ತಿ ಮತ್ತು ರಕ್ಷಣಾ ಕಾಮಗಾರಿ.
- ತುಮಕೂರು ಜಿಲ್ಲೆ, ನಿಡವಳಲು ಕೆರೆಯಲ್ಲಿ ಚೆಕ್ ಡ್ಯಾಂ ಕಂ ಕಾಸ್ವೇ ನಿರ್ಮಾಣ.
- ತುಮಕೂರು ಜಿಲ್ಲೆ, ಶಿರಾ ತಾಲ್ಲೂಕಿನ ಯರಮಾದನಹಳ್ಳಿಯಲ್ಲಿ ಚೆಕ್ ಡ್ಯಾಂ ನಿರ್ಮಾಣ.
- ತುಮಕೂರು ಜಿಲ್ಲೆ, ಶಿರಾ ತಾಲ್ಲೂಕಿನ ಯರಮಾದನಹಳ್ಳಿಯಲ್ಲಿ ಚೆಕ್ ಡ್ಯಾಂ ನಿರ್ಮಾಣ.

### ರಾಮನಗರ

- ಶ್ರೀರಂಗ ಕುಡಿಯುವ ನೀರಿನ ಯೋಜನೆ
- ರಾಮನಗರ ಜಿಲ್ಲೆಯ ಕನಕಪುರ ಪಟ್ಟಣದಲ್ಲಿ ಅರ್ಕಾವತಿ ನದಿ ತೀರ ಅಭಿವೃದ್ಧಿ.
- ಸತ್ತೇಗಾಲಾ ಕೆರೆ ತುಂಬಿಸುವ ಯೋಜನೆ.
- ರಾಮನಗರ ಹಾಗೂ ಕನಕಪುರ ತಾಲ್ಲೂಕುಗಳಲ್ಲಿ 46 ಕೆರೆಗಳನ್ನು ತುಂಬಿಸುವ ಯೋಜನೆ.
- ಮಾಗಡಿ ತಾಲ್ಲೂಕಿನ ಗೌರಮ್ಮನ ಕೆರೆ ಹಳ್ಳಕ್ಕೆ ಡ್ರೈನ್ ನಿರ್ಮಾಣ.
- ಬೆಂಗಳೂರು ದಕ್ಷಿಣ ಜಿಲ್ಲೆ, ಕನಕಪುರ ತಾಲ್ಲೂಕಿನ ಹೊಸದೊಡ್ಡಿಯಲ್ಲಿ ಚೆಕ್ ಡ್ಯಾಂ ನಿರ್ಮಾಣ
- ರಾಮನಗರ, ಶಿಡ್ಲಘಟ್ಟ, ಹಾವೇರಿ, ತಾಂಡವಪುರ (ಮೈಸೂರು) ಹಾಗೂ ಕಲಬುರಗಿಯಲ್ಲಿ ಸಿಲ್ಕ್ ಪಾರ್ಕ್‌ಗಳ ಸ್ಥಾಪನೆ

# ಚಾ.ನಗರ ಜನತೆಗೆ ನಿರಾಸೆ ಮೂಡಿಸಿದ ರಾಜ್ಯಬಜೆಟ್

▸ ಪ್ರಕಾಶ್ ಬೆಲ್ಲದ್

ಚಾಮರಾಜನಗರ, ಮುಖ್ಯ ಮಂತ್ರಿ ಸಿದ್ದರಾಮಯ್ಯ ಅವರು ಮಂಡಿಸಿರುವ 2026-27 ನೇ ಸಾಲಿನ ಬಜೆಟ್ ನಲ್ಲಿ ಜಿಲ್ಲೆಯ ಹನೂರು ತಾಲೂಕಿಗೆ 490 ಕೋಟಿ ರು, ವೆಚ್ಚದ ಉಡುಕುತೊರೆ ಹಳ್ಳ ಜಲಾಶಯ ಏತ ನೀರಾವರಿ ಯೋಜನೆ ಘೋಷಣೆ ಮಾಡುವ ಮೂಲಕ ಆ ಭಾಗದ ರೈತರು ಮತ್ತು ಜನಸಮುದಾಯದ ಬೇಡಿಕೆಯನ್ನು ಈಡೇರಿಸಿದ್ದಾರೆ.

ಹನೂರು ತಾಲೂಕಿನ ರಾಮಾಪುರ ಭಾಗದಲ್ಲಿ ಅಂತರ್ಜಲ ಕುಸಿದು ಜನ- ಜಾನುವಾರುಗಳಿಗೆ ನೀರಿನ ಸಮಸ್ಯೆ ಎದುರಾದ ಹಿನ್ನೆಲೆಯಲ್ಲಿ ಉಡುಕುತೊರೆ ಹಳ್ಳ ಜಲಾಶಯ ಏತ ನೀರಾವರಿಯನ್ನು ಅನುಷ್ಠಾನಗೊಳಿಸಬೇಕು ಎಂದು ರೈತರು ಬುದಿನಗಳ ಬೇಡಿಕೆಯಾಗಿತ್ತು. ಈ ಬಗ್ಗೆ ಸತತ ಹೋರಾಟ ಕೂಡ ನಡೆಸಿದ್ದರು. ರೈತರ ಪ್ರತಿಭಟನೆಗೆ ಮಣಿದ ಸರಕಾರ ಕೊನೆಗೂ ಈ ಬಾರಿಯ ಬಜೆಟ್ ನಲ್ಲಿ 490 ಕೋಟಿ ವೆಚ್ಚದ ಯೋಜನೆಯನ್ನು ಘೋಷಣೆ ಮಾಡಿರುವುದು ರೈತರ ಮುಖದಲ್ಲಿ ಮಂದಹಾಸ ಮೂಡಿದೆ.

ಉಡುಕುತೊರೆ ಏತ ನೀರಾವರಿ ಯೋಜನೆ ಜಾರಿಯಿಂದ ಅಂತರ್ಜಲ ಹೆಚ್ಚುವುದಲ್ಲದೆ, ಕುಡಿಯುವ ನೀರು ಹಾಗೂ 12 ಸಾವಿರ ಎಕರೆ ಭಾದಿತ ಅಚ್ಚುಕಟ್ಟು ಪ್ರದೇಶಕ್ಕೆ ನೀರಾವರಿ ಒದಗಿಸಲು ವರದಾನವಾಗಲಿದೆ. ಇನ್ನು ಹನೂರು ಪಟ್ಟಣದಲ್ಲಿ ಪ್ರಜಾಸೌಧ ನಿರ್ಮಾಣ, ಹನೂರು- ರಾಮಾಪುರ, ಪಾಲಾರ್ ಗೆ ಸಂಪರ್ಕ ಕಲ್ಪಿಸುವ 70 ಕಿಮಿ ರಸ್ತೆ ಅಭಿವೃದ್ಧಿ, ಹುಲ್ಲಹಳ್ಳಿ, ತಗಡೂರು, ಸಂತೇಮರಹಳ್ಳಿ ಸಂಪರ್ಕಿಸುವ 55 ಕಿ.ಮಿ ರಸ್ತೆ ಅಭಿವೃದ್ಧಿಯ ಬಗ್ಗೆ ಬಜೆಟ್ ನಲ್ಲಿ ಪ್ರಸ್ತಾಪಿಸಲಾಗಿದೆ.

### ಜಿಲ್ಲೆಗೆ ಸಿಕ್ಕಿದ್ದೇನು?

ಉಳಿದಂತೆ ಜಿಲ್ಲಾ ಕೇಂದ್ರ ಚಾಮರಾಜನಗರದಲ್ಲಿ ಶ್ರಮಿಕ ವಸತಿ ಶಾಲೆ ನಿರ್ಮಾಣ, ಚಿಕ್ಕಹೊಳೆ- ಸುವರ್ಣಾವತಿ ನಾಲಾ ದುರಸ್ತಿ ಕಾಮಗಾರಿಗಳ ಬಗ್ಗೆ ಘೋಷಿಸಲಾಗಿದೆ. ಗುಂಡ್ಲುಪೇಟೆ ಪಟ್ಟಣದಲ್ಲಿ ಸಂಚಾರಿ ಪೊಲೀಸ್ ಠಾಣೆ ಆರಂಭಿಸುವುದು ಹಾಗೂ ತಾಲೂಕಿನ ವ್ಯಾಪ್ತಿಯಲ್ಲಿ ಒಣಗಿದ ಕೆರೆಗ ಳನ್ನು ತುಂಬಿಸುವ ಬಗ್ಗೆ ಬಜೆಟ್ ನಲ್ಲಿ ಪ್ರಸ್ತಾಪಿಸಲಾಗಿದೆ.

### ನಿರೀಕ್ಷೆ ಇರಲಿಲ್ಲ

ಕಳೆದ ಏ, 24 2025 ರಂದು ಜಿಲ್ಲೆಯ ಮಲೆ ಮಹದೇಶ್ವರ ಬೆಟ್ಟದಲ್ಲಿ ನಡೆದ ವಿಶೇಷ ಸಚಿವ ಸಂಪುಟದ ಸಭೆಯಲ್ಲಿ ಚಾಮರಾಜನಗರ ಸೇರಿದಂತೆ ಜಿಲ್ಲೆಯ ಕೊಳ್ಳೇಗಾಲ, ಯಳಂದೂರು, ಹನೂರು ಮತ್ತು ಗುಂಡ್ಲುಪೇಟೆ ತಾಲೂಕುಗಳ ವಿವಿಧ ಯೋಜನೆಗಳಿಗೆ ಸಾವಿರಾರು ಕೋಟಿ ಅನುದಾನ ಘೋಷಣೆ ಮಾಡಿದ್ದರಿಂದ ಜಿಲ್ಲೆಯ ಶಾಸಕರು ಈ ಬಾರಿಯ ಬಜೆಟ್ ನಲ್ಲಿ ಅಷ್ಟೇನು ನಿರೀಕ್ಷೆಗಳನ್ನು ಇಟ್ಟಿರಲಿಲ್ಲ ಎಂದು ಹೇಳಲಾಗಿದೆ. ಆದರೂ ಜಿಲ್ಲೆಯ ಬಗ್ಗೆ ವಿಶೇಷವಾಗಿ ಪ್ರೀತಿ ಹೊಂದಿರುವ ಮುಖ್ಯ ಮಂತ್ರಿ ಸಿದ್ದರಾಮಯ್ಯ ಹೊಸ ಘೋಷಣೆ ಏನಾದರೂ ಮಾಡಬಹುದು ಎಂಬ ನಿರೀಕ್ಷೆಯಲ್ಲಿದ್ದ ಜನತೆಗೆ ಈ ಬಾರಿಯ ಬಜೆಟ್ ನಿರಾಸೆ ಮೂಡಿಸಿದೆ.




## ಉತ್ತಮ ಬಜೆಟ್ : ಮಹಮದ್ ಅಸ್ಗರ್

ನಗರ ಕಾಂಗ್ರೆಸ್ ಅಧ್ಯಕ್ಷ ಮಹಮದ್ ಅಸ್ಗರ್ ( ಮುನ್ನಾ) ಪ್ರತಿಕ್ರಿಯಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ




ಅವರು ಉತ್ತಮ ಬಜೆಟ್ ಕೊಟ್ಟಿದ್ದಾರೆ. ಸರ್ವರಿಗೂ ಸಮಪಾಲು, ಸರ್ವರಿಗೂ ಸಮಬಾಳು ಎಂಬಂತೆ ರೈತರು, ಕಾರ್ಮಿಕರು, ಮಹಿಳೆಯರು, ವಿದ್ಯಾರ್ಥಿಗಳಿಗೆ ನೆರವಾಗುವಂತೆ ಅನೇಕ ಕಾರ್ಯಕ್ರಮ ರೂಪಿಸಿದ್ದಾರೆ. ಎಸ್.ಸಿ.ಎಸ್ ಟಿ, ಅಲ್ಪಸಂಖ್ಯಾತ, ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಿದ್ದಾರೆ. ಜಿಲ್ಲಾ ಕೇಂದ್ರ ನಗರದಲ್ಲಿ ಕಾರ್ಮಿಕ ವಸತಿ ಶಾಲೆ, ಚಿಕ್ಕಹೊಳೆ - ಸುವರ್ಣಾವತಿ ಜಲಾಶಯಗಳ ವ್ಯಾಪ್ತಿಯ ನಾಲೆಗಳ ದುರಸ್ತಿ ಗೆ ಒತ್ತು ನೀಡುವ ಮೂಲಕ ಅಚ್ಚು ಕಟ್ಟು ಪ್ರದೇಶದ ರೈತರಿಗೆ ಅನುಕೂಲ ಮಾಡಿಕೊಡಲಾಗಿದೆ ಎಂದರು.

## ರೈತರ ಅಭಿವೃದ್ಧಿಗೆ ಪೂರಕವಲ್ಲದ ಬಜೆಟ್

▸ ಹಳ್ಳಿಕೆರೆಹುಡಿ ಭಾಗ್ಯರಾಜ್

ಸಿದ್ದರಾಮಯ್ಯನವರು 17ನೇ ದಾಖಲೆಯ ಬಜೆಟ್ ಮಂಡಿಸಿದರು ಕೂಡ ರೈತ ಅಭಿವೃದ್ಧಿಗೆ ಪೂರಕವಲ್ಲದ ಹಾಗೂ ಹಳೆ ಮದ್ಯವನ್ನು ಹೊಸ



ಬಾಟಲಿಗೆ ಹಾಕಿದ ರೀತಿ ಬಜೆಟ್ ಅನ್ನು ಮಂಡಿಸಿದ್ದಾರೆ ಎಂದು ಕಬ್ಬು ಬೆಳೆಗಾಋ ಸಂಘದ ರಾಜ್ಯಾಧ್ಯಕ್ಷ ಹಳ್ಳಿ ಕೆರೆ ಹುಂಡಿ ಭಾಗ್ಯ ರಾಜ್ ಅಸಮದಾನ ಹೊರ ಹಾಕಿದ್ದಾರೆ. ರಾಜ್ಯದಲ್ಲಿರುವ ಸುಮಾರು 25,000 ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ಗಳಲ್ಲಿ ಸಣ್ಣ ಮತ್ತು ಅತಿ ಸಣ್ಣ ರೈತರು ಪಡೆದಿರುವ ಸುಮಾರಿ 28 ಸಾವಿರ ಕೋಟಿ ರೂಪಾಯಿ ಸಾಲವನ್ನು ಮನ್ನ ಮಾಡುವಲ್ಲಿ ಸರ್ಕಾರ ವಿಫಲವಾಗಿದೆ. ಪ್ರತಿ ಎಕರೆಗೆ ಒಂದು ಲಕ್ಷ ಸಾಲ ನೀಡುವ ಘೋಷಣೆಯನ್ನು ಮಾಡಿಲ್ಲ ಋಷಿಗೆ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದಲ್ಲಿ 10 ಲಕ್ಷದವರೆಗೆ ಬಡ್ಡಿ ರಹಿತ ಸಾಲ ನೀಡುವ ಯೋಜನೆಯನ್ನು ಘೋಷಣೆ ಮಾಡಿಲ್ಲ. ಯಶಸ್ವಿನಿ ಆರೋಗ್ಯ ಯೋಜನೆ ಅಡಿಯಲ್ಲಿ 5 ಲಕ್ಷದವರೆಗೆ ಉಚಿತ ಆರೋಗ್ಯ ನೀಡುವಲ್ಲಿ ಕ್ರಮ ಕೈಗೊಂಡಿಲ್ಲ. ಕಳೆದ ಎರಡು ವರ್ಷದ ಬಾಕಿ 950 ಕೋಟಿ ಕಬ್ಬು ಬೆಳೆಗಾರರ ಬಾಕಿ ನೀಡುವಲ್ಲಿ ಸರ್ಕಾರ ವಿಫಲವಾಗಿದೆ ಎಂದು ದೂರಿದರು.

### ಬಡವರ, ರೈತರು, ಮಹಿಳೆಯರ ಪರವಾದ ಬಜೆಟ್

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಡಿಸಿರುವ 2026-27. ನೇ ಸಾಲಿನ ಬಜೆಟ್ ಬಡವರು, ರೈತರು ಹಾಗೂ ಮಹಿಳೆಯರ ಪರವಾಗಿದೆ ಎಂದು ಚಾಮರಾಜನಗರ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಪಿ.ಮರಿಸ್ವಾಮಿ ಪ್ರತಿಕ್ರಿಯಿಸಿದರು. ಬಜೆಟ್ ನಲ್ಲಿ ಕೃಷಿ, ಆರೋಗ್ಯ ಮತ್ತು ಮಹಿಳೆಯರ ಸಬಲೀಕರಣಕ್ಕೆ ಆದ್ಯತೆ ನೀಡಲಾಗಿದೆ ಅಲ್ಲದೆ ವಿದ್ಯಾರ್ಥಿಗಳ ಸರ್ವೋತ್ತಮುಖ ಏಳ್ಗೆಗೆ ಒತ್ತು ನೀಡಲಾಗಿದೆ ಎಂದು ತಿಳಿಸಿದರು. ಮುಖ್ಯ ಮಂತ್ರಿಗಳು ಕಳೆದ ವರ್ಷ ಮಲೆ ಮಹದೇಶ್ವರ ಬೆಟ್ಟದಲ್ಲಿ ನಡೆದ ವಿಶೇಷ ಸಚಿವ ಸಂಪುಟದಲ್ಲಿ ಜಿಲ್ಲೆಯ ಅಭಿವೃದ್ಧಿಗೆ ಪೂರಕವಾಗಿ ಅನುದಾನ ಘೋಷಣೆ ಮಾಡಿದ್ದಾರೆ ಎಂದು ಪಿ.ಮರಿಸ್ವಾಮಿ ತಿಳಿಸಿದರು.

## ದಾಖಲೆಗೆ ಮಾತ್ರ ಸೀಮಿತವಾದ ಬಜೆಟ್

▸ ಮೂಡ್ನ ಕೂಡು ಪ್ರಕಾಶ್

ಸಿದ್ದರಾಮಯ್ಯನವರು ಮಂಡಿಸಿದ ಬಜೆಟ್ ದಾಖಲೆಗೆ ಮಾತ್ರ ಸೀಮಿತವಾಗಿದ್ದು ರಾಜ್ಯದ ಸರ್ವಾಂಗಿನ ಅಬಿವೃದ್ಧಿಗೆ ನಿರಾಸದಾಯಕ ಬಜೆಟ್ ಮಂಡನೆ ಮಾಡಿದ್ದು ಮುಖ್ಯಮಂತ್ರಿಗಳು ಕೇಂದ್ರ ಸರ್ಕಾರವನ್ನು ಟೀಕಿಸದಷ್ಟೇ ಈ ಅಧಿವೇಶನವನ್ನು ಬಳಸಿಕೊಂಡಿದ್ದು ಬಿಟ್ಟರೆ



ಗ್ರಾಮೀಣಾಭಿವೃದ್ಧಿ. ವಸತಿ. ಸಮಾಜ ಕಲ್ಯಾಣ.ಕೃಷಿಗೆ ಹೆಚ್ಚಿನ ಅನುದಾನ ನೀಡಲಾಗಿಲ್ಲ ಗ್ಯಾರಂಟಿ ಯೋಜನೆಗೆ ಹಣ ವಂದಿಸಲು ಮುಖ್ಯಮಂತ್ರಿಗಳು ಸರ್ಕಸ್ ಮಾಡುತ್ತಿದ್ದು ಇದಕ್ಕೆ ಉದಾಹರಣೆ ಮದ್ಯಪ್ರಿಯರ ಜೇಬಿಗೆ ಕೈ ಹಾಕಿದ್ದಾರೆ ಅಲ್ಪಸಂಖ್ಯಾತರಿಗೆ ಬಂಪರ್ ಕೊಡುಗೆಗಳನ್ನು ನೀಡಿ ಎಸ್ಸಿ, ಎಸ್ಟಿ, ಒಬಿಸಿ, ಸಮುದಾಯವನ್ನು ನಿರ್ಲಕ್ಷಿಸಿದ್ದಾರೆ ಮತ್ತು ಗ್ಯಾರಂಟಿಯ ಭಾಗವಾಗಿರುವ ಯುವ ನಿಧಿಗೆ ಅನುದಾನ ಮೀಸಲಿಡದೆ ಎಂದಿನಂತೆ ಎಸ್ ಸಿ ಪಿ/ ಟಿ ಎಸ್ ಪಿ ಅನುದಾನದ ಮೇಲೆ ಮುಖ್ಯಮಂತ್ರಿಗಳು ಕಣ್ಣಿಟ್ಟಂತೆ ಕಾಣುತ್ತಿದೆ ದಲಿತರ ನಿಗಮಗಳಿಗೆ ಇಂದಿನಂತೆ ಅನುದಾನ ನೀಡದೆ ವಂಚಿ ಸುವ ಎಲ್ಲಾ ಲಕ್ಷಣ ಈ ಬಜೆಟ್ ನಲ್ಲಿ ಗೋಚರವಾಗಿದೆ ಕಳೆದ ಮೂರು ಅವಧಿಯ ಬಜೆಟನಲ್ಲಿ ಅನುದಾನ ಘೋಷಿಸಿ ನಿಗಮಗಳಿಗೆ ಅನುದಾನ ನೀಡದ ಮುಖ್ಯಮಂತ್ರಿಗಳು ದಲಿತ ನಿಗಮಗಳ ಸಾಲ ಮನ್ನ ಮಾಡಲು ವಿಫಲರಾಗಿದ್ದಾರೆ.



ಈ ಬಾರಿ ಬಜೆಟ್ ನಲ್ಲಿ ತಾಲೂಕಿಗೆ ಸಂಚಾರಿ ಪೊಲೀಸ್ ಠಾಣೆ ನೀಡಿದ್ದು ಪಟ್ಟಣದ ಯುಜಿಡಿ ಅಭಿವೃದ್ಧಿಗೂ ಬಜೆಟ್ ನಲ್ಲಿ ಘೋಷಿಸಿದ್ದು, ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಸಹಕಾರ ಬ್ಯಾಕ್ ಸ್ಥಾಪನೆ ಗೆ ಷೋಷಿಸಲಾಗಿದೆ, ಜಿಲ್ಲಾ ಮತ್ತು ತಾಲ್ಲೂಕು ಅಸ್ಪತ್ರೆ ಮೇಲ್ದರ್ಜೆಗೆ ಏರಿಸುವುದು , ಹದಿನೈದು ಸಾವಿರ ಶಿಕ್ಷಕರ ಉದ್ಯೋಗ ನೇಮಕ,ಸೇರಿದಂತೆ, ಶಿಕ್ಷಣ. ಕೃಷಿ , ಆರೋಗ್ಯ, ಸೇರಿದಂತೆ ಎಲ್ಲಾ ಕ್ಷೇತ್ರಕ್ಕೂ ಬಜೆಟ್ ನಲ್ಲಿ ಅದ್ಯತೆ ನಿಡುವುದರ ಜೊತೆಗೆ ಗ್ಯಾರಂಟಿ ಯೋಜನೆಗಳ ಮೂಲಕ ಬಡವರ್ಗದ ಜನರಿಗೆ ಅನುಕೂಲವಾಗುವಂತೆ ಮುಂದುವರೆಸಲಾಗಿದ್ದು. ಮುಖ್ಯಮಂತ್ರಿ ಸಿದ್ದರಾಮಯ್ಯ ನವರು 17. ನೇ ಬಾರಿ ಬಜೆಟ್ ಮಂಡನೆ ಮಾಡಿದ್ದಾರೆ ಎಂದರೆ ಅವರಿಗೆ ಜನಪರ ಕಾಳಜಿ ಚಿಂತನೆಇರುವುದಕ್ಕೆ

▸ ಎಚ್ ಎಂ ಗಣೇಶ ಪ್ರಸಾದ್ ಶಾಸಕ



ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಮಂಡಿಸಿದ 2026-27 ಸಾಲಿನ ರಾಜ್ಯ ಬಜೆಟ್ ಅತ್ಯಂತ ಅಶಾದಾಯಕವಾದ ಬಜೆಟ್ ಗುಂಡ್ಲುಪೇಟೆ ತಾಲೂಕಿನಗೆ ಸಂಚಾರಿ ಪೋಲಿಸ್ ಠಾಣೆ ಮತ್ತು ಯುಜಿಡಿ. ಜಿಲ್ಲಾ ಮಟ್ಟದಲ್ಲಿ ಸಹಕಾರಬ್ಯಾಂಕ್ ಸ್ಥಾಪನೆ ಹನೂರು ತಾಲೂಕಿಗೆ ಕುಡಿಯುವ ನೀರು ಮತ್ತು ಅಂತರ್ಜಲ ವೃದ್ಧಿಗಾಗಿ ಏತ ನೀರಾವರಿ ಯೋಜನೆಯನ್ನು ಘೋಷಣೆ ಮತ್ತು ಶಿಕ್ಷಣ ಕೃಷಿ ಅರೋಗ್ಯ ಸೇರಿದಂತೆ ಐದು ಗ್ಯಾರಂಟಿ ಯೋಜನೆಗಳಿಗೆ ಸಮರ್ಪಕವಾಗಿ ಹಣ ಮೀಸಲಿ ಡುವುದರ ಜೊತೆಗೆ ಮೂಲ ಸೌಕರ್ಯ ಹಾಗೂ ಜನ ಸಾಮಾನ್ಯರ ಬದುಕನ್ನು ಹಸನಾಗಿಸುವ ಜನಪರ ಬಜೆಟ್ ಅಗಿದೆ.

▸ ಹೂಸಹಳ್ಳಿ ಮಧುಸೂದನ್ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಜಿಲ್ಲಾ ಅಧ್ಯಕ್ಷ



ಮುಖ್ಯ ಮಂತ್ರಿ ಸಿದ್ದರಾಮಯ್ಯ ರವರ 2026-27 ನೇ ಬಜೆಟ್ ರೈತರು, ಕಾರ್ಮಿಕರು , ಮಹಿಳೆಯರು ,ದಮನಿತರು ಹಾಗೂ ಅಲ್ಪ ಸಂಖ್ಯಾತರ ಹಿತವನ್ನು ಕಾಪಾಡುವ ಆಯವ್ಯಯ ಆಗಿದೆ. 17 ನೇ ಬಾರಿ ಬಜೆಟ್ ಮಂಡನೆ ಮಾಡಿದ ಹೆಗ್ಗಳಿಕೆಗೂ ಪಾತ್ರವಾಗಿದೆ. ಶಿಕ್ಷಣ , ಮಹಿಳಾ ಮತ್ತು ಮಕ್ಕಳ ಕಲ್ಯಾಣ , ಗ್ರಾಮೀಣಾಭಿವೃದ್ಧಿ , ಸಮಾಜ ಕಲ್ಯಾಣ ಇಲಾಖೆ ಕೃಷಿಗೆ ಹೆಚ್ಚು ಉತ್ತೇಜನ ನೀಡಿರುವುದು ಆಶಾದಾಯಕವಾಗಿದೆ. ಗರ್ಭಿಣಿ ,ಬಾಣಂತಿ ಹಾಗೂ ವಯೋವೃದ್ಧರಿಗೆ ಸಹಕಾರಿ ಆಗಿರುವುದರಿಂದ ಜನ ಸಾಮಾನ್ಯರ ಆರೋಗ್ಯ ರಕ್ಷಣೆಯಿಂದ ಕೂಡಿದ ಇದೊಂದು ಜನಪರ ಬಜೆಟ್ ಆಗಿದೆ.

▸ ಸುಭಾಷ್ ಮಾಡ್ರಹಳ್ಳಿ ಜಿಲ್ಲಾ ಸಂಚಾಲಕರು, ಮಾನವ ಬಂಧುತ್ವ ವೇದಿಕೆ. ಚಾಮರಾಜನಗರ ಜಿಲ್ಲೆ.



2026-27ನೇ ಸಾಲಿನ ಬಜೆಟ್ ದೂರದೃಷ್ಟಿ ಇಲ್ಲದೆ ಬರಿ ಗಾತ್ರದಲ್ಲಿ ಮಾತ್ರ ದೊಡ್ಡ ಬಜೆಟ್ ಇದಾಗಿದೆ. ರೈತರ ಬಾಳು ಹಸನಾಗಿಸುವ ಯಾವುದೇ ಯೋಜನೆಗಳಿಲ್ಲ, ಹಾಗೂ SCSP /TSP ಹಣವನ್ನು ಅನ್ಯ ಉದ್ದೇಶಕ್ಕೆ ಮತ್ತೆ ಮತ್ತೆ ಬಳಸಿ ಮಹಾ ಮೋಸ ವೆಸಗಿದ್ದಾರೆ.ಭೂ ಒಡೆತನ, ಗಂಗಾ ಕಲ್ಯಾಣ, ಐರಾವತ ಮುಂತಾದ ದಲಿತರು ಸ್ವಾವಲಂಬನೆಯಿಂದ ಬದುಕುವ ಯೋಜನಗಳಿಗೆ ಸರ್ಕಾರ ಕಡೆಗಣಿಸಿ, ಅಪಮಾನಿಸಿದೆ. ಹಾಗೂ ಅಂಗನವಾಡಿ ಕಾರ್ಯಕರ್ತೆಯರು ಗೌರವ ಧನ ಹೆಚ್ಚಿಸಿ ಎಂಬ ಬೇಡಿಕೆಯನ್ನು ಮನ್ನಿಸದೆ ಕೇವಲ ಸಮವಸ್ತ್ರ ನೀಡುತ್ತೇವೆ ಎಂದು ನಾಡಿನ ಮಹಿಳೆಯರನ್ನು ಕಡೆಗಣಿಸಿದ್ದಾರೆ. ಒಟ್ಟಾರೆ, ಸರ್ವ ಸಮಾಜದ ಕಣ್ಣೊರಿಸುವ, ಅಭಿವೃದ್ಧಿ ಚಿಂತನೆಗಳಿಲ್ಲದ ಬಜೆಟ್ ಇದಾಗಿದೆ.

▸ ಡಾ ನವೀನ್ ಮೌರ್ಯ ಜಿಲ್ಲಾಧ್ಯಕ್ಷರು, ಬಿಜೆಪಿ SC ಮೋರ್ಚಾ, ಚಾಮರಾಜನಗರ

# ಹುಸಿಯಾದ ಕೋಟೆ ಜನರ ನಿರೀಕ್ಷೆ

## ರಾಜ್ಯ ಬಜೆಟ್‌ನಲ್ಲಿ ಹಿಂದುಳಿದ ತಾಲೂಕಿಗಿಲ್ಲ ವಿಶೇಷ ಪ್ಯಾಕೇಜ್

▸ ಶಿವಕುಮಾರ ತುಂಬಸೋಗೆ


ಎಚ್.ಡಿ.ಕೋಟೆ: ಮುಖ್ಯಮಂತ್ರಿ ಸಿದ್ದರಾಮಯ್ಯ ದಾಖಲೆಯ 17ನೆ ಬಜೆಟ್ ಮಂಡಿಸುವ ವೇಳೆ ಹಿಂದುಳಿದ ತಾಲೂಕು ಎಚ್.ಡಿ.ಕೋಟೆಗೆ ವಿಶೇಷ ಪ್ಯಾಕೇಜ್ ಅಥವಾ ಒಂದಷ್ಟು ಯೋಜನೆಗಳನ್ನು ಘೋಷಿಸುವರು ಎಂಬ ಜನರ ನಿರೀಕ್ಷೆ ಹುಸಿಯಾದಂತೆ ಕಾಣುತ್ತಿದೆ.

ಜನರ ಜೀವನಾಡಿ ಕಾವೇರಿಯ ಉಪನದಿ ಕಬಿನಿ ಜಲಾಶಯದ ಒಂದಷ್ಟು ಕಾಮಗಾರಿಗಳ ಘೋಷಣೆ ಹೊರತುಪಡಿಸಿ ಈ ಬಜೆಟ್ ನಲ್ಲಿ ಅಷ್ಟೇನು ದಕ್ಕಿಲ್ಲ. 2016ರಲ್ಲಿ ತಾವೇ ಮುಖ್ಯಮಂತ್ರಿ ಆಗಿದ್ದ ವೇಳೆ ಘೋಷಿಸಿದ್ದ ಸರಗೂರು ತಾಲೂಕಿಗೆ ಬಜೆಟ್ ನಲ್ಲಿ ಯಾವುದೇ ಮಾನ್ಯತೆ ನೀಡಿಲ್ಲ. 2000ನೇ ಇಸವಿಯಲ್ಲಿ ಪ್ರೊ.ನಂಜುಂಡಪ್ಪ ನೇತೃತ್ವದಲ್ಲಿ 114 ತಾಲೂಕುಗಳಲ್ಲಿ ನಡೆದ ಸರ್ವೆಯಲ್ಲಿ, ನಲವತ್ತು ಹಿಂದುಳಿದ ತಾಲೂಕುಗಳಲ್ಲಿ ಮೊದಲಿಗ ತಾಲೂಕು ಎಂಬ ಕುಖ್ಯಾತಿ ಪಡೆದಿತ್ತು. ಭರ್ತಿ ಎರಡೂವರೆ ದಶಕಗಳೇ ಕಳೆದರೂ ತಾಲೂಕಿನ ಅಭಿವೃದ್ಧಿಗೆ ಹಿಡಿದಿರುವ ಗ್ರಹಣ ಕಳೆದಿಲ್ಲ.

ಸ್ಥಳೀಯ ಶಾಸಕರು ಒಂದು ಪಕ್ಷ, ಆಡಳಿತ ಮತ್ತೊಂದು ಪಕ್ಷ ಹಾಗೂ ವಿಧಾನಸಭೆ ಚುನಾವಣೆಯಲ್ಲಿ ಒಮ್ಮೆ ಗೆಲುವು ಸಾಧಿಸದವರು ಪುನರಾಯ್ಕೆಯಾಗದಿರುವುದು ಸೇರಿದಂತೆ ಇತರೆ ಕಾರಣಗಳಿಂದ ಅಭಿವೃದ್ಧಿಗೆ ಕುಂಠಿತ ಎಂದು ಊಹಿಸಲಾಗಿತ್ತು. ಆದರೆ ಇದೀಗ, ಶಾಸಕ ಅನಿಲ್ ಚಿಕ್ಕಮಾದು ಎರಡನೇ ಅವಧಿಗೆ ಆಯ್ಕೆಯಾಗಿರುವುದು, ಜಿಲ್ಲೆಯವರೇ ಮುಖ್ಯಮಂತ್ರಿ ಆದ ಸಿದ್ದರಾಮಯ್ಯ, ಎಚ್.ಸಿ. ಮಹದೇವಪ್ಪ ಹಾಗೂ ಕೆ.ವೆಂಕಟೇಶ್ ಜಿಲ್ಲೆಯ ಸಚಿವದ್ವಯರ ಜೊತೆ ಅನಿಲ್ ಚಿಕ್ಕಮಾದು ನಿಕಟ ಸಂಪರ್ಕ ಹೊಂದಿರುವುದರಿಂದ ಅಭಿವೃದ್ಧಿಯ ನಿರೀಕ್ಷೆ ಸಾಮಾನ್ಯವಾಗಿತ್ತು. ತಾಲೂಕಿನಲ್ಲಿ ಬಹುತೇಕ ಗ್ರಾಮಗಳಿಗೆ ಸಂಪರ್ಕ ರಸ್ತೆ ಹದಗೆಟ್ಟಿರುವುದು, ಕುಡಿಯುವ ನೀರು, ಸಾರಿಗೆ, ವಿದ್ಯುತ್ ಸೇರಿದಂತೆ ಮೂಲ ಸೌಲಭ್ಯಗಳಿಂದ ವಂಚಿತವಾಗಿವೆ. ಗ್ಯಾರಂಟಿ ಹೋಜನೆಗಳ ಹೊಡೆತದಿಂದಾಗಿ, ಶಾಸಕರ ನಿರೀಕ್ಷೆಯ ಪ್ರಮಾಣದಲ್ಲಿ ಅನುದಾನ ದೊರೆಯದಿರುವುದು ತಾಲೂಕು ಅಭಿವೃದ್ಧಿಯಲ್ಲಿ ಹಿಂದೆ ಉಳಿದಿರಲು ಕಾರಣ ಎನ್ನಲಾಗುತ್ತಿದೆ. ಎಲ್ಲ ಕಾರಣಗಳನ್ನು ಬದಿಗೊತ್ತಿ ಬಜೆಟ್ ಮೇಲೆ ಬೆಟ್ಟದಷ್ಟು ನಿರೀಕ್ಷೆ ಇಟ್ಟುಕೊಂಡಿದ್ದ ಜನತೆ ಬಜೆಟ್ ಘೋಷಣೆಯನ್ನೇ ಕಾತುರದಿಂದ ಕಾಯುತ್ತಿದ್ದರು.

ನಾಲ್ಕು ಜಲಾಶಯಗಳನ್ನು ಹೊಂದಿರುವ ಏಷ್ಯಾದ ಮೊದಲ ತಾಲೂಕು, ಬಂಡೀಪುರ, ನಾಗರ'ಹೊಳೆ ರಾಷ್ಟ್ರೀಯ ಉದ್ಯಾನವನಗಳನ್ನು ಹಂಚಿಕೊಂಡಿರುವ ತಾಲೂಕು ಹೀಗೆ ಹಲವು ವೈಶಿಷ್ಟ್ಯಗಳನ್ನು ಹೊಂದಿರುವ ತಾಲೂಕಿನಲ್ಲಿ ವನ, ಜಲ ಸಂಪತ್ತಿದ್ದು, ಪರಿಸರ ಪ್ರವಾಸೋದ್ಯಮಕ್ಕೆ ವಿಪುಲ ಅವಕಾಶಗಳಿವೆ. ತಾಲೂಕಿನ ಸಮಗ್ರ ಅಭಿವೃದ್ಧಿಯೇ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳಿಗೆ ಸವಾಲಾಗುವುದರ ಜೊತೆಗೆ ಇಚ್ಛಾಸಕ್ತಿಯ ಕೊರತೆಯೂ ಕಾರಣ ಎನ್ನಲಾಗುತ್ತಿದೆ.

ಯುವ ಸಮೂಹದ ಉದ್ಯೋಗಕ್ಕಾಗಿ ಕಾರ್ಖಾನೆ, ಗಾರ್ಮೆಂಟ್ಸ್ ತೆರೆಯುವ ಸುದ್ದಿ ಆಗೊಮ್ಮೆ-ಹೀಗೊಮ್ಮೆ ಮುನ್ನೆಲೆಗೆ ಬರುತ್ತಿದ್ದರೂ ಕಾರ್ಯರೂಪಕ್ಕೆ ಬರುತ್ತಿಲ್ಲ. ಕಬಿನಿ ಜಲಾಶಯದ ಮುಂಭಾಗ ಬೃಂದಾವನ ನಿರ್ಮಾಣದ ವಿಷಯ ಆಗ್ಗಿಂದಾಗ ಪ್ರಸ್ತಾಪ ಆಗುತ್ತಿದ್ದರೂ ಪ್ರಯೋಜನವಾಗುತ್ತಿಲ್ಲ. ಶುಕ್ರವಾರ ಮಂಡಿಸಿದ ಬಜೆಟ್ ಅಲ್ಲಿ ಕಬಿನಿ ಅಣೆಕಟ್ಟೆ ಮೇಲ್ಭಾಗದಲ್ಲಿ ಪುನರುಜ್ಜೀವನ ಕಾಮಗಾರಿ ಎಂದಷ್ಟೇ ಹೇಳಲಾಗಿದೆ.



### ದಶಕ ಕಳೆದರೂ ಅಭಿವೃದ್ಧಿಯಾಗದ ಸರಗೂರು!

ಜಿಲ್ಲೆಯಲ್ಲಿ ಭೌಗೋಳಿಕವಾಗಿ ವಿಸ್ತಾರವಾಗಿದ್ದ ತಾಲೂಕನ್ನು ಆಡಳಿತಾತ್ಮಕ ದೃಷ್ಟಿಯಿಂದ, ಹಲವು ವರ್ಷಗಳಿಂದ ತಾಲೂಕು ಘೋಷಣೆ ಕೂಗು ಕೇಳುತ್ತಿದ್ದರಿಂದ, ಸರಗೂರು ತಾಲೂಕು ಹೋರಾಟ ಸಮಿತಿ ಹಾಗೂ ಅಂದಿನ ಶಾಸಕ ದಿ.ಎಸ್.ಚಿಕ್ಕಮಾದು ಅವರ ಪ್ರಯತ್ನದಿಂದ 2016ರಲ್ಲಿ ಸರಗೂರನ್ನು ಪ್ರತ್ಯೇಕ ತಾಲೂಕು ಕೇಂದ್ರವಾಗಿ ಘೋಷಣೆ ಮಾಡಲಾಯಿತು. ಅಲ್ಲಿಂದ ಇಲ್ಲಿಯವರೆಗೆ ಬೆರಳೆಣಿಕೆಯ ಇಲಾಖೆಗಳು ಕಾರ್ಯನಿರ್ವಹಿಸುತ್ತಿವೆ. ಹೈಟೆಕ್ ಆಸ್ಪತ್ರೆ, ಕೃಷಿ, ತೋಟಗಾರಿಕೆ, ನ್ಯಾಯಾಲಯ, ಲೋಕೋಪಯೋಗಿ, ಶಿಕ್ಷಣ, ಕಾರ್ಮಿಕ ಸೇರಿದಂತೆ ಇತರೆ ಇಲಾಖೆಗಳು ಒಂದೇ ಸೂರಿನಡಿ ಕಾರ್ಯನಿರ್ವಹಿಸಲು ಆಡಳಿತ ಸೌಧ ಇಲ್ಲದಿರುವುದರಿಂದ ಇಲ್ಲಿನ ಜನತೆ ಅನಿವಾರ್ಯವಾಗಿ ಎಚ್.ಡಿ.ಕೋಟೆಯನ್ನು ಅವಲಂಭಿಸಿದ್ದಾರೆ.

### ಬಜೆಟ್ ಅಲ್ಲಿ ಸಿಎಂ ಕೋಟೆಗೆ ಕೊಟ್ಟಿದ್ದೇನು?

- ಕಬಿನಿ ಅಣೆಕಟ್ಟೆ ಮೇಲ್ಭಾಗದಲ್ಲಿ ಪುನರುಜ್ಜೀವನ ಕಾಮಗಾರಿ.
- ಕಬಿನಿ ಎಡದಂಡೆ ನಾಲೆ ಅಭಿವೃದ್ಧಿ.
- ಕಬಿನಿ ಬಲದಂಡೆ ನಾಲೆಯ ವಿತರಣಾ ನಾಲೆ ಆಧುನೀಕರಣ.
- ಮಳವಳ್ಳಿ-ಬಾವಲಿ, ಕೋಟೆ ಮಾರ್ಗ ಕೇರಳ ಗಡಿವರೆಗೆ 141 ಕಿ.ಮೀ ರಸ್ತೆ ಅಭಿವೃದ್ಧಿಗೆ ಕ್ರಮ.
- ಕೆರೆಗಳ ಕೆರೆ ಹಾಗೂ ನಾಲೆಯ ಅಭಿವೃದ್ಧಿ.



ಹ್ಯಾಂಡ್ ಪೋಸ್ಟ್- ಸರಗೂರು, ಸರಗೂರು- ಗುಂಡ್ಲುಪೇಟೆ ದ್ವಿ-ಪಥ ರಸ್ತೆ ಘೋಷಣೆ ಸೇರಿದಂತೆ ಸರಗೂರು ಅಭಿವೃದ್ಧಿಗೆ ವಿಶೇಷ ಪ್ಯಾಕೇಜ್ ಘೋಷಣೆಯ ನಿರೀಕ್ಷೆಯಿದ್ದೆವು. ಯಾವೊಂದು ಯೋಜನೆ ಘೋಷಿಸದಿರುವುದು ನಿರಾಸೆಯಾಗಿದೆ.

▸ -ಶ್ರೀನಿವಾಸ್ ಪ.ಪಂ ಸದಸ್ಯ ಸರಗೂರು



ನಿರಾಶಾದಾಯಕ ಬಜೆಟ್ ಗ್ರೇಟರ್ ಬೆಂಗಳೂರಿಗೆ ಚುನಾವಣಾ ದೃಷ್ಟಿಯಿಂದ ಹಣ ಮಿಸಲಿಟ್ಟಿದ್ದು, ಬೃಹತ್ ಮೈಸೂರಿಗೆ ಮಾತ್ರ ಹಣ ಮೀಸಲಿಟ್ಟಿರುವುದಿಲ್ಲ. ಮೈಸೂರಿನ ಖಾಸಗಿ ಲೇಔಟ್‌ಗಳ ಅಭಿವೃದ್ಧಿಗೆ ಮತ್ತು ಮೂಲಭೂತ ಸೌಕರ್ಯಕ್ಕೆ ಈ ಬಾರಿ ಹಣ ನಿಗಧಿ ಮಾಡುತ್ತಾರೆಂಬ ನಿರೀಕ್ಷೆಯಿತ್ತು. ಆ ನಿರೀಕ್ಷೆಯು ಸುಳ್ಳಾಗಿದೆ. ವಸತಿ ಯೋಜನೆಯಡಿ ರಾಜೀವ್ ಗಾಂಧಿ ರೂರಲ್ ಹೌಸಿಂಗ್ ಬೋರ್ಡ್ ಮತ್ತು ಆಶ್ರಯ ಯೋಜನೆಯ ಫಲಾನುಭವಿಗಳ ವಂತಿಗೆ ಮೊತ್ತವನ್ನು 5 ಲಕ್ಷದವರೆಗೆ ಏರಿಸುವ ಭರವಸೆ ನೀಡಿದ್ದರು, ಅದು ಸಹ ಹುಸಿಯಾಗಿದೆ.

▸ - ಟಿ.ಎಸ್. ಶ್ರೀವತ್ಸ ಶಾಸಕ

ಶಿಕ್ಷಣಕ್ಕೆ ಗಮನ ನೀಡಿಲ್ಲ ಜನರ ಆದಾಯದ ಬಹುಪಾಲು ಸಂಪಾದನೆ ಆರೋಗ್ಯ ಮತ್ತು ಶಿಕ್ಷಣಕ್ಕೆ ವೆಚ್ಚವಾಗುತ್ತಿದ್ದರೂ ಆರೋಗ್ಯ ಮತ್ತು ಶಿಕ್ಷಣಕ್ಕೆ ಸರ್ಕಾರ ಗಮನ ನೀಡಿಲ್ಲ. ಶಿಕ್ಷಣಕ್ಕೆ ಕಳೆದ ಬಾರಿಗಿಂತ ಈ ಬಾರಿ ಕಡಿಮೆ ಹಣ ಮೀಸಲಿಡಲಾಗಿದೆ. ಮೈಸೂರು ನಗರಕ್ಕೆ ಬೆಳಗಿನಿಂದ ರಾತ್ರಿ 10 ರ ವರೆಗೆ ಕೆಲಸ ಮಾಡುವ ವಾರ್ಡ್ ಕ್ಲಿನಿಕ್‌ಗಳ ಅಗತ್ಯ ಇತ್ತು. ಇದು ಬಡವರಿಗೆ,ಕೂಲಿಕಾರ್ಮಿಕರಿಗೆ ಅನುಕೂಲವಾಗುತ್ತಿತ್ತು,ಅದರೆ ಈ ಬಜೆಟ್‌ನಲ್ಲಿ ಗಮನ ಹರಿಸಿಲ್ಲ.

▸ ಜಗದೀಶ್ ಸೂರ್ಯ ಜಿಲ್ಲಾ ಕಾರ್ಯದರ್ಶಿ, ಸಿಪಿಐ(ಎಂ)

### ಕೈಗಾರಿಕೆಗೆ ಹೊಸ ಘೋಷಣೆ ಇಲ್ಲ

ರಾಜ್ಯ ಬಜೆಟ್‌ನಲ್ಲಿ ಕೈಗಾರಿಕಾ ಕ್ಷೇತ್ರಕ್ಕೆ, ವಿಶೇಷವಾಗಿ ಎಂಎಸ್‌ಎಂಇ ಕ್ಷೇತ್ರಕ್ಕೆ ಯಾವುದೇ ಹೊಸ ಘೋಷಣೆ ಮಾಡಿಲ್ಲ. ಕಳೆದ ಬಜೆಟ್‌ನಲ್ಲಿ ಘೋಷಿಸಿದ್ದ ನೀತಿಯನ್ನು ಮತ್ತೆ ಪುನರುಚ್ಚಾರಣೆ ಮಾಡಿರುವುದು ಮಾತ್ರ ಕಾಣುತ್ತದೆ.

▸ -ಪಿ.ವಿಶ್ವನಾಥ್ ಅಧ್ಯಕ್ಷ, ಮೈಸೂರು ಕೈಗಾರಿಕೆಗಳ ಸಂಘ.

### ರಫ್ತು ಕೇಂದ್ರಕ್ಕೆ ಅನುದಾನವಿಲ್ಲ

ಎಂಎಸ್‌ಎಂಇ ಕ್ಲಸ್ಟರ್ ಅಭಿವೃದ್ಧಿಗೆ 10 ಕ್ಲಸ್ಟರ್ ಘೋಷಿಸಿರುವುದು ಹಾಗೂ ನೇಕಾರರ ಮಗ್ಗಗಳಿಗೆ ರಿಯಾಯಿತಿ ವಿದ್ಯುತ್‌ಗಾಗಿ 22 ಕೋಟಿ ಮೀಸಲಿಟ್ಟಿರುವುದು ಸ್ವಾಗತಾರ್ಹ. ಆದರೆ ಮೈಸೂರು ರಫ್ತು ಕೇಂದ್ರಕ್ಕೆ ಅನುದಾನ ನೀಡದೇ ಇರುವುದು, ಹೆಬ್ಬಾಳು?ತಾಂಡ್ಯ ವಿಶೇಷ ಹೂಡಿಕೆ ವಲಯ ಹಾಗೂ ಕೈಗಾರಿಕಾ ಮೂಲಸೌಕರ್ಯ ಅಭಿವೃದ್ಧಿಗೆ ಸ್ಪಷ್ಟ ಘೋಷಣೆ ಇಲ್ಲದಿರುವುದು ವಿಷಾದನೀಯ.

▸ -ಸುರೇಶ್‌ಕುಮಾರ್ ಜೈನ್ ಪ್ರಧಾನ ಕಾರ್ಯದರ್ಶಿ, ಮೈಸೂರು ಕೈಗಾರಿಕೆಗಳ ಸಂಘ.

### ರೈತರಿಗೆ ಬಣ್ಣದ ಚಿಟ್ಟೆ

ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಡಿಸಿರುವ ಬಜೆಟ್ ರೈತರಿಗೆ ಯಾವುದೇ ಸ್ಪಷ್ಟ ಅನುಕೂಲ ಒದಗಿಸುವಂತಿಲ್ಲ. ಹಿಂದೆ ನೀಡುತ್ತಿದ್ದ ಕಿಸಾನ್ ಸಮ್ಮಾನ್ ಯೋಜನೆಯ 4 ಸಾವಿರ ರೂ. ಸಹಾಯಧನವನ್ನು ನಿಲ್ಲಿಸಿದ್ದು ರೈತರಲ್ಲಿ ನಿರಾಸೆ ಮೂಡಿಸಿದೆ. ಅತಿವೃಷ್ಟಿ?ಅನಾವೃಷ್ಟಿ ಪರಿಹಾರ ಹೆಚ್ಚಿಸುವ ನಿರೀಕ್ಷೆಯೂ ಈಡೇರಿಲ್ಲ. ಹೀಗಾಗಿ ಈ ಬಜೆಟ್ ರೈತರಿಗೆ ಬಣ್ಣ ಬಣ್ಣದ ಚಿಟ್ಟೆ'ಯಂತಾಗಿದೆ.

▸ - ಬರಡನಪುರ ನಾಗರಾಜ್ ರೈತ ಮುಖಂಡ

# ಸಾಲ ಮಾಡಿ ತುಪ್ಪ ತಿನ್ನುವ ಬಜೆಟ್

ಸಿದ್ದರಾಮಯ್ಯ ಹೋಗಿ ಸಾಲದ ರಾಮಯ್ಯ ಹಾಗಿದ್ದರೆ. ತಾವು ಮಹಾನ್ ಆರ್ಥಿಕ ತಜ್ಞ ಎಂದು ಬೀಗುವ ಸಿಎಂ ಸಿದ್ದರಾಮಯ್ಯನವರು,ರಾಜ್ಯದ ಆರ್ಥಿಕತೆಯನ್ನು ಚೇತೋಹಾರಿಗೊಳಿಸುವ ಬದಲು, ಸಾಲದ ಹೊರೆ ಹೇರಿ ಜನಸಾಮಾನ್ಯರಿಗೆ ಮೋಸ ಮಾಡಿದ್ದಾರೆ.ರಾಜ್ಯದ ಬೊಕ್ಕಸವನ್ನು ಬರಿದು ಮಾಡಿ, ಬಜೆಟ್‌ನಲ್ಲಿ ದಾಖಲೆಯ ಸಾಲ ಘೋಷಿಸುವ ಮೂಲಕ ನಮ್ಮ ಮೇಲೆ ಆರ್ಥಿಕ ಅರಾ ಜಕತೆಯನ್ನು ಹೇರಲಾಗಿದೆ.. ಈ ಸಾಲದ ಪರ್ವತವು ಮುಂದಿನ ಪೀಳಿಗೆಯ ಬದುಕನ್ನು ಮೂರಾ ಬಟ್ಟೆ ಮಾಡುವುದರಲ್ಲಿ ಸಂಶಯವೇ ಇಲ್ಲ. ಒಟ್ಟಾರೆ ರಾಜ್ಯದ ಸಾಲದ ಹೊರೆ 8,24,389 ಲಕ್ಷ ಕೋಟಿಯನ್ನು ದಾಟುತ್ತಿರುವುದು, ಈ ಸರ್ಕಾರದ ಅಪ್ರಬುದ್ಧ ಮತ್ತು ದಿವಾಳಿಕೋರ ಆರ್ಥಿಕ



ನೀತಿಯ ಜ್ವಲಂತ ಸಾಕ್ಷಿ..? ನಮ್ಮ ತೆರಿಗೆ ಹಣವನ್ನು ಲೂಟಿ ಮಾಡಿ, ಗ್ಯಾರಂಟಿ ಹೆಸರಿನಲ್ಲಿ ಸಾಲದ ಹೊರೆ ಹೊರಿಸಿರುವ ಈ ಸರ್ಕಾರಕ್ಕೆ ಜನಸಾಮಾನ್ಯರ ಬವಣೆ ಕಣ್ಣಿಗೆ ಕಾಣುತ್ತಿಲ್ಲವೇ..?

▸ ಸಿ ಎಸ್ ನಿರಂಜನ್ ಕುಮಾರ್ ಬಿಜೆಪಿ ಜಿಲ್ಲಾ ಅಧ್ಯಕ್ಷರು ಹಾಗೂ ಮಾಜಿ ಶಾಸಕರು.

### ಸಾಲದ ಸುಳಿಯಲ್ಲಿ ಸಿಲುಕಿದ ಕರ್ನಾಟಕ

- 2024-25 ನೇ ಸಾಲಿನಲ್ಲಿ 1,05,246 ಕೋಟಿ ಸಾಲ
- 2025-26 ನೇ ಸಾಲಿನಲ್ಲಿ 1.16 ಲಕ್ಷ ಕೋಟಿ ಸಾಲ
- 2026-27 ಸಾಲಿನಲ್ಲಿ 1.32 ಲಕ್ಷ ಕೋಟಿ ಸಾಲ

## ಡಾ.ಹೆಚ್.ಸಿ.ಮಹದೇವಪ್ಪ

# ಆರ್ಥಿಕ ಶಿಸ್ತಿನ ಎಲ್ಲರಿಗೂ ನ್ಯಾಯ

ಮೈಸೂರು: 2026-27 ನೇ ಸಾಲಿನಲ್ಲಿ ದಾಖಲೆಯ 17 ನೇ ಬಜೆಟ್ ಅನ್ನು ಮಂಡಿಸಿದ ಮುಖ್ಯಮಂತ್ರಿ ಸಿದ್ಧರಾಮಯ್ಯನವರು ಆರ್ಥಿಕ ಶಿಸ್ತಿನ ಪರಿಮಿತಿಯಲ್ಲಿ ಎಲ್ಲರಿಗೂ ನ್ಯಾಯ ಒದಗಿಸುವ ಕೆಲಸವನ್ನು ಮಾಡಿದ್ದಾರೆ ಎಂದರು ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಹಾಗೂ ಸಮಾಜ ಕಲ್ಯಾಣ ಇಲಾಖೆ ಸಚಿವ ಡಾ.ಎಚ್.ಸಿಮಹದೇವಪ್ಪ ಹೇಳಿದರು.



ಹಣಕಾಸು ಜವಾಬ್ದಾರಿ ಕಾಯ್ದೆಯ ನಿಯಮಾವಳಿಗೆ ಅನುಸಾರವಾಗಿ ನಮ್ಮ ರಾಜ್ಯದ ವಿತ್ತೀಯ ಕೊರತೆಯ ಪ್ರಮಾಣವು ಕೇವಲ ಶೇ.2.5 ನಷ್ಟಿದ್ದು ಸಾಲದ ಪ್ರಮಾಣವು ಶೇ.24.94 ನಷ್ಟಿದೆ. 4.48 ಲಕ್ಷ ಕೋಟಿಯ ರಾಜ್ಯದ ಬಜೆಟ್ ನಲ್ಲಿ ಶಿಕ್ಷಣ, ಆರೋಗ್ಯ, ಕೃಷಿ, ಸಹಕಾರ, ಪರಿಶಿಷ್ಟರ ಕಲ್ಯಾಣದ ಆದಿಯಾಗಿ ಎಲ್ಲಾ ವಲಯಗಳಿಗೂ ಕೂಡಾ ನ್ಯಾಯಬದ್ಧವಾದ ಅನುದಾನ ಹಂಚಿಕೆ ಮಾಡಲಾಗಿದ್ದು, ಎಲ್ಲ ಜಾತಿ, ಧರ್ಮ ಮತ್ತು ಜನಾಂಗದ ಹಿತಾಸಕ್ತಿಯನ್ನು ಕಾಪಾಡುವ ಕೆಲಸವನ್ನು ಮಾಡಿದ್ದಾರೆ. ಮುಖ್ಯವಾಗಿ ಕೇಂದ್ರದಿಂದ ರಾಜ್ಯಕ್ಕೆ ಬರಬೇಕಾದ 15000 ಕೋಟಿ ರೂಪಾಯಿಗಳ ಜಿಎಸ್ ಟಿ ತೆರಿಗೆ ಪಾಲು ಬಾಕಿಯಿದ್ದು, ಕೇಂದ್ರದ ನಿರಂತರವಾದ ತಾರತಮ್ಯ ಧೋರಣೆಯ ನಡುವೆಯೂ ರಾಜ್ಯದ ಜಿಡಿಡಿಪಿ ಅಭಿವೃದ್ಧಿ ದರವು ಶೇ.8.1 ರಷ್ಟಿದ್ದು ಕೇಂದ್ರದ ಜಿಡಿಪಿ ದರಕ್ಕಿಂತಲೂ ಹೆಚ್ಚಿನ ಸಾಧನೆ ಮಾಡಿರುವುದು ಸರ್ಕಾರದ ಆಡಳಿತಾತ್ಮಕ ದಕ್ಷತೆಗೆ ಹಿಡಿದ ಕನ್ನಡಿಯಾಗಿದೆ ಎಂದರು.

ಸಮಾಜ ಕಲ್ಯಾಣ ಇಲಾಖೆಗೆ ಈ ಬಾರಿ, ಕಳೆದ ಬಾರಿಗಿಂತಲೂ ಹೆಚ್ಚಿನ ಅನುದಾನ ನೀಡಲಾಗಿದ್ದು ಶೋಷಿತರ ಬದುಕಿಗೆ ಸಂಬಂಧಿಸಿದಂತೆ ಇರುವ ಸರ್ಕಾರದ ಬದ್ಧತೆಯು ಮುಂದುವರೆದಿದೆ. ಮುಖ್ಯವಾಗಿ ವಿಶ್ವವಿದ್ಯಾಲಯಗಳಲ್ಲಿ ಜಾತಿ/ಧರ್ಮಾಧಾರಿತವಾಗಿ ದೌರ್ಜನ್ಯಗಳನ್ನು ತಡೆಯಲು ರೋಹಿತ್ ವೇಮುಲ ಕಾಯ್ದೆಯನ್ನು ಜಾರಿ ಮಾಡಲಾಗಿದ್ದು, ಬೌದ್ಧ ಅಭಿವೃದ್ಧಿ ನಿಗಮ ಸ್ಥಾಪಿಸಿ, ಬೌದ್ಧ ಬಿಕ್ಕುಗಳಿಗೆ 6000 ರೂಪಾಯಿ ವೇತನವನ್ನು ನಿಗದಿ ಪಡಿಸಿರುವುದು ಅತ್ಯಂತ ವಿಶೇಷ ಸಂಗತಿಯಾಗಿದ್ದು ನಮ್ಮ ಸರ್ಕಾರವು ನುಡಿದಂತೆ ನಡೆಯುವ ತನ್ನ ಪರಂಪರೆಯನ್ನು ಮುಂದುವರೆಸಿದೆ ಎಂದರು.

ವರ್ತಮಾನ

ಶನಿವಾರ
ಮಾರ್ಚ್ 7, 2026

# ಅಭಿವೃದ್ಧಿ ಮತ್ತು ಸಾಮಾಜಿಕ ನ್ಯಾಯದ ಸಮತೋಲಿತ ಬಜೆಟ್

**ಎಂಎಲ್ಸಿ ಕೆ.ಶಿವಕುಮಾರ್**

- **ಬೌದ್ಧ ಅಭಿವೃದ್ಧಿ ನಿಗಮ ಸ್ಥಾಪನೆ ಮತ್ತು ಬೌದ್ಧ ಬಿಕ್ಕುಗಳಿಗೆ ಮಾಸಿಕ 6000 ಸಹಾಯಧನ**
- **ಮೈಸೂರಿನ ಜಯದೇವ ಆಸ್ಪತ್ರೆಯಲ್ಲಿ 200 ಹೆಚ್ಚುವರಿ ಹಾಸಿಗೆಯೊಂದಿಗೆ ಮೇಲ್ದರ್ಜೆಗೆ**
- **ಬೆಂಗಳೂರಿನಲ್ಲಿ ಮತ್ತೊಂದು ಜಯದೇವ ಆಸ್ಪತ್ರೆ ಪ್ರಾದೇಶಿಕ ಕೇಂದ್ರ ಸ್ಥಾಪನೆ**

ಮೈಸೂರು: ನಾಡಿನ ಜನಪ್ರಿಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ರಾಜ್ಯದ ಇತಿಹಾಸದಲ್ಲಿ 17ನೇ ಬಜೆಟ್ ಮಂಡಿಸುವ ಮೂಲಕ ಹೊಸ ದಾಖಲೆ ನಿರ್ಮಿಸಿದ್ದಾರೆ. ಈ ಬಾರಿಯ ಅವರು ಮಂಡಿಸಿರುವ ರೂ.4,48,004 ಕೋಟಿ ಗಾತ್ರದ ಬಜೆಟ್ ಬಡಜನರ ಪರವಾಗಿ, ಅಭಿವೃದ್ಧಿಗೆ ಪೂರಕವಾಗಿ ಸರ್ವಜನಾಂಗದ ಹಿತ ಕಾಯುವ ಬಜೆಟ್



ಎಂದು ವಿಧಾನ ಪರಿಷತ್ ಸದಸ್ಯರಾದ ಕೆ.ಶಿವಕುಮಾರ್ ಪ್ರಶಂಸೆ ಮಾಡಿದ್ದಾರೆ.

ತಾವು ಮಂಡಿಸಿದ ಎಲ್ಲಾ ಬಜೆಟ್ನಲ್ಲಿ ಸಾಮಾಜಿಕ ನ್ಯಾಯದ ಪರಿಕಲ್ಪನೆಯಡಿ ರಾಜ್ಯವನ್ನು ಅಭಿವೃದ್ಧಿ ಪಥದತ್ತ ಸಾಗಿಸುತ್ತಿರುವ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು, ಈ ಬಜೆಟ್‌ನಲ್ಲಿ ಆರೋಗ್ಯ, ಶಿಕ್ಷಣ, ಉದ್ಯೋಗ, ತಂತ್ರಜ್ಞಾನ ಮತ್ತು ಕೃಷಿಗೆ ಹೆಚ್ಚಿನ ಒತ್ತು ನೀಡುವ ಮೂಲಕ ನಾಡಿನ ಸಮಗ್ರ ಪ್ರಗತಿಗೆ ಮುನ್ನುಡಿ ಬರೆದಿದ್ದಾರೆ. ಈ ಬಾರಿಯ ಬಜೆಟ್ನಲ್ಲಿ ನಾನು ನಿವೇದನೆ ಮಾಡಿದ ಬಹತೇಕ ಬೇಡಿಕೆಗಳನ್ನು ಮುಖ್ಯಮಂತ್ರಿಗಳು ಈಡೇರಿಸಿದ್ದಾರೆ. ಅತ್ಯಂತ ಸಂಕಷ್ಟದ ಜೀವನ ನಡೆಸುತ್ತಿದ್ದ ಬೌದ್ಧ ಭಿಕ್ಕುಗಳ ಜೀವನ ನಿರ್ವಹಣೆಗೆ ಮಾಸಿಕ 6000 ರೂ. ಗೌರವಧನ ಹಾಗೂ ಬೌದ್ಧ ಅಭಿವೃದ್ಧಿ ನಿಗಮ ಘೋಷಣೆ ಮಾಡುವ ಮೂಲಕ ಕರ್ನಾಟಕದ ಸಾಂಸ್ಕೃತಿಕ ವೈವಿಧ್ಯತೆಯಲ್ಲಿ ಬೌದ್ಧ ಧರ್ಮಕ್ಕೆ ಗೌರವ ಸಲ್ಲಿಸಿದ್ದಾರೆ.

ಚಾಮರಾಜನಗರ ಜಿಲ್ಲೆಯಲ್ಲಿ ಬರಪೀಡಿತ ಪ್ರದೇಶವಾದ ಹನೂರು ತಾಲ್ಲೂಕು ಭಾಗದ ಜನರಿಗೆ ಕುಡಿಯುವ ನೀರು ಹಾಗೂ ಕೃಷಿ ಚಟುವಟಿಕೆಗೆ ಅನುಕೂಲವಾಗುವಂತೆ ಅನುದಾನ ಕೋರಲಾಗಿತ್ತು. ಅದರಂತೆ ಈ ಬಜೆಟ್ ನಲ್ಲಿ ಮುಖ್ಯಮಂತ್ರಿಗಳು ಈ ವಿಚಾರವನ್ನು ಗಂಭೀರವಾಗಿ ಪರಿಗಣಿಸಿ 490 ಕೋಟಿ ರೂ. ನೀರಾವರಿ ಯೋಜನೆಯನ್ನು ಈ ಬಜೆಟ್ನಲ್ಲಿ ಘೋಷಿಸಿದ್ದಾರೆ. ದೇವದಾಸಿಯರ ಸ್ಥಿತಿಗತಿ ಹಾಗೂ ಅವರ ಮಕ್ಕಳ ಶೈಕ್ಷಣಿಕ ಬದುಕು ಅಧ್ಯಯನ ಸಮಿತಿ ರಚಿಸಲು ಕೋರಲಾಗಿತ್ತು. ಸಮಿತಿ ರಚನೆ ಸೇರಿದಂತೆ ದೇವದಾಸಿಯರ ಮಕ್ಕಳ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿಗೆ ಉತ್ತೇಜನ ನೀಡಲು ವಿದ್ಯಾರ್ಥಿವೇತನ ಮತ್ತು ತರಬೇತಿ ಕಾರ್ಯಕ್ರಮಗಳಿಗೆ ಒತ್ತು ನೀಡಲಾಗಿದೆ.

ಮೈಸೂರಿನ ಶ್ರೀ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆಯಲ್ಲಿ 200 ಹೆಚ್ಚುವರಿ ಹಾಸಿಗೆ ಸಾಮರ್ಥ್ಯದೊಂದಿಗೆ ಮೇಲ್ದರ್ಜೆಗೇರಿಸಲು 180 ಕೋಟಿ ರೂ. ಅನುದಾನವನ್ನು ಕಲ್ಪಿಸಿದ್ದಾರೆ. ಈ ಮೂಲಕ ಮಂಡ್ಯ, ಹಾಸನ, ಕೊಡಗು ಮತ್ತು ಚಾಮರಾಜನಗರ ಜಿಲ್ಲೆಯ ಜನರಿಗೆ ಅನುಕೂಲವಾಗಲಿದೆ. ಬೆಂಗಳೂರಿನ ಉತ್ತರ ಭಾಗದಲ್ಲಿ ಮತ್ತೊಂದು ಸುಸಜ್ಜಿತ ಜಯದೇವ ಹೃದ್ರೋಗ ಘಟಕವನ್ನು ಸ್ಥಾಪಿಸುವಂತೆ ಕೋರಲಾಗಿತ್ತು. ಅದರಂತೆ ಬೆಂಗಳೂರಿನ ಗೋವಿಂದರಾಜನಗರದ ಬಿಬಿಎಂಪಿ ಮಲ್ಟಿ-ಸ್ಪೆಷಾಲಿಟಿ ಆಸ್ಪತ್ರೆ ಆವರಣದಲ್ಲಿ15 ಕೋಟಿ ರೂ ಅನುದಾನ ನೀಡಿ ಶ್ರೀ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆಯ ಪ್ರಾದೇಶಿಕ ಕೇಂದ್ರವನ್ನು ಸ್ಥಾಪಿಸಲು ಘೋಷಿಸಲಾಗಿದೆ. ಇದರಿಂದ ಕೋಲಾರ, ಚಿಕ್ಕಬಳ್ಳಾಪುರ ಮತ್ತು ತುಮಕೂರು ಜಿಲ್ಲೆಗಳ ಜನರಿಗೆ ತುರ್ತು ಚಿಕಿತ್ಸೆ ಸುಲಭವಾಗಿ ಮತ್ತು ಸಕಾಲಕ್ಕೆ ಲಭ್ಯವಾಗಲಿದೆ. ಕನ್ನಡ ಸಿನಿಮಾ ರಂಗದಲ್ಲಿ "ಚಿತ್ರಬ್ರಹ್ಮ" ಖ್ಯಾತ ನಿರ್ದೇಶಕರಾದ ಪುಟ್ಟಣ್ಣ ಕಣಗಾಲ್ ಅವರ ಜನ್ಮಸ್ಥಳವನ್ನು ಸಂರಕ್ಷಿಸಿ, ಸಮಗ್ರ ಅಭಿವೃದ್ಧಿಯೊಂದಿಗೆ ಸಾಂಸ್ಕೃತಿಕ ಪ್ರವಾಸಿ ತಾಣವನ್ನಾಗಿ ರೂಪಿಸಲು ನಿಯಮ-330 ನೋಟಿಸ್ ನೀಡಿದ್ದೆ. ಅದರಂತೆ ಮೈಸೂರು ಜಿಲ್ಲೆಯ ಪಿರಿಯಾಪಟ್ಟಣ ತಾಲ್ಲೂಕಿನ "ಕಣಗಾಲ್" ಗ್ರಾಮದಲ್ಲಿ ಅಭಿವೃದ್ಧಿಪಡಿಸಲು ಸರ್ಕಾರ ನಿರ್ಧರಿಸಿದೆ.

ವಿಶ್ವವಿದ್ಯಾನಿಲಯಗಳಲ್ಲಿ ಜಾತಿ ದೌರ್ಜನ್ಯ ತಡೆಗೆ ?ರೋಹಿತ್ ವೇಮುಲ ಕಾಯ್ದೆ?ಯಿಂದ ವಿದ್ಯಾಸಂಸ್ಥೆಗಳಲ್ಲಿ ತಳಸಮುದಾಯದ ವಿದ್ಯಾರ್ಥಿಗಳ ಮೇಲೆ ನಡೆಸುವ ಶೋಷಣೆ ತಪ್ಪಲಿದೆ. ಹಾಗೂ ಕಾಲೇಜು ವಿದ್ಯಾರ್ಥಿಗಳ ಚುನಾವಣೆಯಿಂದ ಯುವ ಸಮೂಹದಲ್ಲಿ ಸಂಘಟನಾತ್ಮಕ ಹೋರಾಟ ಮತ್ತು ನಾಯಕತ್ವ ಗುಣವನ್ನು ಬೆಳೆಯಲಿದೆ.

ಕೃಷಿ ಯಂತ್ರೋಪಕರಣಗಳನ್ನು ಒದಗಿಸಲು ಹೆಚ್ಚುವರಿಯಾಗಿ 300 ಹೊಸ 'ಕೃಷಿ ಯಂತ್ರಧಾರೆ' ಕೇಂದ್ರಗಳನ್ನು ಸ್ಥಾಪಿಸಲು ನಿರ್ಧಾರ ಹಾಗೂ ಸಿರಿಧಾನ್ಯ ಬೆಳೆಗಾರರಿಗೆ ಸಮುದಾಯ ಆಧಾರಿತ ಸಂಸ್ಕರಣಾ ಘಟಕಗಳು ಮತ್ತು ಯಂತ್ರೋಪಕರಣಗಳ ಖರೀದಿಗೆ ವಿಶೇಷ ಪ್ರೋತ್ಸಾಹ ರೈತರಿಗೆ ಅನುಕೂಲವಾಗಿದೆ. ಎಸ್ಸಿಎಸ್ಪಿ ಮತ್ತು ಟಿಎಸ್ಪಿ ಯೋಜನೆಯಡಿ ಪ.ಜಾತಿ ಮತ್ತು ಪ.ಪಂಗಡ ಸಮುದಾಯದ ಅಭಿವೃದ್ಧಿಗಾಗಿ 44,632 ಕೋಟಿ ರೂ. ಅನುದಾನ ಹಂಚಿಕೆ ಹಾಗೂ ಆಯ್ದ 2,000 ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಕಾಲೋನಿಗಳನ್ನು 'ಪ್ರಗತಿ ಕಾಲೋನಿ'ಗಳಾಗಿ ಅಭಿವೃದ್ಧಿಪಡಿಸಲು ತಲಾ 1 ಕೋಟಿಯಂತೆ ಒಟ್ಟು 2000 ಕೋಟಿ ರೂ. ಅನುದಾನ ಘೋಷಿಸಿರುವುದು ಶೋಷಿತರ ಪರವಾದ ಸರ್ಕಾರ ಎಂಬುದಕ್ಕೆ ಸಾಕ್ಷಿಯಾಗಿದೆ.

ಬೆಳಗಾವಿ, ಮೈಸೂರು ಮತ್ತು ಕಲಬುರಗಿ ಸೇರಿದಂತೆ ಆಯ್ದ ನಗರಗಳಲ್ಲಿ ಎಸ್ಸಿ ಮತ್ತು ಎಸ್ಟಿ ಸಮುದಾಯದ ಉದ್ಯೋಗಸ್ಥ ಮಹಿಳೆಯರಿಗಾಗಿ ಹೊಸ ಹಾಸ್ಟೆಲ್ ನಿರ್ಮಾಣಕ್ಕೆ ನೀಡಿರುವ ಅನುಮೋದನೆಯು ಪರಿಶಿಷ್ಟರ ಏಳಿಗೆಗೆ ಸರ್ಕಾರ ಬದ್ಧವಾಗಿದೆ ಎಂದು ತಿಳಿಸಿದ್ದಾರೆ.

ಕೃತಕ ಬುದ್ಧಿಮತ್ತೆ (ಎಐ) ಮತ್ತು ರೊಬೋಟಿಕ್ಸ್ ಹಾಗೂ ಎಐ ಸೆಂಟರ್ ಆಫ್ ಎಕ್ಸಲೆನ್ಸ್ ಸ್ಥಾಪನೆಯು ತಂತ್ರಜ್ಞಾನ ಅಳವಡಿಕೆಗೆ ಸಹಕಾರಿಯಾಗಲಿದೆ. ಮಾಹಿತಿ ತಂತ್ರಜ್ಞಾನಕ್ಕೆ ಪೂರಕ ವಾತಾವರಣದಿಂದ ಹೆಚ್ಚಿನ ಉದ್ಯೋಗ ಸೃಷ್ಟಿಯಾಗಲಿದೆ.

ವಿವಿಧ ಸರ್ಕಾರಿ ಇಲಾಖೆಗಳಲ್ಲಿ ಖಾಲಿ ಇರುವ ಒಟ್ಟು 56,432 ಹುದ್ದೆಗಳನ್ನು ಭರ್ತಿ ಮಾಡಲು ಈ ಬಾರಿಯ ಬಜೆಟ್ನಲ್ಲಿ ಘೋಷಣೆ ಮಾಡಿರುವುದು ನಿರೋದ್ಯೋಗಿ ಯುವಸಮೂಹಕ್ಕೆ ಆಶಾದಾಯಕವಾಗಿದೆ. ಒಟ್ಟಾರೆಯಾಗಿ ಮಾನ್ಯ ಮುಖ್ಯಮಂತ್ರಿಗಳು ಮೈಸೂರು ಭಾಗ ಸೇರಿದಂತೆ ಸಮಗ್ರ ಕರ್ನಾಟಕದ ಅಭಿವೃದ್ಧಿಯನ್ನು 2026-27ನೇ ಸಾಲಿನ ರಾಜ್ಯ ಬಜೆಟ್ ನಲ್ಲಿ ಅನಾವರಣ ಮಾಡಿದ್ದಾರೆ.

# ರಾಜ್ಯದ ಐಟಿ ನಗರವಾಗಿ ಮೈಸೂರು

## ಸಿಎಂ ಸಿದ್ದರಾಮಯ್ಯರಿಂದ ತವರಿಗೆ ಭರಪೂರ ಕೊಡುಗೆ, ಜಯದೇವಗೆ ಮತ್ತಷ್ಟು ಬಲ

ಮೈಸೂರು: ಮೈಸೂರಿನಲ್ಲಿ ಏರೋಸ್ಪೇಸ್ ಕೈಗಾರಿಕೆಗಳನ್ನು ಉತ್ತೇಜಿಸಲು ಮೈಸೂರು ವಿಮಾನ ನಿಲ್ದಾಣದ ಹತ್ತಿರದಲ್ಲಿ ಏರೋಸ್ಪೇಸ್ ಪಾರ್ಕ್ ಅನ್ನು ಕೆಐಎಡಿಬಿವತಿಯಿಂದ ಅಭಿವೃದ್ಧಿಪಡಿಸಲಾಗುವುದು. ಮಾಹಿತಿ ತಂತ್ರಜ್ಞಾನ ಕ್ಷೇತ್ರಕ್ಕೆ ಪ್ರೋತ್ಸಾಹ ನೀಡಿದ್ದರಿಂದ 100 ಕಂಪನಿಗಳಲ್ಲಿ 30 ಸಾವಿರಕ್ಕೂ ಹೆಚ್ಚು ಉದ್ಯೋಗಿಗಳು ಕಾರ್ಯನಿರ್ವಹಿ ಸುತ್ತಿದ್ದಾರೆ. ಬೆಂಗಳೂರಿನ ದಟ್ಟಣೆಯನ್ನು ಕಡಿಮೆ ಮಾಡಲು ಹಾಗೂ ವಿಕೇಂದ್ರೀಕೃತ ಆರ್ಥಿಕತೆಯನ್ನು ಪ್ರೋತ್ಸಾಹಿಸಲು ಮೈಸೂರು ನಗರವನ್ನು ರಾಜ್ಯದ ಎರಡನೇ ಐಟಿ ಸಿಟಿಯನ್ನಾಗಿ ಅಭಿವೃದ್ಧಿಪಡಿಸಲಾ ಗುವುದು.

ಹೀಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ದಾಖಲೆಯ ಬಜೆಟ್ ನಲ್ಲಿ ಮೈಸೂರಿಗೆ ಅನೇಕ ಕೊಡುಗೆ ನೀಡಿದ್ದಾರೆ. ಮೈಸೂರು ಮೃಗಾಲಯ ಹಾಗೂ ಬನ್ನೇರುಘಟ್ಟ ಉದ್ಯಾನವನದ ಕಡೆಗೆ ಪ್ರವಾಸಿಗರನ್ನು ಆಕರ್ಷಿಸಲು ಹಾಗೂ ಪ್ರವಾಸಿಗರ ಅನುಕೂಲತೆಗಾಗಿ ಪಿಪಿಪಿ ಮಾದರಿಯಲ್ಲಿ ಪ್ರಕೃತಿ ನಿರೂಪಣಾ ಕೇಂದ್ರವನ್ನು ಸ್ಥಾಪನೆ ಮಾಡಲಾಗುವುದು. ಮೈಸೂರು ಫಿಲ್ಮ್ ಸಿಟಿಯನ್ನು ಸ್ಥಾಪಿಸಲು ಈ ಮೊದಲು 500 ಕೋಟಿ ರೂ.ಗಳಿಗೆ ಅನುಮೋದನೆ ನೀಡಲಾಗಿತ್ತು. ಫಿಲ್ಮ್ ಸಿಟಿ ಸೌಲಭ್ಯಗಳನ್ನು ಒಳಗೊಂಡಂತೆ ಪ್ರವಾಸಿಗರಿಗೆ ಅನುಕೂಲವಾಗುವಂತೆ ಥೀಮ್ ಪಾರ್ಕ್, ಸ್ಟಾರ್ ಹೋಟೇಲ್

### ಪ್ಲಗ್-ಅಂಡ್-ಪ್ಲೇ ಲೀಪ್ ಲ್ಯಾಬ್ಸ್‌ಗಳ ಸ್ಥಾಪನೆ

**ಹುಬ್ಬಳ್ಳಿ, ಇಂದಿರಾನಗರ, ಮೈಸೂರು ಮತ್ತು ದೊಡ್ಡಬಳ್ಳಾಪುರದಲ್ಲಿ ಪ್ಯಾರಾ ಮೆಡಿಕಲ್ ಕೋರ್ಸ್ ಹಾಗೂ ಇಂದಿರಾನಗರದಲ್ಲಿ ಮೂರು ವರ್ಷದ ಪಿಜಿ ಕೋರ್ಸ್‌ಗಳನ್ನು ಪ್ರಾರಂಭಿಸಲಾಗುವುದು. ರಾಜ್ಯದ 2ನೇ ಮತ್ತು 3ನೇ ಹಂತದ ನಗರಗಳಾದ ಹುಬ್ಬಳ್ಳಿ, ಕಲಬುರಗಿ, ಹೊಸಕೋಟೆ ಮತ್ತು ಮೈಸೂರಿನಲ್ಲಿ ಉದ್ಯಮಿಗಳಿಗೆ ಇನ್ ಕ್ಯೂಬೇಷನ್ ಸೌಲಭ್ಯಗಳನ್ನು ಒದಗಿಸಲು ಕಿಯೋನಿಕ್ಸ್ ಸಂಸ್ಥೆಯ ಮೂಲಕ ಪ್ಲಗ್-ಅಂಡ್-ಪ್ಲೇ ಸೌಲಭ್ಯದ ?ಲೀಪ್ ಲ್ಯಾಬ್ಸ್? ಗಳನ್ನು ಸ್ಥಾಪಿಸಲಾಗುವುದು. ಮೈಸೂರಿನಲ್ಲಿ ಮಾಹಿತಿ ತಂತ್ರಜ್ಞಾನ ಕ್ಷೇತ್ರಕ್ಕೆ ಪ್ರೋತ್ಸಾಹ ನೀಡಿದ್ದರಿಂದ 100 ಕಂಪನಿಗಳಲ್ಲಿ ಸುಮಾರು 30 ಸಾವಿರಕ್ಕೂ ಹೆಚ್ಚು ಉದ್ಯೋಗಿಗಳು ಕಾರ್ಯನಿರ್ವಹಿಸುತ್ತಿದ್ದಾರೆ.**



### ಹಾಸ್ಟೆಲ್‌ಗಳ ಸ್ಥಾಪನೆ

**ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಶೈಕ್ಷಣಿಕ ಅನುಕೂಲಕ್ಕಾಗಿ ಬೇಡಿಕೆಯಿರುವ ಜಿಲ್ಲೆಗಳಾದ ಬೆಂಗಳೂರು, ಮೈಸೂರು, ಮಂಗಳೂರು, ಧಾರವಾಡ, ಬೆಳಗಾವಿ, ಕಲಬುರಗಿ, ದಾವಣಗೆರೆ, ಶಿವಮೊಗ್ಗ ಹಾಗೂ ಬಳ್ಳಾರಿಯಲ್ಲಿ 150 ಸಂಖ್ಯಾಬಲದ 50 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಲಾಗುವುದು.**

ಮತ್ತು ರೆಸ್ಟೋರೆಂಟ್‌ಗಳನ್ನು ಒಳಗೊಂಡು ಪಿಪಿಪಿ ಮಾದರಿಯಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಿ ವ್ಯವಹಾರ ವಹಿವಾಟುದಾರರನ್ನು ನೇಮಿಸಲಾಗಿದೆ.

ಮೈಸೂರು ಉದಯಗಿರಿ ದಕ್ಷಿಣ ಪೊಲೀಸ್ ಠಾಣೆ ಅಭಿವೃದ್ಧಿ ಘೋಷಣೆ ಮಾಡಲಾಗಿದೆ. ಕರ್ನಾಟಕ ರಾಜ್ಯ ಉಗ್ರಾಣ ನಿಗಮವನ್ನು ಆರ್ಥಿಕವಾಗಿ ಸದೃಢಗೊಳಿಸುವ ನಿಟ್ಟಿನಲ್ಲಿ ನಿಗಮದ ಅನುಪಯುಕ್ತ ಆಸ್ತಿಗಳನ್ನು ನಗದೀಕರಣಗೊಳಿಸಲು ಉದ್ದೇಶಿಸಲಾಗಿದೆ. ಪ್ರಸಕ್ತ ಸಾಲಿನಲ್ಲಿ ಮೈಸೂರು (ಬಂಬೂ ಬಜಾರ್) ಮತ್ತು ಹುಬ್ಬಳ್ಳಿ (ಕಾಟನ್ ಮಾರ್ಕೆಟ್) ಕೇಂದ್ರಗಳಲ್ಲಿ ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ವಾಣಿಜ್ಯ ಸಂಕೀರ್ಣ ನಿರ್ಮಾಣ ಮಾಡುವ ಘೋಷಣೆ ಮಾಡಲಾಗಿದೆ. ಮೈಸೂರು ನಗರದ ನರಸಿಂಹರಾಜ ಕ್ಷೇತ್ರದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಸ್ಥಾಪಿಸಲಾಗುವುದು. ಮೈಸೂರು ಹಾಗೂ ತುಮಕೂರಿನಲ್ಲಿ 92 ಕೋಟಿ ರೂ. ವೆಚ್ಚದ ಪೆರಿಫೆರಲ್ ಕ್ಯಾನ್ಸರ್ ಕೇಂದ್ರಗಳ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಉದ್ಯೋಗಸ್ಥ ಮಹಿಳೆಯರಿಗೆ ತಲಾ 50 ಸಂಖ್ಯಾಬಲದ 10 ವಸತಿ ನಿಲಯಗಳನ್ನು ಬೆಂಗಳೂರು, ಮೈಸೂರು, ಹುಬ್ಬಳ್ಳಿ-ಧಾರವಾಡ, ಮಂಗಳೂರು, ಬೆಳಗಾವಿ ಮತ್ತು ಕಲಬುರಗಿಯಲ್ಲಿ ಪ್ರಾರಂಭಿಸಲು ಘೋಷಿಸಲಾಗುವುದು. ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಶೈಕ್ಷಣಿಕ ಅನುಕೂಲಕ್ಕಾಗಿ ಬೇಡಿಕೆಯಿರುವ ಜಿಲ್ಲೆಗಳಾದ ಬೆಂಗಳೂರು, ಮೈಸೂರು, ಮಂಗಳೂರು, ಧಾರವಾಡ, ಬೆಳಗಾವಿ, ಕಲಬುರಗಿ, ದಾವಣಗೆರೆ, ಶಿವಮೊಗ್ಗ ಹಾಗೂ ಬಳ್ಳಾರಿಯಲ್ಲಿ 150 ಸಂಖ್ಯಾಬಲದ 50 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಲಾಗುವುದು. ಬೆಂಗಳೂರು ಮತ್ತು ಮೈಸೂರು ನಗರದ ಧೋಬಿಘಾಟ್‌ಗಳಲ್ಲಿ ಮಡಿವಾಳ ಸಮಾಜದವರಿಗೆ ವಾಷಿಂಗ್ ಮೆಷಿನ್, ಡ್ರೈಯರ್ ಮತ್ತು ಐರನಿಂಗ್ ಮೆಷಿನ್ ಇತ್ಯಾದಿ ಸಾಮಗ್ರಿಗಳನ್ನು ಒಳಗೊಂಡಂತೆ ತಲಾ 75 ಲಕ್ಷ ರೂ. ಘಟಕ ವೆಚ್ಚದಲ್ಲಿ ಆಧುನಿಕ ಲ್ಯಾಂಡ್ರಿ ಗಳನ್ನು ಸ್ಥಾಪಿಸಲಾಗುವುದು. ಇದಲ್ಲದೆ, ನಿರುದ್ಯೋಗಿ ಯುವಕ/ ಯುವತಿಯರು ಸ್ವಯಂ ಉದ್ಯೋಗಕ್ಕಾಗಿ ಆಧುನಿಕ ಲ್ಯಾಂಡ್ರಿ ಗಳನ್ನು ಸ್ಥಾಪಿಸಲು 5 ಲಕ್ಷ ರೂ.ಗಳವರೆಗೆ ಶೇ.4ರ ಬಡ್ಡಿದರದಲ್ಲಿ ಸಾಲ ಸೌಲಭ್ಯ ನೀಡಲಾಗುವುದು. ಹುಬ್ಬಳ್ಳಿ, ಇಂದಿರಾನಗರ, ಮೈಸೂರು ಮತ್ತು ದೊಡ್ಡಬಳ್ಳಾಪುರದಲ್ಲಿ ಪ್ಯಾರಾ ಮೆಡಿಕಲ್ ಕೋರ್ಸ್ ಹಾಗೂ ಇಂದಿರಾನಗರದಲ್ಲಿ ಮೂರು ವರ್ಷದ ಪಿಜಿ ಕೋರ್ಸ್‌ಗಳನ್ನು ಪ್ರಾರಂಭಿಸಲು ಘೋಷಿಸಿದ್ದಾರೆ.

ಹೆಚ್ಚಿನ ಪ್ರವಾಸಿಗರನ್ನು ಹಾಗೂ ಪರಿಸರ ಪ್ರೇಮಿಗಳನ್ನು ಆಕರ್ಷಿಸುವ ದೃಷ್ಟಿಯಿಂದ ಮೈಸೂರಿನ ಲಿಂಗಾಂಬುಧಿ ಸಸ್ಯ ತೋಟವನ್ನು ಸಮಗ್ರವಾಗಿ ಅಭಿವೃದ್ಧಿಪಡಿಸಲಾಗುವುದು. ರಾಮನಗರ, ಶಿಡ್ಲಘಟ್ಟ, ಹಾವೇರಿ, ತಾಂಡವಪುರ (ಮೈಸೂರು) ಹಾಗೂ ಕಲಬುರಗಿಯಲ್ಲಿ ಸಿಲ್ಕ್ ಪಾರ್ಕ್‌ಗಳ ಸ್ಥಾಪನೆಗೆ ಕ್ರಮವಹಿಸಲಾಗುವುದು. ಸ್ಥಳೀಯ ಮೇಕೆ ತಳಿಗಳ ಉನ್ನತೀಕರಣಕ್ಕಾಗಿ ಮೈಸೂರಿನಲ್ಲಿ ಬೋಯರ್ ಮೇಕೆ ತಳಿ ಸಂವರ್ಧನಾ ಕೇಂದ್ರವನ್ನು ಸ್ಥಾಪಿಸಲಾಗುವುದು. ಪಿರಿಯಾಪಟ್ಟಣ ತಾಲ್ಲೂಕಿನ ಕಂಪಲಾಪುರದಲ್ಲಿ ಬಂಡೂರು ಕುರಿ ತಳಿ ಸಂವರ್ಧನಾ ಕೇಂದ್ರದ ಸಮಗ್ರ ಅಭಿವೃದ್ಧಿಯನ್ನು ಕೈಗೊಳ್ಳಲಾಗುವುದು. ಕರ್ನಾಟಕ ರಾಜ್ಯ ಉಗ್ರಾಣ ನಿಗಮವನ್ನು ಆರ್ಥಿಕವಾಗಿ ಸದೃಢಗೊಳಿಸುವ ನಿಟ್ಟಿನಲ್ಲಿ ನಿಗಮದ ಅನುಪಯುಕ್ತ ಆಸ್ತಿಗಳನ್ನು ನಗದೀಕರಣಗೊಳಿಸಲು ಉದ್ದೇಶಿಸಲಾಗಿದೆ. ಪ್ರಸಕ್ತ ಸಾಲಿನಲ್ಲಿ ಮೈಸೂರು (ಬಂಬೂ ಬಜಾರ್) ಮತ್ತು ಹುಬ್ಬಳ್ಳಿ (ಕಾಟನ್ ಮಾರ್ಕೆಟ್) ಕೇಂದ್ರಗಳಲ್ಲಿ ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ವಾಣಿಜ್ಯ ಸಂಕೀರ್ಣ ನಿರ್ಮಾಣ ಮಾಡಲಾಗುವುದು.

### ಅನೇಕ ಕೊಡುಗೆ

**ಕೋಲಾರದ ಆದಿಮ, ಮೈಸೂರಿನ ರಂಗನಿರಂತರ ಮತ್ತು ಬೆಂಗಳೂರಿನ ಸಮುದಾಯ ಸಂಸ್ಥೆಗಳಿಗೆ ಅನುದಾನ ನೀಡುವುದರ ಮೂಲಕ ವಿವಿಧ ಸಾಂಸ್ಕೃತಿಕ ಚಟುವಟಿಕೆಗಳಿಗೆ ಪ್ರೋತ್ಸಾಹ ನೀಡಲಾಗುವುದು. ಸೈಕ್ಲಿಂಗ್ ಕ್ರೀಡೆಗೆ ಉತ್ತೇಜನ ನೀಡಲು ಮೈಸೂರಿನಲ್ಲಿರುವ ದಟ್ಟಗಳ್ಳಿಯಲ್ಲಿ ಗುರುತಿಸಲಾದ ಜಾಗದಲ್ಲಿ ಆಧುನಿಕ ಸೈಕ್ಲಿಂಗ್ ವೆಲೋಡ್ರೋಮ್ ನಿರ್ಮಿಸಲಾಗುವುದು ಎಂದು ಮೈಸೂರಿಗೆ ಭರಪೂರ ಅನೇಕ ಕೊಡುಗೆಗಳನ್ನು ಘೋಷಣೆ ಮಾಡಿ ತವರಿಗೂ ದಾಖಲೆ ಬಜೆಟ್ ನೀಡುವ ಪ್ರಯತ್ನ ಮಾಡಿದ್ದಾರೆ.**

### ನಿರಾಶದಾಯಕವಾದ ಬಜೆಟ್



**ಸಿದ್ದರಾಮಯ್ಯ ಅವರ ಮೇಲೆ ಮೈಸೂರು ಜಿಲ್ಲೆಯ ಜನತೆ ದೊಡ್ಡ ನಿರೀಕ್ಷೆ ಇಟ್ಟಿದ್ದರು. ಈ ಬಾರಿಯ ಬಜೆಟ್ ನಿರಾಶಾದಾಯಕವಾಗಿದೆ. ಹಿಂದಿನ ಬಜೆಟ್‌ನಲ್ಲಿ ಘೋಷಿಸಲಾದ ಹಲವು ಯೋಜನೆಗಳನ್ನು ಮತ್ತೆ ಉಲ್ಲೇಖಿಸಲಾಗಿದ್ದು, ಘೋಷಿಸಿದ ಅನೇಕ ಯೋಜನೆಗಳಿಗೆ ಸ್ಪಷ್ಟ ಅನುದಾನ ನಿಗದಿಯಾಗಿಲ್ಲ. ರಾಜ್ಯ ಸರ್ಕಾರ ಈಗಾಗಲೇ ಸುಮಾರು 8.24 ಲಕ್ಷ ಕೋಟಿ ಸಾಲ ಮಾಡಿರುವುದೇ ಈ ಸರ್ಕಾರದ ಸಾಧನೆ ಯಾಗಿದೆ. ಅಭಿವೃದ್ಧಿ ಹಾಗೂ ಜನರ ಹಿತ ಕಾಪಾಡುವಲ್ಲಿ ಸರ್ಕಾರ ವಿಫಲವಾಗಿದೆ.**

**- ಜಿ.ಡಿ.ಹರೀಶ್ ಗೌಡ** ಶಾಸಕ

# ಅರ್ಹರೆಲ್ಲರಿಗೂ ಉದ್ಯೋಗ ದೊರೆಯಲಿದೆ

## ಯುವಕರಿಗೆ ಉದ್ಯೋಗ ಮೇಳದಲ್ಲಿ ಸಚಿವ ರಾಮಲಿಂಗಾರೆಡ್ಡಿ ಹೇಳಿಕೆ

ರಾಮನಗರ: ಜಿಲ್ಲೆಯ ಉದ್ಯೋಗಾಕಾಂಕ್ಷಿಗಳ ಅನುಕೂಲಕ್ಕಾಗಿ ಬೃಹತ್ ಉದ್ಯೋಗ ಮೇಳವನ್ನು ಆಯೋಜಿಸಲಾಗಿದೆ, ಭಾಗವಹಿಸಿರುವ ಅರ್ಹರೆಲ್ಲರಿಗೂ ಉದ್ಯೋಗ ದೊರೆಯಲಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವರೂ ಆಗಿರುವ ಸಾರಿಗೆ, ಮುಜರಾಯಿ ಖಾತೆಗಳ ಸಚಿವ ರಾಮಲಿಂಗರೆಡ್ಡಿ ತಿಳಿಸಿದರು. ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಕೌಶಲ್ಯಾಭಿವೃದ್ಧಿ ಉದ್ಯಮಶೀಲತಾ ಮತ್ತು ಜೀವನೋಪಾಯ ಇಲಾಖೆ, ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ-ಸಂಜೀವಿನಿ ಕೆ.ಎಸ್.ಆರ್.ಎಲ್.ಪಿ.ಎಸ್ ದೀನ್ ದಯಾಳ್ ಉಪಾಧ್ಯಾಯ ಗ್ರಾಮೀಣ ಕೌಶಲ್ಯ ಯೋಜನೆ, ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ಬೆಂಗಳೂರು ದಕ್ಷಿಣ ಜಿಲ್ಲಾ ಮಟ್ಟದ ಉದ್ಯೋಗ ಮೇಳ-2026 ಅನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಿವಿಧ ವಿದ್ಯಾರ್ಹತೆಗೆ ತಕ್ಕಂತೆ ಉದ್ಯೋಗಾಕಾಂಕ್ಷಿಗಳಿಗೆ ಉದ್ಯೋಗ ದೊರಕಿಸಿಕೊಡುವ ಈ ಉದ್ಯೋಗ ಮೇಳ ಮಹತ್ತರವಾದ ಕಾರ್ಯಕ್ರಮವಾಗಿದೆ, ನಿರುದ್ಯೋಗಿಗಳು ಉದ್ಯೋಗ ಪಡೆಯುವ ಮೂಲಕ ತಮ್ಮ ಜೀವನದಲ್ಲಿ ಏಳಿಗೆ ಕಂಡುಕೊಳ್ಳಬೇಕು ಮುಖ್ಯವಾಗಿ ಉದ್ಯೋಗದಾತ ಕಂಪನಿಗಳು ತಮ್ಮಲ್ಲಿರುವಷ್ಟು ಉದ್ಯೋಗಗಳನ್ನು ನೀಡುವಂತೆ ಕೋರಲಾಗಿದೆ ಈ ಮೇಳವನ್ನು ವಿಶೇಷ ಆಸಕ್ತಿ ವಹಿಸಿ ಆಯೋಜಿಸಿರುವ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ವಿವಿಧ ಇಲಾಖೆಗಳು ಅಭಿನಂದನಾರ್ಹ, ಪ್ರತಿವರ್ಷವೂ ಇಂತಹ ಮೇಳಗಳನ್ನು ಆಯೋಜಿಸಿ ಮತ್ತಷ್ಟು ಉದ್ಯೋಗವಕಾಶ ಕಲ್ಪಿಸಿಕೊಡಬೇಕೆಂದು ಅವರು ಹೇಳಿದರು.

ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಕೆ.ರಾಜು, ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ನಟರಾಜು ಗಾಣಕಲ್, ರಾಮನಗರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಚೇತನ್ ಕುಮಾರ್ ಎ.ಬಿ., ಜಿಲ್ಲಾಧಿಕಾರಿ ಯಶವಂತ್ ವಿ. ಗುರುಕರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀನಿವಾಸ್ ಗೌಡ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಅನ್ಮೋಲ್ ಜೈನ್, ಮುಖ್ಯ ಯೋಜನಾಧಿಕಾರಿ ಚಿಕ್ಕಸುಬ್ಬಯ್ಯ, ಯೋಜನಾ ನಿರ್ದೇಶಕ ಶಿವಕುಮಾರ್ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ವಿವಿಧ ಕಂಪನಿಗಳ ಮುಖ್ಯಸ್ಥರು ಹಾಗೂ ಇತರರು ಉಪಸ್ಥಿತರಿದ್ದರು.



### ನಿರುದ್ಯೋಗ ನೀಗಬೇಕು ಇಕ್ಬಾಲ್ ಹುಸೇನ್

**ಉದ್ಘಾಟನಾ ಸಭೆಯ ಅಧ್ಯಕ್ಷತೆ ವಹಿಸಿದ್ದ ಶಾಸಕ ಎಚ್.ಎ. ಇಕ್ಬಾಲ್ ಹುಸೇನ್ ಮಾತನಾಡಿ, ಪ್ರತೀ ತಂದೆ ತಾಯಂದಿರು, ಮಕ್ಕಳು ವಿದ್ಯಾವಂತರಾಗಿ ಉತ್ತಮ ಉದ್ಯೋಗ ಪಡೆಯಬೇಕೆಂಬ ಆಸೆ ಹೊಂದಿರುತ್ತಾರೆ. ನಿರುದ್ಯೋಗ ನೀಗಿಸುವುದು ಈ ಉದ್ಯೋಗ ಮೇಳದ ಮುಖ್ಯ ಉದ್ದೇಶವಾಗಿದೆ. ಉದ್ಯೋಗಾಂಕ್ಷಿಗಳು ಎಲ್ಲಾ ಮಳಿಗೆಗಳಿಗೆ ಭೇಟಿ ನೀಡಿ ಮೌಖಿಕ ಸಂದರ್ಶನ ಎದುರಿಸುವ ಮೂಲಕ ವಿದ್ಯಾರ್ಹತೆಗೆ ಅನುಗುಣವಾಗಿ ಉದ್ಯೋಗ ಗಳಿಸಿಕೊಳ್ಳುವಂತೆ ತಿಳಿಸಿದರು.**

### ಉದ್ಯೋಗ ಸಿಗಲಿಲ್ಲವೇ, ನಿರಾಶರಾಗಬೇಡಿ

**ಉದ್ಯೋಗ ಮೇಳದಲ್ಲಿ ಉದ್ಯೋಗ ದೊರೆಯದವರು ನಿರಾಶರಾಗಬೇಕಿಲ್ಲ, ಮುಂಬರುವ ದಿನಗಳಲ್ಲಿ ಬೆಂಗಳೂರಿನಲ್ಲಿ ನಡೆಯಲಿರುವ ಅತ್ಯಂತ ಬೃಹತ್ ಉದ್ಯೋಗ ಮೇಳದಲ್ಲಿ ಭಾಗವಹಿಸಿ, ಉದ್ಯೋಗ ಪಡೆಯಬಹುದು, ಮತ್ತೊಮ್ಮೆ ಯತ್ನಿಸುವಂತೆ ಅವರು ತಿಳಿಸಿದರು.**

### ಆಫರ್ ಲೆಟರ್ ನೀಡದೇ ನೇಮಕಾತಿ ಪತ್ರವನ್ನು ನೀಡಿ


**ವಿಧಾನ ಪರಿಷತ್ ಶಾಸಕರಾದ ರಾಮೋಜಿ ಗೌಡ ಅವರು ಮಾತನಾಡಿ, ಈ ಉದ್ಯೋಗ ಮೇಳದಲ್ಲಿ ಭಾಗವಹಿಸಿರುವ ಎಲ್ಲಾ ಕಂಪನಿಗಳಿಗೆ ಧನ್ಯವಾದಗಳು. ಬೆಂಗಳೂರಿನ ಕಂಪನಿಗಳು ಈ ಉದ್ಯೋಗ ಮೇಳದಲ್ಲಿ ಭಾಗವಹಿಸಿವೆ. ಒಬ್ಬರಿಗೆ ಉದ್ಯೋಗ ನೀಡಿದರೆ ಇಡೀ ಕುಟುಂಬವೇ ಆರ್ಥಿಕ ಸಂಕಷ್ಟದಿಂದ ಪಾರಾದಂತೆ. ಉದ್ಯೋಗ ದಾತರು ಆಫರ್ ಲೆಟರ್ ನೀಡದೇ ನೇಮಕಾತಿ ಪತ್ರವನ್ನು ನೀಡಬೇಕು. ಈ ಉದ್ಯೋಗ ಮೇಳದಲ್ಲಿ ಉದ್ಯೋಗ ದೊರೆಯದವರು ಜುಲೈನಲ್ಲಿ ಬೆಂಗಳೂರಿನಲ್ಲಿ ಆಯೋಜಿಸಲಾಗುವ ಬೃಹತ್ ಉದ್ಯೋಗ ಮೇಳದಲ್ಲಿ ಭಾಗವಹಿಸಿ ಪ್ರಯತ್ನಿಸುವಂತೆ ಕರೆ ನೀಡಿದರು.**

### 200ಕ್ಕೂ ಹೆಚ್ಚು ಕಂಪನಿಗಳು ಭಾಗಿ

**ಇದೇ ಸಂದರ್ಭದಲ್ಲಿ ವಿವಿಧ ಕಂಪನಿಗಳಿಗೆ ವಿವಿಧ ಉದ್ಯೋಗಗಳಿಗೆ ಆಯ್ಕೆಯಾದ ಉದ್ಯೋಗಾಕಾಂಕ್ಷಿಗಳಿಗೆ ನೇಮಕಾತಿ ಪತ್ರವನ್ನು ನೀಡಲಾಯಿತು. ಈ ಉದ್ಯೋಗ ಮೇಳದಲ್ಲಿ 200ಕ್ಕೂ ಹೆಚ್ಚು ಕಂಪನಿಗಳು ಭಾಗವಹಿಸಿದ್ದವು.**

# ಜನಮಾನಸದ ಚಾಂಪಿಯನ್ ಸಿದ್ದರಾಮಯ್ಯ

ಮೈಸೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಡಿಸಿದ 17ನೇ ದಾಖಲೆ ಬಜೆಟ್ ಸರ್ವಾಂಗೀಣ ಅಭಿವೃದ್ಧಿಗೆ ಪೂರಕವಾಗಿ ಹಾಗೂ ಪ್ರಾದೇಶಿಕ ಅಸಮಾತೋಲನವನ್ನು ನಿವಾರಣೆ ಮಾಡಲು ವೈಜ್ಞಾನಿಕ ನೆಲಗಟ್ಟಿನ ಗಟ್ಟಿತನದ ಬಜೆಟ್ ಇದಾಗಿದೆ ಎಂದು ಮೈಸೂರು ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಡಾ.ಬಿ.ಜೆ.ವಿಜಯಕುಮಾರ್ ಹೇಳಿದರು.



▶▶ **ಮೈಸೂರು ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಡಾ.ಬಿ.ಜೆ.ವಿಜಯಕುಮಾರ್**

ರಾಜ್ಯ ಸರ್ಕಾರದ ಅಭಿವೃದ್ಧಿಯ ಪರ ಯೋಜನೆ ಗಳಿಂದಾಗಿ 2025 -26 ರಲ್ಲಿ ರಾಜ್ಯದಲ್ಲಿ ಜಿಎಸ್‌ಡಿಪಿ ಶೇ.8.1ರಷ್ಟು ಬೆಳವಣಿಗೆಯು ರಾಷ್ಟ್ರೀಯ ಬೆಳವಣಿಗೆಯಾಗಿದೆ. ದರವಾದ ಶೇ.7.4ಗಿಂತ ಹೆಚ್ಚಾಗಿದೆ. ಬಜೆಟ್ ಸಂದರ್ಭದಲ್ಲಿ ಚೊಂಬು ಹಿಡಿದು ಪ್ರತಿಭಟನೆ ಆದಿ ತುಳಿದ ಬಿಜೆಪಿಯ ಪ್ರತಿಪಕ್ಷ ನಾಯಕರು ವೈಜ್ಞಾನಿಕ ಉತ್ತರ ನೀಡಲಿ. ಅಭಿವೃದ್ಧಿಗೆ ಪೂರಕವಾದ ಆರ್ಥಿಕ ಇಲಾಖೆಯ ಸಮಗ್ರ ವರ್ಗೀಕರಣದ ವರದಿ ಅನುಸಾರ ಜಿಎಸ್ಟಿ ಹಣ ಕೇಂದ್ರ ಪೂರ್ಣಪ್ರಮಾಣದಲ್ಲಿ ನೀಡಿಲ್ಲವಾಗಿದೆ. ಭಾರತದಲ್ಲಿ ಕರ್ನಾಟಕ ಜಿಎಸ್?ಟಿ ಹಣ ಸಂಗ್ರಹದಲ್ಲಿ ಎರಡನೇ ಸ್ಥಾನದಲ್ಲಿದ್ದ ಕಾರಣದಿಂದಾಗಿ ರಾಜ್ಯದ ಅಭಿವೃದ್ಧಿ ಮತ್ತು ಗ್ಯಾರೆಂಟಿ ಯೋಜನೆಗಳಿಗೆ ಸಂಬಂಧಿಸಿದ ವಿಷಯದಲ್ಲಿ ರಾಜ್ಯದ ಸಮಗ್ರ ಆರ್ಥಿಕತೆ ಸುಸ್ಥಿತಿಯಲ್ಲಿದೆ ಎಂಬುದನ್ನು ದೃಢೀಕರಿಸಿದೆ. ಈ ವಿಚಾರಗಳಲ್ಲಿ ಪ್ರತಿಪಕ್ಷವಾದ ಬಿಜೆಪಿ ಕರ್ನಾಟಕದ ಜನತೆಗೆ ಸುಳ್ಳು ಮಾಹಿತಿ ನೀಡಿದೆ ಎಂಬುದು ಮತ್ತೊಮ್ಮೆ ಸಾಬೀತಾಗಿದೆ ಎಂದರು.

ಈ ಬಾರಿ ಬಜೆಟ್ ವಿಶೇಷವಾಗಿ ಕಾಲೇಜು ಚುನಾವಣೆಗಳ ಮೂಲಕ ಹೊಸ ನಾಯಕತ್ವದ ಮೂಲಕ ಪ್ರಜಾಪ್ರಭುತ್ವಕ್ಕೆ ಗಟ್ಟಿತನದ ಅಡಿಪಾಯವಾಗಿದೆ. ಮೈಸೂರು ಎರಡನೇ ಐಟಿ ರಾಜ್ಯವನ್ನಾಗಿ ರೂಪಿಸಲು ಉತ್ತೇಜನ, ದೀರ್ಘಾವಧಿಕಾಲ ಸಂಕಷ್ಟದಲ್ಲಿದ್ದ ಕೃಷ್ಣ ಮೇಲ್ದಂಡೆಗೆ ಕಾಯಕಲ್ಪ, ಪ್ರಸ್ತುತ ವರ್ಷ 56,432 ಸಾವಿರ ಹುದ್ದೆಗಳ ನೇಮಕಾತಿಗೆ ಚಾಲನೆ, 16 ವರ್ಷದ ಒಳಗಿನ ಮಕ್ಕಳಿಗೆ ಶಾಲಾ ಕಾಲೇಜು ವ್ಯಾಪ್ತಿಯಲ್ಲಿ ಮೊಬೈಲ್ ನಿಷೇಧ, ವಿವಿಗಳಲ್ಲಿ ಜಾತಿ ದೌರ್ಜನ್ಯ ತಡೆಯಲು ರೋಹಿತ್ ಕಾಯ್ದೆ ಜಾರಿ, 38 ಲಕ್ಷ ರೈತರಿಗೆ ಶೂನ್ಯ ದರದಲ್ಲಿ ಸಾಲ ನೀಡಿಕೆ ಹೀಗೆ ಕೆಲವು ಐತಿಹಾಸಿಕ ವಿಶೇಷತೆಗಳಿಂದ ಸಿದ್ದರಾಮಯ್ಯನವರು ನಿರಂತರವಾಗಿ ಜನ ವರ್ಗದ ಜನಾನುರಾಗಿ ಎಂಬುದು ಸಾಬೀತಾಗಿದೆ ಎಂದರು.

## ಗುಂಡ್ಲುಪೇಟೆ ಪುರಸಭೆಯ ಬಜೆಟ್

# 78.61. 947 ರೂ ಗಳ ಉಳಿತಾಯ ಬಜೆಟ್

ಗುಂಡ್ಲುಪೇಟೆ:-ಪಟ್ಟಣದ ಪುರಸಭೆಯಲ್ಲಿ ಗುರುವಾರ .2026-27 ನೇ ಸಾಲಿನಲ್ಲಿ 78 61. 947 ರೂ ಗಳ ಉಳಿತಾಯ ಬಜೆಟ್ .ಅನ್ನು ಪುರಸಬೆ ಅಡಳಿತಾಧಿಕಾರಿ ಹಾಗೂ ಉಪವಿಭಾಗಾಧಿಕಾರಿ ದಿನೇಶ್ ಕುಮಾರ್ ಮೀನಾ ಮಂಡಿಸಿದರು

ಪುರಸಭೆಯ ಕಚೇರಿ ಸಭಾಂಗಣದಲ್ಲಿ ಬಜೆಟ್ ಮಂಡಿಸಿ ಮಾತನಾಡಿದ ಅವರು ಆರಂಭಿಕ ಶುಲ್ಕ 7.87.58. 447 ರೂ ಸೇರಿದಂತೆ ಹಾಗೂ ಅಯವ್ಯಯದ ನಿಯಮದಂತೆ ಸ್ವಂತ ಮೂಲಗಳಿಂದ ಕ್ರೂಡೀಕರಿಸಿ ಉದ್ದೇಶಿಸಿರುವ ಪ್ರಮುಖ ಅದಾಯ. ಅಸ್ತಿ ತೆರಿಗೆ ದಂಡ. ಮಳಿಗೆಗಳ ಬಾಡಿಗೆ. ಕಟ್ಟಡ ಪರವಾನಿಗೆ. ಅಭಿವೃದ್ಧಿ ಮತ್ತು ಸುಧಾರಣೆ. ಉದ್ದಿಮೆ ಪರವಾನಿಗೆ ಶುಲ್ಕಗಳು ಇತರೆ ಪರವಾನಿಗೆ. ನೀರಿನ ಶುಲ್ಕಗಳು ಮತ್ತು ಠೇವಣಿ. ಘನತಾಜ್ಯ ನಿರ್ವಹಣೆ ಶುಲ್ಕಗಳು ರಸ್ತೆ ಆಗತೆ ಶುಲ್ಕಗಳು .ಖಾತೆ ಬದಲಾವಣೆ./ಖಾತೆ ನಕಲು ಪ್ರತಿಗಳ ಶುಲ್ಕ. ಬ್ಯಾಂಕ್ ಖಾತೆಗಳಿಂದ ಬಂದ ಬಡ್ಡಿ ಇತರೆ ಶುಲ್ಕಗಳು (ಪ್ಲಂಬರ್ ನೋಂದಣಿ. ಟೆಂಡರ್. ಫಾರಂ. ಸಕ್ಕಂಗ್ ಮೆಷಿನ್ ಶುಲ್ಕ. ನೆಲ ಬಾಡಿಗೆ



ಸ್ಟಾಂಪ್ ಶುಲ್ಕ. ಪ್ರಮಾಣ. ಪತ್ರಗಳು. ಜಾಹೀರಾತು ತೆರಿಗೆ ಇತರೆ ದಂಡಗಳು )ಹಾಗೂ ಕೇಂದ್ರ ಮತ್ತು ರಾಜ್ಯ ಸರ್ಕಾರ ಗಳಿಂದ ನಿರ್ದಿಷ್ಟಪಡಿಸಿದ ಉದ್ದೇಶಗಳಿಗಾಗಿ ಬಿಡುಗಡೆಯಾಗಿರುವ ಅನುದಾನಗಳನ್ನು ಒಳಗೂಂಡಂತೆ 27.09.85.000ರೂಗಳ ಅಯವ್ಯಯವಾಗಿದೆ ಎಂದರು.ಪ್ರಾರಂಬಿಕ ಶುಲ್ಕ 7.87. 58.447. ರೂ ಜಮೆಗಳು 41.16.84.000 ರೂ ಸೇರಿ ಒಟ್ಟು 49.04.42.447ರೂಗಳಾಗಿವೆ ಪಾವತಿಗಳು 48.25.80.500 ರೂ ಅಂತಿಮ ಶುಲ್ಕ ಗಳಾಗಿವೆ ಎಂದು ಹೇಳಿದರು. 2026-27ನೇ ಸಾಲಿಗೆ ಸ್ವಂತ ಮೂಲಗಳಿಂದ 5.55.35.000ರೂ ಗಳನ್ನು ಕ್ರೋಡಿಕರಿಸುವ ಉದ್ದೇಶ ಹೂಂದಲಾಗಿದೆ

2026 -27 ಸಾಲಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಂದ 21.54.50. 00ರೂ ಗಳ ಅನುದಾನ ನೀರಿಕ್ಷಿಸಲಾಗಿದೆ ಎಂದು ತಿಳಿಸಿದರು 2026-27 ಸಾಲಿನ 33.11.81.500.ರೂ ಗಳನ್ನು ವಿವಿಧ ಉದ್ದೇಶಗಳಿಗಾಗಿ ವೆಚ್ಚ ಮಾಡಲಾಗುವುದು 2026-27 ಸಾಲಿನಲ್ಲಿ ಸರ್ಕಾರದಿಂದ ವಿಶೇಷ ಯೋಜನೆಡಿಯಲ್ಲಿ 3740 ಲಕ್ಷ ಅನುದಾನ ಬಿಡುಗಡೆಯಾದಲ್ಲಿ ಗುಂಡ್ಲುಪೇಟೆ ಪಟ್ಟಣವನ್ನು ಅಭಿವೃದ್ಧಿಪಡಿಸುವ. ಹಿತ ದೃಷ್ಟಿಯಿಂದ ಹಂತ ಹಂತವಾಗಿ ಕಾಮಗಾರಿಗೆಳನ್ನು ಕೈಗೊಳ್ಳಲು ಹೂಸ ಹೂಸ ಯೋಜನೆಯನ್ನು ರೂಪಿಸಲಾಗಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಪುರಸಭೆ ಮುಖ್ಯ ಅದಿಕಾರಿ ಸರವಣ ಸೇರಿದಂತೆ ಅಧಿಕಾರಿಗಳು ಸಿಬ್ಬಂದಿ ವರ್ಗ ಇದ್ದರು

## ಸಂಕ್ಷಿಪ್ತ ಸುದ್ದಿ

### ಮಾ.11ರಂದು ನೇರ ಸಂದರ್ಶನ



**ತುಮಕೂರು:** ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಟೆಲಿಪರ್ಫಾಮೆನ್ಸ್ ಹಾಗೂ ವೆಕ್ಸ್‌ಫೋರ್ಡ್ ಲ್ಯಾಬೊರೇಟರಿ ಪ್ರೈವೇಟ್ ಲಿಮಿಟೆಡ್ ಸಂಸ್ಥೆಯ ಸಹಭಾಗಿತ್ವದಲ್ಲಿ ನಿರುದ್ಯೋಗಿಗಳಿಗೆ ಉದ್ಯೋಗ ನೀಡುವ ಸಂಬಂಧ ಮಾರ್ಚ್ 11ರಂದು ನೇರಸಂದರ್ಶನ ಏರ್ಪಡಿಸಲಾಗಿದೆ.

ಪಿ.ಯು.ಸಿ, ಯಾವುದೇ ಪದವಿ, ಡಿಪ್ಲೊಮಾ (ಮೆಕಾನಿಕಲ್ ಮತ್ತು ಎಲೆಕ್ಟ್ರಿಕಲ್ & ಎಲೆಕ್ಟ್ರಾನಿಕ್ಸ್) ಹಾಗೂ ಬಿ.ಇ.(ಮೆಕಾನಿಕಲ್ ಮತ್ತು ಎಲೆಕ್ಟ್ರಿಕಲ್ & ಎಲೆಕ್ಟ್ರಾನಿಕ್ಸ್) ಪಾಸಾದ ಅಭ್ಯರ್ಥಿಗಳು ನೇರ ಸಂದರ್ಶನದಲ್ಲಿ ಭಾಗವಹಿಸಬಹುದಾಗಿದೆ.

ಅರ್ಹ ಅಭ್ಯರ್ಥಿಗಳು ಮಾರ್ಚ್ 11ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ

ಡಿ.ಡಿ.ಪಿ.ಐ ಬಸ್ ನಿಲ್ದಾಣ, ವಾಸನ್ ಕಣ್ಣಿನ ಆಸ್ಪತ್ರೆ ಹತ್ತಿರ, ಮೂಲೆಮನೆ ಹೋಟೆಲ್ ಪಕ್ಕ, ಸೋಮೇಶ್ವರಪುರಂ, 14ನೇ ಕ್ರಾಸ್, ತುಮಕೂರು–572102, ಇಲ್ಲಿ ತಮ್ಮ ಬಯೋಡೇಟಾದೊಂದಿಗೆ ಸಂದರ್ಶನಕ್ಕೆ ಹಾಜರಾಗಲು ಉದ್ಯೋಗಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 0816–2278488, ಮೊ.ಸಂ. 8792669410ಯನ್ನು ಸಂಪರ್ಕಿಸಬಹುದಾಗಿದೆ.

### ಅಪಘಾತದಿಂದ ಮಹಿಳೆ ಸಾವು : ನಿಗಮದಿಂದ 10ಲಕ್ಷ ರೂ.ಪರಿಹಾರ

**ತುಮಕೂರು:** ಶಿರಾ ಘಟಕದ ವಾಹನ ಸಂಖ್ಯೆ ಕೆಎ 06 ಎಫ್ 0884 ವಾಹನವು ಮಾರ್ಗ ಸಂಖ್ಯೆ 14/15 ರಲ್ಲಿ ಕರೇಮಾದೇನಹಳ್ಳಿ–ಶಿರಾ ಮಾರ್ಗದಲ್ಲಿ ಕಾರ್ಯಾಚರಣೆ ಮಾಡುವಾಗ 2025 ಸೆಪ್ಟೆಂಬರ್ 27ರ ಬೆಳಿಗ್ಗೆ 8:30 ಗಂಟೆಗೆ ಮಾರ್ಗೊಂಡನಹಳ್ಳಿಯಲ್ಲಿ ಚಲಿಸುತ್ತಿರುವ ಬಸ್ಸಿನಿಂದ ಓರ್ವ ಮಹಿಳಾ ಪ್ರಯಾಣಿಕರು ಕೆಳಗೆ ಬಿದ್ದು ಅವರ ಎಡಗಾಲಿನ ಮೇಲೆ ಬಸ್ಸಿನ ಹಿಂದಿನ ಚಕ್ರ ಚಲಿಸಿ ತೀವ್ರತರವಾದ ಗಾಯವಾಗಿರುತ್ತದೆ.

ಸದರಿಯವರನ್ನು ಆಸ್ಪತ್ರೆಗೆ ಕರೆದೊಯ್ಯುವಾಗ ಮಾರ್ಗ ಮಧ್ಯೆ ಮೃತಪಟ್ಟಿರುವ ಕಾರಣ ನಿಗಮದ ವತಿಯಿಂದ ಮೃತರ ವಾರಸುದಾರರಿಗೆ ನೀಡುವ ಅಪಘಾತ ಪರಿಹಾರ ಮೊತ್ತ 10,00,000/– ರೂ. ಗಳ ಚೆಕ್ ಅನ್ನು ಮೃತರ ಮಗ ಜಯರಾಮ್ ರವರಿಗೆ ಶುಕ್ರವಾರ ನೀಡಲಾಯಿತು ಎಂದು ತುಮಕೂರು ವಿಭಾಗೀಯ ನಿಯಂತ್ರಣಾಧಿಕಾರಿ ವಿ. ಬಸವರಾಜು ತಿಳಿಸಿದ್ದಾರೆ.

# ಜಿಲ್ಲಾ ಖನಿಜ ಪ್ರತಿಷ್ಠಾನ ನಿಧಿಯಲ್ಲಿ ಮೂಲಭೂತ ಸೌಕರ್ಯಕ್ಕೆ ಆದ್ಯತೆ ನೀಡಿ: ಜಿಲ್ಲಾಧಿಕಾರಿ



**ಮಂಡ್ಯ:** ಗಣಿಗಾರಿಕೆಯಿಂದ ಬಾಧಿತರಾದ ಪ್ರದೇಶದಲ್ಲಿ ಜಿಲ್ಲಾ ಖನಿಜ ಪ್ರತಿಷ್ಠಾನ ನಿಧಿಯನ್ನು ಬಳಸಿಕೊಂಡು, ಗಣಿಗಾರಿಕೆ ನಡೆಯುವ ಸ್ಥಳದಲ್ಲಿ ಅಲ್ಲಿನ ಸಾರ್ವಜನಿಕರಿಗೆ ಮೂಲಸೌಕರ್ಯಗಳನ್ನು ನೀಡಿ ಕಾಮಗಾರಿಗಳನ್ನು ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಡಾ ಕುಮಾರ ಅವರು ತಿಳಿಸಿದರು.


ಶುಕ್ರವಾರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಗಣಿ ಇಲಾಖೆಯ ಡಿಎಂಎಫ್ ಕುರಿತ ಸಭೆಯ ಅಧ್ಯಕತೆ ವಹಿಸಿ ಮಾತನಾಡಿದರು.

ಗಣಿಗಾರಿಕೆಯಿಂದ ನೇರವಾಗಿ ಬಾಧಿತರಾದ ಜನರ ಜೀವನಮಟ್ಟ ಸುಧಾರಿಸುವುದು ಹಾಗೂ ಗಣಿಗಾರಿಕೆಗಳಿಂದ ಬಾಧಿತವಾದ ಪ್ರದೇಶಗಳಿಗೆ ಮೂಲಭೂತ ಸೌಕರ್ಯಗಳನ್ನು ನೀಡಬೇಕು. ಜನಸಾಮಾನ್ಯರ ಅರೋಗ್ಯ, ಶಿಕ್ಷಣ, ವೈದ್ಯ ಮತ್ತು ನೈರ್ಮಲ್ಯ ಕಡೆ ಹೆಚ್ಚು ಗಮನ ಹರಿಸಬೇಕು ಎಂದು ತಿಳಿಸಿದರು.

DMFನಿಧಿಯ ಶೇ. 70 ಕ್ಕಿಂತ ಹೆಚ್ಚು ಭಾಗವನ್ನು ಗಣಿಗಾರಿಕೆಯಿಂದ ನೇರವಾಗಿ ಬಾಧಿತವಾದ ಪ್ರದೇಶಗಳಲ್ಲಿನ ಕಾಮಗಾರಿಗಳಿಗೆ ಬಳಸಬೇಕು. ಈ ನಿಟ್ಟಿನಲ್ಲಿ ಗಣಿಗರಿಕೆಯಿಂದ ಬಾಧಿತವಾದ ವಲಯಗಳಿಗೆ ಕುಡಿಯುವ ನೀರು,ಶುದ್ದೀಕರಣ ವ್ಯವಸ್ಥೆ,ನೀರು ಸಂಸ್ಕರಣಾ ಘಟಕಗಳು ಕಲ್ಪಿಸಿ. ಪರಿಸರ ಸಂರಕ್ಷಣೆ ಮತ್ತು ಮಾಲಿನ್ಯ ನಿಯಂತ್ರಣ, ಶಿಕ್ಷಣ ಕೌಶಲ್ಯ ಅಭಿವೃದ್ಧಿಗೆ ಹೆಚ್ಚು ಆದ್ಯತೆ ನೀಡಿ ಎಂದು ತಿಳಿಸಿದರು.

ಸಭೆಯಲ್ಲಿ ಅರಣ್ಯ ಇಲಾಖೆ ಡಿಎಫ್‌ಓ. ರಘು,ಗಣಿ ಮತ್ತು ಭೂ ವಿಜ್ಞಾನ ಅಧಿಕಾರಿ ಪುಷ್ಪಾ ಕೈಗಾರಿಕಾ ಹಾಗೂ ವಾಣಿಜ್ಯ ಇಲಾಖೆಯ ಉಪನಿರ್ದೇಶಕರು ದಿನೇಶ್, ಪರಿಸರ ಮಾಲಿನ್ಯ ನಿಯಂತ್ರಣಾಧಿಕಾರಿ ಗೀತಾ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಟೆಂಡರ್ ಆಹ್ವಾನ



**ತುಮಕೂರು:** ಕುಣಿಗಲ್ ನ್ಯಾಯಾಲಯ ಸಂಕೀರ್ಣ ಕಟ್ಟಡದ ಆವರಣದಲ್ಲಿ ಕ್ಯಾಂಟೀನ್ ನಡೆಸಲು ಪ್ರತಿಷ್ಠಿತ ಏಜೆನ್ಸಿಗಳಿಂದ ಟೆಂಡರ್ ಆಹ್ವಾನಿಸಲಾಗಿದೆ.

ಟೆಂಡರ್ ಸ್ವೀಕರಿಸಿದ ವ್ಯಕ್ತಿಗಳು ಕುಣಿಗಲ್‌ನಲ್ಲಿರುವ ನ್ಯಾಯಾಲಯ ಸಂಕೀರ್ಣ ಕಟ್ಟಡದ ಆವರಣದಲ್ಲಿ ತಮ್ಮ ಸ್ವಂತ ವೆಚ್ಚದಲ್ಲಿ ತಾತ್ಕಾಲಿಕ ಕ್ಯಾಂಟೀನ್ ಅನ್ನು ನಡೆಸಬೇಕು. ಅನುಮೋದಿತ ಗುತ್ತಿಗೆಯು 3 ವರ್ಷಗಳವರೆಗೆ ಜಾರಿಯಲ್ಲಿರುತ್ತದೆ.

ಆಸಕ್ತ ಏಜೆನ್ಸಿಗಳು ಮೊಹರು ಮಾಡಿದ ಟೆಂಡರನ್ನು ಮಾರ್ಚ್ 17ರೊಳಗಾಗಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ತುಮಕೂರು ಇವರಿಗೆ ಸಲ್ಲಿಸಬೇಕು. ಟೆಂಡರ್ ಸಲ್ಲಿಸಿದ ಎಲ್ಲಾ ವ್ಯಕ್ತಿಗಳು ಮಾರ್ಚ್ 17ರ ಸಂಜೆ 5 ಗಂಟೆಗೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಮುಂದೆ ಹಾಜರಿರಬೇಕು. ಟೆಂಡರ್‌ದಾರರ ಸಮ್ಮುಖದಲ್ಲಿ ಟೆಂಡರ್ ತೆರೆಯಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

# ರೈತರು ಕೃಷಿಯಲ್ಲಿ ಹೊಸ ಆಲೋಚನೆಗಳನ್ನು ಅಳವಡಿಸಿಕೊಳ್ಳುವುದು ಅನಿವಾರ್ಯ

## ವಿಶ್ವ ಒಕ್ಕಲಿಗರ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷ ಡಾ. ನಿಶ್ಚಲಾನಂದನಾಥ ಸ್ವಾಮೀಜಿ ಅಭಿಪ್ರಾಯ




**ಕೆ.ಎಂ.ದೊಡ್ಡಿ:** ಬದಲಾಗುತ್ತಿರುವ ಜಾಗತಿಕ ಆರ್ಥಿಕ ನೀತಿಗಳು ಹಾಗೂ ಮಾರುಕಟ್ಟೆಯ ಸವಾಲುಗಳನ್ನು ಎದುರಿಸಲು ರೈತರು ಕೃಷಿಯಲ್ಲಿ ಹೊಸ ಆಲೋಚನೆಗಳನ್ನು ಅಳವಡಿಸಿಕೊಳ್ಳುವುದು ಅನಿವಾರ್ಯವಾಗಿದೆ ಎಂದು ಕೆಂಗೇರಿಯ ವಿಶ್ವ ಒಕ್ಕಲಿಗರ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷ ಡಾ. ನಿಶ್ಚಲಾನಂದನಾಥ ಸ್ವಾಮೀಜಿ ಅಭಿಪ್ರಾಯಪಟ್ಟರು.

ಸಮೀಪದ ಬಿದರಹೊಸಹಳ್ಳಿ ಗ್ರಾಮದಲ್ಲಿ ಕೆಂಪೇಗೌಡ ಒಕ್ಕಲಿಗರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ರೈತರ ಶಾಲೆಯ ಎರಡನೇ ಘಟಕದ ಕಟ್ಟಡ ನಿರ್ಮಾಣದ ಶಂಕುಸ್ಥಾಪನಾ ಸಮಾರಂಭದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

1991ರ ನಂತರ ಜಾರಿಗೆ ಬಂದ ನೂತನ ಆರ್ಥಿಕ ನೀತಿ, ಜಾಗತೀಕರಣ ಹಾಗೂ ವಿಶ್ವ ವ್ಯಾಪಾರ ಸಂಸ್ಥೆಯ (ಡಬ್ಲ್ಯುಟಿಒ) ನಿಯಮಗಳು ಭಾರತೀಯ ಕೃಷಿ ಕ್ಷೇತ್ರದ ಮೇಲೆ ಭಾರಿ ಪರಿಣಾಮ ಬೀರಿವೆ. ಈ ಸಂಕಷ್ಟದ ಕಾಲದಲ್ಲಿ ರೈತರು ಬೆಳೆದ ಬೆಳೆಗೆ ಸರಿಯಾದ ಬೆಲೆ ಪಡೆಯಲು ಹಾಗೂ ತಮ್ಮ ಬದುಕನ್ನು ಉತ್ತಮಪಡಿಸಿಕೊಳ್ಳಲು ಜ್ಞಾನದ ಅವಶ್ಯಕತೆ ಇದೆ ಎಂದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಮಂಡ್ಯ ಜಿಲ್ಲಾ ಕೃಷಿ ಜಂಟಿ ನಿರ್ದೇಶಕ ವಿ.ಎಸ್. ಅಶೋಕ್ ಮಾತನಾಡಿ, ಒಂದು ಕಾಲದಲ್ಲಿ ದೇಶದ ಅತಿ ಹೆಚ್ಚು ಲಾಭದಾಯಕ ಹಾಗೂ ವೈಭವೋಪೇತ ಜೀವನಶೈಲಿ ಹೊಂದಿದ್ದ 10 ಕೃಷಿ ಜಿಲ್ಲೆಗಳಲ್ಲಿ ಮಂಡ್ಯ ಜಿಲ್ಲೆಯೂ ಒಂದಾಗಿತ್ತು. ಆದರೆ ಇತ್ತೀಚಿನ ದಶಕಗಳಲ್ಲಿ ನೀರಾವರಿ ಬೆಳೆಗಳಾದ ಭತ್ತ ಮತ್ತು ಕಬ್ಬಿನ ದರ ಕುಸಿತದಿಂದ ರೈತರ ಆದಾಯ ಕಡಿಮೆಯಾಗುತ್ತಿದೆ ಎಂದು ಕಳವಳ ವ್ಯಕ್ತಪಡಿಸಿದರು.

ಹಿಂದೆ ಮಳೆಯಾಶ್ರಿತ ಪ್ರದೇಶಗಳಾದ ಮಳವಳ್ಳಿ, ನಾಗಮಂಗಲದಿಂದ ಜನರು ನೀರಾವರಿ ಪ್ರದೇಶಕ್ಕೆ ಕೆಲಸಕ್ಕೆ ಬರುತ್ತಿದ್ದರು. ಆದರೆ ಇಂದು ಪರಿಸ್ಥಿತಿ ಉಲ್ಟಾ ಆಗಿದೆ. ಸರಕಾರಿ ಮಟ್ಟದ ರೈತ ಸಂಪರ್ಕ ಕೇಂದ್ರಗಳು ಗ್ರಾಮ ಮಟ್ಟದಲ್ಲಿ ಮಾಹಿತಿ ನೀಡಲು ತೆರಳಿದರೇ ರೈತರು ಆಸಕ್ತಿ ತೋರುತಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು. ಸರಕಾರದ ಯೋಜನೆಗಳ ಮಾಹಿತಿಯ ಜತೆಗೆ ತಾಂತ್ರಿಕ ಜ್ಞಾನದ ಕೊರತೆಯನ್ನು ನೀಗಿಸಲು ಈ ರೈತರ ಶಾಲೆಗಳು ಪರ್ಯಾಯ ಶಕ್ತಿಯಾಗಿ ಕೆಲಸ ಮಾಡಲಿವೆ. ಸತ್ಯಮೂರ್ತಿಯವರ ನೇತೃತ್ವದಲ್ಲಿ ಯುವಕರ ಮೂಲಕ ಗ್ರಾಮ ಮಟ್ಟದಲ್ಲೇ ಮಾಹಿತಿ ನೀಡುವ ಈ ಪರಿಕಲ್ಪನೆ ಶ್ಲಾಘನೀಯವಾಗಿದೆ. ಜಿಲ್ಲೆಯಲ್ಲಿ ಈಗಾಗಲೇ 30ಕ್ಕೂ ಹೆಚ್ಚು ರೈತ ಉತ್ಪಾದಕ ಕಂಪನಿಗಳು ಕಾರ್ಯನಿರ್ವಹಿಸುತ್ತಿದ್ದು ಈ ಶಾಲೆಯು ರೈತರಿಗೆ ಹೆಚ್ಚಿನ ಶಕ್ತಿ ನೀಡಲಿವೆ ಎಂದರು.

ಮದ್ದೂರು ಸಹಾಯಕ ಕೃಷಿ ನಿರ್ದೇಶಕರು ಪ್ರತಿಭಾ, ಕಾರಸವಾಡಿ ಮಹದೇವು, ಬೋರೇಗೌಡ, ನಾಗರಾಜು, ನಾಡಗೌಡ, ಎಂ. ಕಿರಣ್ ಕುಮಾರ್, ಕೆಂಪೇಗೌಡ ಒಕ್ಕಲಿಗರ ಕ್ಷೇಮಾಭಿವೃದ್ಧಿ ಸಂಘದ ಮಂಡ್ಯ ಘಟಕದ ಅಧ್ಯಕ್ಷ ಘಟಕದ ಅಧ್ಯಕ್ಷ ಎಂ ಎನ್. ನವೀನ್ ಕುಮಾರ್, ಮದ್ದೂರು ಘಟಕದ ಅಧ್ಯಕ್ಷ ಎಚ್. ಎಂ. ಕಿರಣ್, ಸಿ.ಎ. ಕೆರೆ ಹೋಬಳಿ ಘಟಕದ ಅಧ್ಯಕ್ಷ ಎಚ್.ಎಂ. ಅಭಿತ್ ಗೌಡ., ಮಳವಳ್ಳಿ ಘಟಕದ ಅಧ್ಯಕ್ಷ ಎಸ್, ಮಹೇಶ್, ಬಿದರ ಹೊಸಹಳ್ಳಿ ಘಟಕದ ಅಧ್ಯಕ್ಷ ಪ್ರೇಮ್ ಕುಮಾರ್, ಮಹಿಳಾ ಘಟಕದ ಅಧ್ಯಕ್ಷೆ ಬಿ.ಪಿ. ಪ್ರತಿಭಾ, ಆಲಕೆರೆ ಘಟಕದ ಅಧ್ಯಕ್ಷ ಚಂದ್ರು (ಕಾಫಿಪುಡಿ), ಪದಾಧಿಕಾರಿಗಳು, ಮಹಿಳಾ ಘಟಕದ ಸದಸ್ಯರು ಮತ್ತು ಗ್ರಾಮಸ್ಥರು ಭಾಗವಹಿಸಿದ್ದರು.

# ವಿಮಾನ ಹೈಜಾಕ್: ಅಣಕು ಕಾರ್ಯಾಚರಣೆ




**ಬೆಂ.ಗ್ರಾ.ಜಿಲ್ಲೆ:** ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ವಿಮಾನ ನಿಲ್ದಾಣದಲ್ಲಿ ಮಾ.5 ರಂದು ವಿಮಾನ ಹೈಜಾಕ್ ಅಣುಕು ಪ್ರದರ್ಶನವನ್ನು ಯಶಸ್ವಿಯಾಗಿ ನಡೆಸಿತು. ಅಣುಕು ಕಾರ್ಯಾಚರಣೆಯಂತೆ ರಾಯ್ಪುರ ವಿಮಾನ ನಿಲ್ದಾಣದಿಂದ ಮಂಗಳೂರು ವಿಮಾನ ನಿಲ್ದಾಣಕ್ಕೆ ಪ್ರಯಾಣಿಸುತ್ತಿದ್ದ ಅಪೆಕ್ಸ್ ವಿಸ್ಟಾ ಏರ್ಲೈನ್ಸ್‌ಗೆ ಸೇರಿದ ಫ್ಲೈಟ್ ಸಂಖ್ಯೆ (ಎಕ್ಸ್ವಿ–ಎಬಿಸಿ) ಏರ್ಬಸ್ 321 ವಿಮಾನವನ್ನು ಅಪಹರಣಕಾರರು ಅಪಹರಿಸಿ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ನಿಲ್ದಾಣದಲ್ಲಿ ಇಳಿಸಲು ಸೂಚಿಸುತ್ತಾರೆ.


ಅಪಹರಣಕಾರರು ವಿವಿಧ ಬೇಡಿಕೆಗಳು ಈಡೇರಿಸುವಂತೆ ಸಿಬ್ಬಂದಿ ಮುಂದೆ ಬೇಡಿಕೆ ಇಟ್ಟಿದ್ದರು. ಅದನ್ನು ಓಲೈಸುವ ಹಾಗೂ ತುರ್ತು ಪ್ರತಿಕ್ರಿಯೆ ಕಾರ್ಯಾಚರಣೆಯ ಭಾಗವಾಗಿ, ಮುನ್ನೆಚ್ಚರಿಕೆ ಕ್ರಮವಾಗಿ ವಿಮಾನ ನಿಲ್ದಾಣದ ಎರಡೂ ರನ್ವೇಗಳನ್ನು ವಿಮಾನ ಸಂಚಾರಕ್ಕಾಗಿ ತಾತ್ಕಾಲಿಕವಾಗಿ ಮುಚ್ಚಲಾಗಿತ್ತು.

ಹೈಜಾಕ್ ಆಗಿದ್ದ ವಿಮಾನದಲ್ಲಿ 30 ಪ್ರಯಾಣಿಕರು ಮತ್ತು 5 ವಿಮಾನ ಸಿಬ್ಬಂದಿ ಇದ್ದರು. ದುರದೃಷ್ಟವಶಾತ್, ಅಪಹರಣಕಾರರು ಒಬ್ಬ ಪ್ರಯಾಣಿಕನನ್ನು ಸಾಯಿಸಿದ್ದರು. ಉಳಿದ ಪ್ರಯಾಣಿಕರು ಮತ್ತು ಸಿಬ್ಬಂದಿ ಸುರಕ್ಷಿತವಾಗಿದ್ದಾರೆ ಎಂದು ದೃಢಪಟ್ಟಿದೆ.

ವಿಮಾನ ನಿಲ್ದಾಣದ ತುರ್ತು ನಿರ್ವಹಣಾ ಸಮಿತಿಯು ಅಪಹರಣದ ಪರಿಸ್ಥಿತಿಯನ್ನು ಬಗೆಹರಿಸಲು ವಿವಿಧ ಭದ್ರತಾ ಏಜೆನ್ಸಿಗಳೊಂದಿಗೆ ಸಕ್ರಿಯವಾಗಿ ತೊಡಗಿಸಿಕೊಂಡಿದೆ. ಅಪಹರಣಕಾರರೊಂದಿಗೆ ಸಂವಹನ ನಡೆಸಲು ಮತ್ತು ಅವರ ಬೇಡಿಕೆಗಳ ಬಗ್ಗೆ ಮಾತುಕತೆ ನಡೆಸಲು ಸಂಧಾನಕಾರರನ್ನು ನಿಯೋಜಿಸಲಾಗಿತ್ತು. ಇದೀಗ ಅಪಹರಣಕಾರರು ಪ್ರಯಾಣಿಕರನ್ನು ಬಿಡುಗಡೆ ಮಾಡಲು ಒಪ್ಪಿಕೊಂಡಿದ್ದಾರೆ ಎಂದು ನಾವು ಖಚಿತಪಡಿಸುತ್ತೇವೆ.ಈ ಘಟನೆಯ ಕುರಿತು ಸಮಗ್ರ ತನಿಖೆ ನಡೆಸಲು ತನಿಖಾ ತಂಡವನ್ನು ನಿಯೋಜಿಸಲಾಗಿದೆ. ಇದು ಕೇವಲ ಅಣುಕು ಪ್ರದರ್ಶನವಾಗಿದ್ದು ಯಾವುದೇ ಸಾವು ನೋವು ಸಂಭವಿಸಿಲ್ಲ.

ಬೆಂಗಳೂರು ವಿಮಾನ ನಿಲ್ದಾಣದಲ್ಲಿ ಅಣುಕು ಪ್ರದರ್ಶನದ ನಂತರ ಪ್ರಮುಖ ಶಿಫಾರಸ್ಸುಗಳ ಕುರಿತು ಸಂಪೂರ್ಣವಾದ ವಿವರಣೆ ಮತ್ತು ಮೌಲ್ಯಮಾಪನ ನಡೆಸಲಾಗುತ್ತದೆ. ಈ ಅಣುಕು ಪ್ರದರ್ಶನ ತುರ್ತು ಪ್ರತಿಕ್ರಿಯೆ ಪ್ರೋಟೋಕಾಲ್, ಸಂವಹನ ಚೌಕಟ್ಟು ಮತ್ತು ಮಧ್ಯಸ್ಥಗಾರರ ಸಹಯೋಗವನ್ನು ಪರಿಷ್ಕರಿಸಲು ಸಹಕಾರಿಯಾಗುತ್ತದೆ. ಇದು, ಸುರಕ್ಷತೆ ಮತ್ತು ಸನ್ನದ್ಧತೆಗೆ ವಿಮಾನ ನಿಲ್ದಾಣದ ಬದ್ಧತೆಯನ್ನು ಬಲಪಡಿಸುತ್ತದೆ. ಯಾವುದೇ ಪರಿಸ್ಥಿತಿ ಅಥವಾ ಸನ್ನಿವೇಶದಲ್ಲಿ ಎಲ್ಲಾ ವಿಮಾನ ನಿಲ್ದಾಣ ಬಳಕೆದಾರರ ಸುರಕ್ಷತೆ ಮತ್ತು ಯೋಗಕ್ಷೇಮಕ್ಕೆ ಆದ್ಯತೆ ನೀಡುವ ಸುರಕ್ಷಿತ ವಾತಾವರಣವನ್ನು ಒದಗಿಸುವ ಗುರಿಯನ್ನು ಇದು ಅಣುಕು ಪ್ರದರ್ಶನ ಹೊಂದಿದೆ.

## ಬಜೆಟ್: ಬೆಂಗಳೂರು ಗ್ರಾಮಾಂತರಕ್ಕೆ ಸಿಕ್ಕದ್ದೇನು?




**ಬೆಂ.ಗ್ರಾ.ಜಿಲ್ಲೆ:** ಕರ್ನಾಟಕ ರಾಜ್ಯದ ಮುಖ್ಯಮಂತ್ರಿಗಳಾದ ಮಾನ್ಯ ಸಿದ್ದರಾಮಯ್ಯನವರು 2026–27ನೇ ಸಾಲಿನ ರಾಜ್ಯ ಬಜೆಟ್ ಅನ್ನು ಇಂದು ವಿಧಾನಸೌಧದಲ್ಲಿ ಮಂಡಿಸಿದರು.

ಬೆಂಗಳೂರು ಗ್ರಾಮಾಂತರ ಜಿಲ್ಲೆಗೆ ಬಜೆಟ್ ನಲ್ಲಿ ಮುಖ್ಯಮಂತ್ರಿಗಳು ಘೋಷಿಸಿದ ಯೋಜನೆಗಳ ಕುರಿತು ವಿವರ ಕೆಳಕಂಡಂತಿದೆ. ದೊಡ್ಡಬಳ್ಳಾಪುರದಲ್ಲಿ ಹೊಸದಾಗಿ ಸಂಚಾರ ಪೊಲೀಸ್ ಠಾಣೆ ಸ್ಥಾಪನೆ ಮಾಡಲಾಗುವುದು. ಹೊಸಕೋಟೆ ತಾಲ್ಲೂಕಿನ ಸೂಲಿಬೆಲೆ ಮತ್ತು ನಂದಗುಡಿ ಹೋಬಳಿಗಳ 59 ಕೆರೆಗಳಿಗೆ ಹೆಚ್.ಎನ್ ವ್ಯಾಲಿ ಯೋಜನೆಯಿಂದ ಸಂಸ್ಕರಿಸಿದ ತ್ಯಾಜ್ಯ ನೀರನ್ನು ಏತ ನೀರಾವರಿ ಮೂಲಕ ತುಂಬಿಸುವ ಕಾಮಗಾರಿಯನ್ನು 140 ಕೋಟಿ ರೂ.ಗಳ ಅಂದಾಜು ಮೊತ್ತದಲ್ಲಿ ಅನುಷ್ಠಾನಗೊಳಿಸಲಾಗುವುದು.


ಬೆಂಗಳೂರು ನಗರದ ವೃಷಭಾವತಿ ವ್ಯಾಲಿಯಿಂದ ದ್ವಿತೀಯ ಹಂತದಲ್ಲಿ ಸಂಸ್ಕರಿಸಿದ 308 ಎಂ.ಎಲ್.ಡಿ. ನೀರಿನಿಂದ 259 ಕೆರೆಗಳನ್ನು ತುಂಬಿಸುವ ಮೂಲ ಯೋಜನೆಯ ಪೈಕಿ ಗೋಪಾಲಪುರ ಕೆರೆಯಿಂದ ನೆಲಮಂಗಲ ಮತ್ತು ದೊಡ್ಡಬಳ್ಳಾಪುರ ತಾಲ್ಲೂಕಿನ 119 ಕೆರೆಗಳಿಗೆ ನೀರನ್ನು ತುಂಬಿಸುವ ಯೋಜನೆಯನ್ನು 650 ಕೋಟಿ ರೂ.ಗಳಲ್ಲಿ ಕೈಗೆತ್ತಿಕೊಳ್ಳಲಾಗುವುದು.

ದೊಡ್ಡಬಳ್ಳಾಪುರದಲ್ಲಿ ಪ್ಯಾರಾ ಮೆಡಿಕಲ್ ಕೋರ್ಸ್ ಪ್ರಾರಂಭಿಸಲಾಗುವುದು. ಬೆಂಗಳೂರು ನಗರದ ದಟ್ಟಣೆಯನ್ನು ಕಡಿಮೆ ಮಾಡಲು ನೆಲಮಂಗಲ–ತಾವರೆಕೆರೆ–ಬಿಡದಿ ಮಧ್ಯಂತರ ವರ್ತುಲ ರಸ್ತೆಯನ್ನು (ಬಿ.ಎಂ.ಆರ್.ಡಿ.ಎ) ಹಾಗೂ ಸ್ಥಳೀಯ ಯೋಜನಾ ಪ್ರಾಧಿಕಾರಗಳ ಆರ್ಥಿಕ ಸಂಪನ್ಮೂಲಗಳಿಂದ ನಿರ್ಮಿಸಲಾಗುವುದು.

ರಾಜ್ಯದ 2ನೇ ಮತ್ತು 3ನೇ ಹಂತದ ನಗರವಾದ ಹೊಸಕೋಟೆ ಉದ್ಯಮಿಗಳಿಗೆ ಖಟಿಬಿಣಿಭಚಿಣುಡಿಟಿ ಸೌಲಭ್ಯಗಳನ್ನು ಒದಗಿಸಲು ಕಿಯೋನಿಕ್ಸ್ ಸಂಸ್ಥೆಯ ಮೂಲಕ ಪ್ಲಗ್–ಅಂಡ್–ಪ್ಲೇ ಸೌಲಭ್ಯದ ಲೀಪ್ ಲ್ಯಾಬ್ಸ್ ಗಳನ್ನು ಸ್ಥಾಪಿಸಲಾಗುವುದು. ಬೆಂಗಳೂರಿನ ಆದಿನಾರಾಯಣ ಹೊಸಹಳ್ಳಿಯಲ್ಲಿ ಅತ್ಯಾಧುನಿಕ ಸೌಲಭ್ಯವುಳ್ಳ ವಿಜ್ಞಾನ ನಗರ ವನ್ನು (ಸೈನ್ಸ್ ಸಿಟಿ) 233 ಕೋಟಿ ರೂ. ವೆಚ್ಚದಲ್ಲಿ ಸ್ಥಾಪಿಸಲು ವಿಸ್ತೃತ ಯೋಜನಾ ವರದಿಯನ್ನು ತಯಾರಿಸಿ ಕೇಂದ್ರ ಸರ್ಕಾರಕ್ಕೆ ಸಲ್ಲಿಸಿದ್ದು, ಇದಕ್ಕೆ ಅನುಮೋದನೆ ದೊರೆತ ನಂತರ ವಾಸ್ತುವಿನ್ಯಾಸ ತಯಾರಿಸಲು ಕ್ರಮಕೈಗೊಳ್ಳಲಾಗುವುದು.

ಹೊಸಕೋಟೆ ತಾಲ್ಲೂಕಿನ 59 ಕೆರೆಗಳಿಗೆ ಸಂಸ್ಕರಿಸಿದ ನೀರಿನಿಂದ ಏತ ನೀರಾವರಿ ಕಲ್ಪಿಸಲಾಗುವುದು. ಸಣ್ಣ ನೀರಾವರಿ ಇಲಾಖೆ ವತಿಯಿಂದ ದೇವನಹಳ್ಳಿ ತಾಲ್ಲೂಕಿನ ಕಾರಹಳ್ಳಿ ಕೆರೆ ಅಭಿವೃದ್ಧಿ ಮಾಡಲಾಗುವುದು.

## ಬಜೆಟ್: ಬೆಂಗಳೂರು ಗ್ರಾಮಾಂತರಕ್ಕೆ ಸಿಕ್ಕದ್ದೇನು?




**ಬೆಂ.ಗ್ರಾ.ಜಿಲ್ಲೆ:** ಕರ್ನಾಟಕ ರಾಜ್ಯದ ಮುಖ್ಯಮಂತ್ರಿಗಳಾದ ಮಾನ್ಯ ಸಿದ್ದರಾಮಯ್ಯನವರು 2026–27ನೇ ಸಾಲಿನ ರಾಜ್ಯ ಬಜೆಟ್ ಅನ್ನು ಇಂದು ವಿಧಾನಸೌಧದಲ್ಲಿ ಮಂಡಿಸಿದರು.

ಬೆಂಗಳೂರು ಗ್ರಾಮಾಂತರ ಜಿಲ್ಲೆಗೆ ಬಜೆಟ್ ನಲ್ಲಿ ಮುಖ್ಯಮಂತ್ರಿಗಳು ಘೋಷಿಸಿದ ಯೋಜನೆಗಳ ಕುರಿತು ವಿವರ ಕೆಳಕಂಡಂತಿದೆ. ದೊಡ್ಡಬಳ್ಳಾಪುರದಲ್ಲಿ ಹೊಸದಾಗಿ ಸಂಚಾರ ಪೊಲೀಸ್ ಠಾಣೆ ಸ್ಥಾಪನೆ ಮಾಡಲಾಗುವುದು. ಹೊಸಕೋಟೆ ತಾಲ್ಲೂಕಿನ ಸೂಲಿಬೆಲೆ ಮತ್ತು ನಂದಗುಡಿ ಹೋಬಳಿಗಳ 59 ಕೆರೆಗಳಿಗೆ ಹೆಚ್.ಎನ್ ವ್ಯಾಲಿ ಯೋಜನೆಯಿಂದ ಸಂಸ್ಕರಿಸಿದ ತ್ಯಾಜ್ಯ ನೀರನ್ನು ಏತ ನೀರಾವರಿ ಮೂಲಕ ತುಂಬಿಸುವ ಕಾಮಗಾರಿಯನ್ನು 140 ಕೋಟಿ ರೂ.ಗಳ ಅಂದಾಜು ಮೊತ್ತದಲ್ಲಿ ಅನುಷ್ಠಾನಗೊಳಿಸಲಾಗುವುದು.

ಬೆಂಗಳೂರು ನಗರದ ವೃಷಭಾವತಿ ವ್ಯಾಲಿಯಿಂದ ದ್ವಿತೀಯ ಹಂತದಲ್ಲಿ ಸಂಸ್ಕರಿಸಿದ 308 ಎಂ.ಎಲ್.ಡಿ. ನೀರಿನಿಂದ 259 ಕೆರೆಗಳನ್ನು ತುಂಬಿಸುವ ಮೂಲ ಯೋಜನೆಯ ಪೈಕಿ ಗೋಪಾಲಪುರ ಕೆರೆಯಿಂದ ನೆಲಮಂಗಲ ಮತ್ತು ದೊಡ್ಡಬಳ್ಳಾಪುರ ತಾಲ್ಲೂಕಿನ 119 ಕೆರೆಗಳಿಗೆ ನೀರನ್ನು ತುಂಬಿಸುವ ಯೋಜನೆಯನ್ನು 650 ಕೋಟಿ ರೂ.ಗಳಲ್ಲಿ ಕೈಗೆತ್ತಿಕೊಳ್ಳಲಾಗುವುದು.

ದೊಡ್ಡಬಳ್ಳಾಪುರದಲ್ಲಿ ಪ್ಯಾರಾ ಮೆಡಿಕಲ್ ಕೋರ್ಸ್ ಪ್ರಾರಂಭಿಸಲಾಗುವುದು. ಬೆಂಗಳೂರು ನಗರದ ದಟ್ಟಣೆಯನ್ನು ಕಡಿಮೆ ಮಾಡಲು ನೆಲಮಂಗಲ–ತಾವರೆಕೆರೆ–ಬಿಡದಿ ಮಧ್ಯಂತರ ವರ್ತುಲ ರಸ್ತೆಯನ್ನು (ಬಿ.ಎಂ.ಆರ್.ಡಿ.ಎ) ಹಾಗೂ ಸ್ಥಳೀಯ ಯೋಜನಾ ಪ್ರಾಧಿಕಾರಗಳ ಆರ್ಥಿಕ ಸಂಪನ್ಮೂಲಗಳಿಂದ ನಿರ್ಮಿಸಲಾಗುವುದು.

ರಾಜ್ಯದ 2ನೇ ಮತ್ತು 3ನೇ ಹಂತದ ನಗರವಾದ ಹೊಸಕೋಟೆ ಉದ್ಯಮಿಗಳಿಗೆ ಖಟಿಬಿಣಿಭಚಿಣುಡಿಟಿ ಸೌಲಭ್ಯಗಳನ್ನು ಒದಗಿಸಲು ಕಿಯೋನಿಕ್ಸ್ ಸಂಸ್ಥೆಯ ಮೂಲಕ ಪ್ಲಗ್–ಅಂಡ್–ಪ್ಲೇ ಸೌಲಭ್ಯದ ಲೀಪ್ ಲ್ಯಾಬ್ಸ್ ಗಳನ್ನು ಸ್ಥಾಪಿಸಲಾಗುವುದು. ಬೆಂಗಳೂರಿನ ಆದಿನಾರಾಯಣ ಹೊಸಹಳ್ಳಿಯಲ್ಲಿ ಅತ್ಯಾಧುನಿಕ ಸೌಲಭ್ಯವುಳ್ಳ ವಿಜ್ಞಾನ ನಗರ ವನ್ನು (ಸೈನ್ಸ್ ಸಿಟಿ) 233 ಕೋಟಿ ರೂ. ವೆಚ್ಚದಲ್ಲಿ ಸ್ಥಾಪಿಸಲು ವಿಸ್ತೃತ ಯೋಜನಾ ವರದಿಯನ್ನು ತಯಾರಿಸಿ ಕೇಂದ್ರ ಸರ್ಕಾರಕ್ಕೆ ಸಲ್ಲಿಸಿದ್ದು, ಇದಕ್ಕೆ ಅನುಮೋದನೆ ದೊರೆತ ನಂತರ ವಾಸ್ತುವಿನ್ಯಾಸ ತಯಾರಿಸಲು ಕ್ರಮಕೈಗೊಳ್ಳಲಾಗುವುದು.

ಹೊಸಕೋಟೆ ತಾಲ್ಲೂಕಿನ 59 ಕೆರೆಗಳಿಗೆ ಸಂಸ್ಕರಿಸಿದ ನೀರಿನಿಂದ ಏತ ನೀರಾವರಿ ಕಲ್ಪಿಸಲಾಗುವುದು. ಸಣ್ಣ ನೀರಾವರಿ ಇಲಾಖೆ ವತಿಯಿಂದ ದೇವನಹಳ್ಳಿ ತಾಲ್ಲೂಕಿನ ಕಾರಹಳ್ಳಿ ಕೆರೆ ಅಭಿವೃದ್ಧಿ ಮಾಡಲಾಗುವುದು. ದೇವನಹಳ್ಳಿ ತಾಲ್ಲೂಕಿನ ಹಲವು ಗ್ರಾಮಗಳಲ್ಲಿ ಚೆಕ್ ಡ್ಯಾಂ ಕಂ ಎಲ್.ಎಲ್.ಸಿ ನಿರ್ಮಾಣ ಹಾಗೂ ನೆಲಮಂಗಲ ತಾಲ್ಲೂಕಿನ ಹಕ್ಕಿನಾಳು ಗ್ರಾಮದಲ್ಲಿ ಚೆಕ್ ಡ್ಯಾಂ ನಿರ್ಮಿಸಲಾಗುವುದು. ಕಾರ್ಮಿಕ ಇಲಾಖೆ ವತಿಯಿಂದ ಹಂತ–1ರಲ್ಲಿ ಹೊಸಕೋಟೆಯಲ್ಲಿ ಶ್ರಮಿಕ ವಸತಿ ಶಾಲೆ ಹಾಗೂ ಹಂತ–2ರಲ್ಲಿ ದೇವನಹಳ್ಳಿ (ಗುಂಡಂಗೆರೆ ಕ್ರಾಸ್–ತೂಬಗೆರೆ ಹೋಬಳಿ)ಯಲ್ಲಿ ?ಶ್ರಮಿಕ ವಸತಿ ಶಾಲೆ?ಯನ್ನು ಪ್ರಾರಂಭಿಸಲಾಗುವುದು.

# ವಿಶೇಷಚೇತನರು ಸ್ವಾವಲಂಬಿಗಳಾಗಲು ಸಲಹೆ



**ಮೈಸೂರು:** ವಿಶೇಷ ಚೇತನರು ತಮ್ಮ ಜೀವನ ನಡೆಸಲು ಬೇರೆಯವರನ್ನು ಅವಲಂಬಿಸದೆ ಸ್ವಯಂ ಉದ್ಯೋಗ ಕೈಗೊಂಡು ಸ್ವಾವಲಂಬಿಗಳಾಗಿ ಎಂದು ಪ್ರಾದೇಶಿಕ ಆಯುಕ್ತರು ಹಾಗೂ ಮೈಸೂರು ಮಹಾನಗರ ಪಾಲಿಕೆ ಆಡಳಿತಾಧಿಕಾರಿ ನಿತೇಶ್ ಪಾಟೀಲ್ ಅವರು ಹೇಳಿದರು.

ಇಂದು ಮೈಸೂರು ಮಹಾನಗರ ಪಾಲಿಕೆ, ಮೈಸೂರು ಹಾಗೂ ಸೆಸ್ಕೋ ಫೌಂಡೇಶನ್, ಬೆಂಗಳೂರು ಇವರುಗಳ ಸಹಯೋಗದೊಂದಿಗೆ ವಿಕಾಸ ಪಥದಲ್ಲಿ ವಿಶೇಷಚೇತನರ ಹಾಗೂ ಮಹಿಳೆಯರ ಹೆಜ್ಜೆ ಸೌರ ಬೆಂಬಲಿತ ಕಾರ್ಯಾಗಾರ ಹಾಗೂ ಜೀವನೋಪಾಯ ಪರಿಹಾರಗಳ ಪ್ರದರ್ಶನವನ್ನು ಶ್ರೀ ರಂಗಚಾರ್ಲು ಪುರಭವನ, ಮೈಸೂರು (ಟೌನ್ ಹಾಲ್) ನಲ್ಲಿ ಉದ್ಘಾಟನೆ ಮಾಡಿ ಅವರು ಮಾತನಾಡಿದರು.

ಸೌರ ಚಾಲಿತ ಯಂತ್ರಗಳಿಂದ ವಿವಿಧ ವಸ್ತುಗಳ ತಯಾರಿಕೆ ಮಾಡಬಹುದು ವಿಶೇಷ ಚೇತನರು ಕೌಶಲ್ಯಾಧರಿತ ತರಬೇತಿ ಪಡೆದು ಜೀವನೋಪಾಯ ಹಾಗೂ ಸ್ವಯಂ ಉದ್ಯೋಗವನ್ನು ಸೃಷ್ಟಿಸಿಕೊಳ್ಳಬಹುದು ಎಂದರು ಹೇಳಿದರು.

ವಿಶೇಷ ಚೇತನರಿಗೆ ಸರ್ಕಾರದಿಂದ ಹಲವಾರು ಯೋಜನೆಗಳು ನೀಡಲಾಗಿದೆ. ಮಹಾನಗರ ಪಾಲಿಕೆ ಹಾಗೂ ವಿಕಲಚೇತನ ಕಲ್ಯಾಣ ಇಲಾಖೆಯ ವತಿಯಿಂದ ವಿಶೇಷ ಚೇತನರು ಸರ್ಕಾರಿ ಯೋಜನೆಗಳನ್ನು ಪಡೆದುಕೊಳ್ಳಿ ಎಂದರು.

ವಿಶೇಷ ಚೇತನರಿಗೆ ಆಹಾರ ಸಂಶೋಧನೆ ಘಟಕವನ್ನು ಪ್ರಾರಂಭಿಸಲು ಸರ್ಕಾರದಿಂದ 50% ಸಬ್ಸಿಡಿಯನ್ನು ಪಡೆಯಬಹುದು. ಇದರಿಂದ ಅವರಯ ಉದ್ಯಮಿಗಳಾಗಿ ಬೇರೆಯವರಿಗೆ ಉದ್ಯೋಗ ನೀಡುವುದರೊಂದಿಗೆ ಆರ್ಥಿಕವಾಗಿ ಜೀವನಮಟ್ಟ ಸುಧಾರಿಸಿಕೊಳ್ಳಬಹುದು ಎಂದರು.

ಮಹಾನರ ಪಾಲಿಕೆಯಲ್ಲಿ ಶೇ 5 ರಷ್ಟು ಅನುದಾನವನ್ನು ವಿಶೇಷ ಚೇತನರಿಗೆ ಮೀಸಲಿಡಲಾಗಿದೆ. ವಿಶೇಷ ಚೇತನರು ಸರ್ಕಾರದ ಯೋಜನೆಗಳನ್ನು ನೇರವಾಗಿ ಅಧಿಕಾರಿಗಳನ್ನು ಭೇಟಿ ಮಾಡಿ ಸರ್ಕಾರದ ಯೋಜನೆಗಳ ಬಗ್ಗೆ ಮಾಹಿತಿ ಪಡೆದುಕೊಳ್ಳಬಹುದು ಎಂದು ಹೇಳಿದರು.

ರಾಜ್ಯದ ಹಲವಾರು ಜಿಲ್ಲೆಗಳಲ್ಲಿ ವಿಶೇಷ ಚೇತನರು ಸೌರ ಚಾಲಿತ ಯಂತ್ರಗಳನ್ನು ಬಳಸಿಕೊಂಡು ಜೀವನ ಮಾಡುತ್ತಿದ್ದಾರೆ. ಸ್ವತ: ಉದ್ಯೋಗವನ್ನು ಸೃಷ್ಟಿಸಿಕೊಂಡು ಸಮಾಜದಲ್ಲಿ ಆರ್ಥಿಕವಾಗಿ ಸಬಲೀಕರಣವಾಗಿ ಸಮಾಜದಲ್ಲಿ ಮಾದರಿಯಾಗಿ ಬದುಕುತಿದ್ದಾರೆ ಎಂದು ಹೇಳಿದರು. ಜಿಲ್ಲಾಧಿಕಾರಿಗಳಾದ ಜಿ. ಲಕ್ಷ್ಮೀಕಾಂತ್ ರೆಡ್ಡಿ ಅವರು ಮಾತನಾಡಿ ವಿಶೇಷ ಚೇತನರಿಗೆ ಸರ್ಕಾರದ ಯೋಜನೆಗಳು ಮತ್ತು ಯಂತ್ರೋಪಕರಣಗಳನ್ನು ಹೇಗೆ ಬಳಸಬೇಕು ಎಂದು ಮಹಾನಗರ ಪಾಲಿಕೆ ಹಾಗೂ ಸೆಲ್ಕೋ ಫೌಂಡೇಶನ್ ಸಹಯೋಗದಲ್ಲಿ ನಡೆಸುತ್ತಿರುವ ಈ ಕಾರ್ಯಗಾರದಲ್ಲಿ ವಿಶೇಷ ಚೇತನರು ಅನುಕೂಲಗಳನ್ನು ಪಡೆದುಕೊಳ್ಳಿ ಎಂದರು.

ಈ ವರ್ಷದ ಬಜೆಟ್ ನಲ್ಲಿ ಮಹಾನಗರ ಪಾಲಿಕೆಯಿಂದ ವಿಶೇಷ ಚೇತನರಿಗೆ 5% ಅನುದಾನವನ್ನು ವಿಶೇಷ ಚೇತನರಿಗೆ ಸಬ್ಸಿಡಿಯಲ್ಲಿ ಯಂತ್ರೋಪಕರಣಗಳಿಗೆ ನೀಡಲಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಮೈಸೂರು ಮಹಾನಗರ ಪಾಲಿಕೆ ಆಯುಕ್ತರಾದ ಶೇಖ್ ತನ್ವೀರ್ ಆಸಿಫ್,ಮೈಸೂರು ಮಹಾನಗರ ಪಾಲಿಕೆ ಉಪಾಯುಕ್ತೆ ವೀಣಾ,ಜಿಲ್ಲಾ ವಿಕಲಚೇತನರ ಕಲ್ಯಾಣ ಅಧಿಕಾರಿಗಳು ರಾಘವೇಂದ್ರ, ಬೆಂಗಳೂರು ಸೆಲ್ಕೋ ಇಂಡಿಯಾ ಫೌಂಡೇಶನ್ ರುಚಿ ಲಿಮಯೆ, ಏರಿಯಾ ಮ್ಯಾನೇಜರ್, ಸುಕುಮಾರ್ ಕೆ, ಸಂಯೋಜಕರು ಫಣೀಂದ್ರ ಸಿಂಗ್, ಸಿ.ಸಿ ಎಸ್.ಟಿ ಯೋಜನೆ ನಿರ್ದೇಶಕ ಕೆ.ಆರ್.ಶಂಕರ, ಡಿ.ಡಿ.ಎ.ಎಸ್.ಸಿ ರಾಜ್ಯ ಸಂಯೋಜಕ ನರಸಿಂಹಮೂರ್ತಿ ಮತ್ತಿತರರು ಉಪಸ್ಥಿತರಿದ್ದರು.

# ಬೇಸಿಗೆಯ ಬಿಸಿಲಿಗೆ ದೇಹ ತಂಪಾಗಿಸಸೋ ಭೂಲೋಕದ ಅಮೃತ ಮಜ್ಜಿಗೆ



ಆರೋಗ್ಯ ಭಾಗ್ಯ



✍ಸೌಮ್ಯಸನತ್

ತಂಕ್ರ ಜಾಕ್ರಸ್ತ ದುರ್ಲಭಂ? ಮಜ್ಜಿಗೆ ದೇವಲೋಕದ ದೇವೇಂದ್ರನಿಗೂ ಕೂಡ ದುರ್ಲಭವಾಗಿತ್ತಂತೆ. ಈ ಉಕ್ತಿಯೇ ಮಜ್ಜಿಗೆಯ ಪ್ರಾಧಾನ್ಯತೆಯನ್ನು ಸಾರಿ ಹೇಳುತ್ತದೆ.

ಅವಧಿ ಮುನ್ನವೇ ಬೇಸಿಗೆ ನೆತ್ತಿ ಸುಡುತ್ತಿದೆ. ಬೆಂಗಳೂರು ಸೇರಿ ರಾಜ್ಯದ ಹಲವು ಭಾಗದಲ್ಲಿ ಬೇಸಿಗೆಯ ಬಿಸಿಲು ಈಗಾಗಲೆ ಪ್ರಖರವಾಗಿದೆ. ಹೀಗಾಗಿ ದೇಹಕ್ಕೆ ತಂಪಾದ ಆಹಾರ ಸೇವನೆ ಬಹಳ ಮುಖ್ಯ. ಏಕೆಂದರೆ ಹೆಚ್ಚು ಬಿಸಿಲಿನ ಸಮಯದಲ್ಲಿ ದೇಹಕ್ಕೆ ತಂಪು ನೀಡುವಂತಹ ಆಹಾರ ಪದಾರ್ಥ ಸೇವಿಸುವುದು ಆರೋಗ್ಯಕ್ಕೆ ಬಹಳ ಉತ್ತಮ.

ಮಜ್ಜಿಗೆಯನ್ನು ಮೊಸರು ಮತ್ತು ತಣ್ಣೀರನ್ನು ಒಟ್ಟಾಗಿ ಬಳಸಿ ಕಡೆದು ತಯಾರಿಸಲಾಗುತ್ತದೆ. ಇದನ್ನು ಹಾಗೆಯೇ ಅಥವಾ ವಿವಿಧ ಸಂಬಾರ ಪದಾರ್ಥಗಳಿಂದ ರುಚಿಗೊಳಿಸಿ ಸೇವಿಸಬಹುದು. ಸಾಂಪ್ರದಾಯಿಕ ಅಥವ ಮನೆಯಲ್ಲಿ ತಯಾರಿಸಲಾದ ಮಜ್ಜಿಗೆಯಲ್ಲಿ ಪ್ರೋಬಯಾಟಿಕ್ ಸೂಕ್ಷ್ಮಜೀವಿಗಳಿರುವ ಕಾರಣ ಅದು ನಮ್ಮ ದೇಹಕ್ಕೆ ಒಳ್ಳೆಯ ಆಹಾರ ಪದಾರ್ಥವಾಗಿದೆ. ಹೊಟ್ಟೆ ಮತ್ತು ಚರ್ಮಕ್ಕೆ ತಂಪನ್ನುಂಟುಮಾಡುತ್ತದೆ. ಮೊಸರನ್ನು ಕಡೆದು ಮಜ್ಜಿಗೆ ಮಾಡುವುದರಿಂದ ಹಾಲು ಅಥವಾ ಮೊಸರಿನಲ್ಲಿ ಇರುವಷ್ಟು ಕೊಬ್ಬಿನ ಅಂಶ ಇದರಲ್ಲಿರುವುದಿಲ್ಲ. ಮಜ್ಜಿಗೆ ದೇಹದ ರೋಗ ತಡೆಗಟ್ಟಲು ಬೇಕಾಗುವ ಶಕ್ತಿಯನ್ನು ಕೊಡುತ್ತದೆ. ಭಾರತದಲ್ಲಿ ಬೆಣ್ಣೆ ತಯಾರಿಸಿದ ಬಳಿಕ ಉಳಿಯುವಂತಹ ಬಿಳಿ ದ್ರವಕ್ಕೆ "ಮಜ್ಜಿಗೆ"ಯೆಂದು ಕರೆಯುವರು.

**ನುಡಿಮುತ್ತುಗಳಲ್ಲಿ ಮಜ್ಜಿಗೆ**

- ಅಸಲು ಇಲ್ಲದೆ ಬಡ್ಡಿ ಇಲ್ಲ, ಮೊಸರು ಇಲ್ಲದೆ ಮಜ್ಜಿಗೆ ಇಲ್ಲ.
- ಈಚಲುಮರದ ಕೆಳಗೆ ಮಜ್ಜಿಗೆ ಕುಡಿದರೆ ನಾಚಿಗೆಗೇಡಾಗದೇ?
- ತಾನು ಹೋದರೆ ಮಜ್ಜಿಗಿಲ್ಲ, ಮೊಸರಿಗೆ ಚೀಟು?,
- ಪಾದ್ಯಕ್ಕೆ ನೀರು ಇಲ್ಲ, ಊಟಕ್ಕೆ ಮಜ್ಜಿಗೆ ಎಲ್ಲಿ??,
- ಮಜ್ಜಿಗೆಗೆ ಹೋದವನಿಗೆ ಎಮ್ಮೆ ಕ್ರಯವು ಯಾಕೆ??,
- ಮಜ್ಜಿಗೆಗೆ ತಕ್ಕ ರಾಮಾಯಣ ಹೇಳಿದ?,
- ಅತ್ತೇಮನೆಗೆ ಮಜ್ಜಿಗೆನೀರು, ತವರುಮನೆಗೆ ಹಾಲು ಮೊಸರು?,

ಬಸವಾ! ಎಂದರೆ ಪಾಪ! ಸೊಸೆಗೆ ಮಜ್ಜಿಗೆ ನೀರು ತಾ!



ಸಾಮಾನ್ಯವಾಗಿ ಮಜ್ಜಿಗೆಯಿಂದ ತಯಾರಿಸಿದ ಅಡುಗೆ ಎಲ್ಲರಿಗೂ ಹೆಚ್ಚು ಇಷ್ಟ ವಾಗುತ್ತದೆ. ಹಸಿದಾಗಲೂ ಮೊದಲು ನೆನಪಾಗುವುದು ಮಜ್ಜಿಗೆ. ಹೊಲದಲ್ಲಿ ದುಡಿದು ದಣಿದು ಮನೆಗೆ ಬಂದಾಗ ತಂಪಾದ ಮಜ್ಜಿಗೆ ಕುಡಿದು ವಿಶ್ರಾಂತಿ ಪಡೆದರೆ ದೇಹದ ದಣಿವೆಲ್ಲಾ ಮಾಯವಾಗುತ್ತೆ ! ಇನ್ನು ಕೆಲವರು ಮಸಾಲಾ ಮಜ್ಜಿಗೆ ಮಾಡಿಯೂ ಸವಿಯುತ್ತಾರೆ. ಈ ಮಜ್ಜಿಗೆ ರುಚಿಯೂ ಹೌದು ಜೊತೆಗೆ ಆರೋಗ್ಯ ಪ್ರಯೋಜನಗಳನ್ನೂ ನೀಡುತ್ತದೆ. ಹಾಗಿರುವಾಗ ಮಜ್ಜಿಗೆ ಸೇವನೆಯಿಂದ ಆರೋಗ್ಯ ಪ್ರಯೋಜನಗಳು ಎಷ್ಟಿವೆ? ಕುತೂಹಲಕರ ಸಂಗತಿಗಳು ಈ ಕೆಳಗಿನಂತಿದೆ ತಿಳಿಯೋಣ.

**ಸರ್ವಕಾಲಕ್ಕೂ ನಾವು ತಿಳಿದಿರಲೇಬೇಕಾದ ನೀರು ಮಜ್ಜಿಗೆಯ ಉಪಯೋಗಗಳು.**

ನಿಮಗೆ ನೀರು ಪದೇ ಪದೇ ಕುಡಿಯಲು ಬೇಜಾರೆನಿಸಿದರೆ ಮಜ್ಜಿಗೆ ಕುಡಿದು ನೋಡಿ, ದೇಹ ಉಲ್ಲಾಸಿತವಾಗುತ್ತದೆ. ಅಜೀರ್ಣ, ಹೊಟ್ಟೆನೋವು ಕಂಡುಬಂದಲ್ಲಿ ಅರ್ಧ ಲೋಟ ಹುಳಿ ಮಜ್ಜಿಗೆಗೆ ಇಂಗು, ಉಪ್ಪು ಬೆರೆಸಿ ಕುಡಿದರೆ ಕೆಲವೇ ಹೊತ್ತಿನಲ್ಲಿ ಹೊಟ್ಟೆನೋವು ಉಪಶಮನವಾಗುತ್ತದೆ.



ಮಜ್ಜಿಗೆ ಉತ್ತಮ ಜೀರ್ಣಕಾರಿ ದ್ರವ ಪದಾರ್ಥ. ಮನೆಯಲ್ಲಿ ಹಬ್ಬಹರಿದಿನಗಳ ಸಂದರ್ಭದಲ್ಲಿ, ಯಾವುದೋ ಸಮಾರಂಭಕ್ಕೆ ಹೋಗಿ ಊಟ ಮಾಡಿ ಹೊಟ್ಟೆ ಭಾರವೆನಿಸುತ್ತಿದ್ದರೆ ಮಜ್ಜಿಗೆಗೆ ಉಪ್ಪು ಸೇರಿಸಿ ಕುಡಿದರೆ ತಿಂದ ಆಹಾರ ಜೀರ್ಣವಾಗುತ್ತದೆ. ಹಸಿಮೆಣಸಿನಕಾಯಿ, ಕೊತ್ತಂಬರಿ ಸೊಪ್ಪು ಹಾಕಿದರೆ ಇನ್ನಷ್ಟು ರುಚಿ ಕೊಡುತ್ತದೆ ಅದೆಷ್ಟೋ ಆರೋಗ್ಯ ಸಮಸ್ಯೆಗಳಿಗೆ ಮನೆಯಲ್ಲೇ ತಯಾರಿಸುವ ಪದಾರ್ಥಗಳು ಪರಿಣಾಮಕಾರಿಯಾಗಿರುತ್ತವೆ. ಆದರೆ, ಅವುಗಳ ನಿಜವಾದ ಉಪಯೋಗ ನಮಗೆ ತಿಳಿದಿರುವುದಿಲ್ಲ. ಅಂತಹವುಗಳಲ್ಲಿ ಮಜ್ಜಿಗೆಯೂ ಒಂದು. ಹಾಲಿನ ಉಪ ಉತ್ಪನ್ನವಾದ ಮಜ್ಜಿಗೆ ನಿಜವಾಗಿಯೂ ಆರೋಗ್ಯವರ್ಧಕ ಮಜ್ಜಿಗೆಯನ್ನು ನಿತ್ಯ ಇದನ್ನು ಸೇವಿಸುವುದರಿಂದ ಹಲವು ಅನುಕೂಲಗಳಿವೆ.

1. ಮಜ್ಜಿಗೆಯಲ್ಲಿರುವ ಎಲೆಕ್ಟ್ರೋಲೈಟ್ಸ್ ಮತ್ತು ಅತಿಯಾದ ದ್ರವಾಂಶ ನಿಮ್ಮ ದೇಹ ನಿರ್ಜಲೀಕರಣಗೊಳ್ಳುವುದನ್ನ ತಡೆಯುತ್ತದೆ.
2. ಹೆಚ್ಚು ಎಣ್ಣೆ, ಮಸಾಲೆ ಪದಾರ್ಥಗಳನ್ನ ತಿಂದ ಬಳಿಕ ಮಜ್ಜಿಗೆ ಸೇವಿಸುವುದರಿಂದ ಹೊಟ್ಟೆ ಹಗುರವಾಗಿ ಬಹಿರ್ದೆಸೆಗೆ ಅನುಕೂಲವಾಗುತ್ತೆ.
3. ಎಲ್ಲಕ್ಕಿಂತ ಪ್ರಮುಖವಾದ ಅಂಶವೆಂದರೆ ಆಸಿಡಿಟಿಯಿಂದ ಬಳಲುತ್ತಿರುವವರಿಗೆ ಮಜ್ಜಿಗೆ ರಾಮಬಾಣ.
4. ವಿಟಮಿನ್ ಬಿ12 ಯತೇಚ್ಛವಾಗಿ ಒಳಗೊಂಡಿರುವ ಮಜ್ಜಿಗೆಯಿಂದ ಅನೀಮಿಯಾ, ಖಿನ್ನತೆ ದೂರವಾಗುತ್ತೆ.
5. ಮಜ್ಜಿಗೆಯಲ್ಲಿರುವ ಆಸಿಡ್, ಜರ್ಮ್ಸ್ ಮತ್ತು ಬ್ಯಾಕ್ಟೀರಿಯಾಗಳನ್ನ ಕೊಲ್ಲುತ್ತದೆ. ಹೊಟ್ಟೆಯನ್ನು ಶುದ್ಧೀಕರಿಸಿಜೀರ್ಣಶಕ್ತಿವೃದ್ಧಿಸುತ್ತದೆ.ಬಿಸಿಲಿಂದ ಏರಿದ ದೇಹದ ಬಿಸಿಯನ್ನು ತಗ್ಗಿಸುತ್ತದೆ.
6. ದೇಹಕ್ಕೆ ಬೇಕಾದ ಕ್ಯಾಲ್ಶಿಯಂ,ವಿಟಮಿನ್,ಪ್ರೊಟೀನ್ ಗಳನ್ನು ಮಜ್ಜಿಗೆ ನೀಡುತ್ತದೆ.ಕ್ಯಾನ್ಸರ್ ತಡೆ, ಕೊಲೆಸ್ಟ್ರಾಲ್ ಕಡಿಮೆ ಹಾಗೂ ರಕ್ತದೊತ್ತಡ ನಿಯಂತ್ರಿಸಲು ಮಜ್ಜಿಗೆ ರಾಮಬಾಣವಾಗಿದೆ.
7. ಬೆಣ್ಣೆ ತೆಗೆದ ಮಜ್ಜಿಗೆಯಲ್ಲಿ ಆರೋಗ್ಯಕರ ಕಾರ್ಬೋಹೈಡ್ರೇಟ್? ಮತ್ತು ಲ್ಯಾಕ್ಟೋಸ್ ಇರುತ್ತದೆ. ಇದು ರೋಗನಿರೋಧಕ ಶಕ್ತಿ ಹೆಚ್ಚಿಸಲು ಸಹಾಯ ಮಾಡುತ್ತದೆ.

ಅತಿಯಾದರೆ ಅಮೃತವೂ ವಿಷ? ಅಂತೆಯೇ ಮಜ್ಜಿಗೆಯ ಗುಣ ದೋಷಗಳನ್ನು ತಿಳಿದು, ನಮ್ಮ ನಮ್ಮ ದೇಹ ಪ್ರಕೃತಿಗೆ, ಋತುವಿಗೆ, ಜೀರ್ಣ ಶಕ್ತಿಗೆ ಅಡ್ಡಿಯಾಗದ ಪ್ರಮಾಣದಲ್ಲಿ ಸೇವಿಸುವುದು ಆರೋಗ್ಯಕರ ಪ್ರಯತ್ನಿಸೋಣ ಅಲ್ಲವೆ?



### ನೆನಪಿನಲ್ಲಿಡಬೇಕಾದ ಅಂಶಗಳು


1) ಹಾಲು ಹಾಗೂ ಡೈರಿ ಉತ್ಪನ್ನಗಳಲ್ಲಿ ಇರುವಂತೆ ಮಜ್ಜಿಗೆಯಲ್ಲಿ ಲ್ಯಾಕ್ಟೋಸ್ ಅಂಶವಿರುತ್ತದೆ. ಲ್ಯಾಕ್ಟೋಸ್ ಅಲರ್ಜಿ ಇರುವವರು ಮಜ್ಜಿಗೆಯನ್ನು ಅತಿಯಾಗಿ ಸೇವಿಸುವುದರಿಂದ ಹೊಟ್ಟೆಯುಬ್ಬರ, ಗ್ಯಾಸ್ಟ್ರಿಕ್, ಅತಿಸಾರ, ಜೀರ್ಣಕ್ರಿಯೆಗೆ ಸಂಬಂಧಿಸಿದ ಸಮಸ್ಯೆಗಳನ್ನು ಅನುಭವಿಸಬಹುದು.

2) ಹಾಲಿಗೆ ಹೋಲಿಸಿದರೆ ಮಜ್ಜಿಗೆಯಲ್ಲಿ ಕ್ಯಾಲೊರಿ ಅಂಶ ಕಡಿಮೆ ಇದೆ. ಆದರೆ ಅದಕ್ಕೆ ಸಕ್ಕರೆ ಅಥವಾ ಸುವಾಸನೆ ಬೀರುವ ಎಸೆನ್ಸ್‌ಗಳನ್ನು ಸೇರಿಸಿದಾಗ ಇದರಲ್ಲಿ ಕ್ಯಾಲೊರಿ ಅಂಶ ಸೇಪರ್ಡೆಯಾಗಬಹುದು. ಕ್ಯಾಲೊರಿ ಅಂಶವಿರುವ ಮಜ್ಜಿಗೆಯ ಸೇವನೆಯು ತೂಕ ಹೆಚ್ಚಲು ಕಾರಣವಾಗಬಹುದು.

## ಪದ ಬಂಧ



ಜ್ಯೋತಿ ರಾಜೇಶ್




**ಎಡದಿಂದ ಬಲಕ್ಕೆ....**

1. ಇದು ನಿಮಗಾಗಿ ಬಿಟ್ಟ ಪದ......(5)
3. ಬಾಯಲ್ಲಿ ನೀರೂರಿಸುವ ಒಂದು ಬಗೆಯ ಉಂಡೆ....(3)
5. ಮನುಷ್ಯ/ಪ್ರಾಣಿಗಳ ವರ್ತನೆಯನ್ನು ಹೀಗೆ ಹೇಳಿ.....(5)
7. ಎರೆಡಕ್ಷರದ ಅಂಧಕಾರವಿದು.....(2)
9. ಪ್ರತಿ ಪೌರನಿಗೂ ಇರುವ ಶೌರ್ಯ.....(3)
11. ಬೆನ್ನಟ್ಟಿ ಓಡಿಸಿದ್ದು ಹಿಂದುಮುಂದಾಗಿದೆ....(2)
13. ಇಲ್ಲರಿಗೂ ಇಷ್ಟವಾದದ್ದು ಈ ದಿನ.....(5)
15. ಇದು ಅಡಿಕೆಗಾಗಿ ಮಾಡಿದ ಮನವಿಯೆ....?(3)
16. ಆತ ಮಾಡಿದ ಪ್ರಯತ್ನ ಸತತವಾಗಿದೆ......(5)

**ಮೇಲಿನಿಂದ ಕೆಳಕ್ಕೆ.....**

1. ಈ ನವರತ್ನದಲ್ಲಿ ಮರವಿದೆಯಲ್ಲಾ.....(4)
2. ವನದಲ್ಲಿ ಕಂಡ ಮಂತ್ರಿ....(3)
4. ಆಕೆ ಮಾಡಿದ ಸಂಪಾದನೆಯಿದು.....(3)
6. ಹನ್ನೆರಡು ತಿಂಗಳ ಅವಧಿ ಬಿಡಿಬಿಡಿಯಾಗಿ ಬಂದಿದೆ.....(3)
8. ಮಕರಂದದಲ್ಲಿರುವ ಗರ್ವವೇ ಇದು?.....(2)
9. ಪೂರ್ವ ಭಾಗದಲ್ಲಿನ ರಾಷ್ಟ್ರಗಳಿಗೆ ಹೀಗೂ ಹೇಳಬಹುದೆ..... (3)
10. ಇದರ ಕೈಗೆ ಬುದ್ಧಿ ಕೊಡಬಾರದಂತೆ..... (2)
12. ಅನಿರೀಕ್ಷಿತವಾಗಿ ಬಂದ ಅತಿಥಿಯೇ ಈತ.....(4)
13. ಬಾರಿ ಬಾರಿಗೂ ಉಪಕೃತನಾದವನಿವನು......(3)
14. ರಸಭರಿತವಾದದ್ದನ್ನು ಸವಿಯುವ ಅಂಗವೇ ಇದು....(3)

# ಅಪಪ್ರಚಾರದ `ಆಕ್ಷನ್'ಗೆ ನಿಮ್ಮ `ರಿಯಾಕ್ಷನ್' ಹೇಗಿರಬೇಕು..?



✍ಹಿರಿಯೂರು ಪ್ರಕಾಶ್

ಜೀವನದಲ್ಲಿ ಯಾರನ್ನು ನೀವು ಒಂದು ಮಟ್ಟಕ್ಕೆ ಗೌರವಿಸುತ್ತಿರುವಿರೋ, ಒಳ್ಳೆಯವರೆಂದು ಅಂದುಕೊಂಡಿರುತ್ತೀರೋ ಅಥವಾ ಒಬ್ಬರ ಬಗ್ಗೆ ಒಂದೊಳ್ಳೆ ಅಭಿಪ್ರಾಯವನ್ನು ಹೊಂದಿರುತ್ತೀರೋ ಅಂಥವರೇ ನಿಮ್ಮ ಎಲ್ಲ ನಿರೀಕ್ಷೆಗಳಿಗೂ ಕೊಳ್ಳಿ ಇಟ್ಟಂತೆ ವಿನಾಕಾರಣ ನಿಮ್ಮನ್ನು ಅವಮಾನಿಸುವ , ನಿಮ್ಮ ಬಗೆಗೆ ಕೇವಲವಾಗಿ ಮಾತನಾಡುವ ಅಯೋಗ್ಯತನಕ್ಕಿಳಿದಾಗ ನಿಮಗೆ ಏನನ್ನಿಸಬಹುದು?

ಒಬ್ಬ ಸಜ್ಜನ ಅಂದುಕೊಂಡವನು , ನಿಮಗೇ ಸಡನ್ ಷಾಕ್ ಆಗುವಂತೆ ತೀರಾ ನೀಚತನಕ್ಕಿಳಿದು ವರ್ತಿಸಿದಾಗ ನಿಮ್ಮ ರಿಯಾಕ್ಷನ್ ಹೇಗಿರಬೇಕು?

ನೀವು ಎಂಥವರೆಂದು ಗೊತ್ತಿದ್ದೂ ನಿಮ್ಮ ಹೆಸರಿಗೆ ಮಸಿ ಬಳಿಯುವ ಕ್ಷುಲ್ಲಕ ಕೃತ್ಯಗಳಲ್ಲಿ ತೊಡಗಿದ ನಿರ್ಲಜ್ಜರನ್ನು ಹೇಗೆ ಹ್ಯಾಂಡಲ್ ಮಾಡಬೇಕು?

ನಿಮ್ಮ ಅನ್ನವನ್ನು ನೀವೇ ಕಷ್ಟಪಟ್ಟು ದುಡಿದು ಸಂಪಾದಿಸಿ ತಿನ್ನುತ್ತಿದ್ದರೂ , ನಿಮ್ಮ ಕಾಲ ಮೇಲೆ ನೀವು ನಿಂತು ಜೀವಿಸುತ್ತಿದ್ದರೂ , ನಿಮ್ಮ ಇಡೀ ಬದುಕನ್ನು ನೀವೇ ರೂಪಿಸಿಕೊಂಡು ನಿಮ್ಮ ಪಾಡಿಗೆ ನೀವು ಬಾಳುತ್ತಿದ್ದರೂ ನಿಮ್ಮ ಕುರಿತು ಇಲ್ಲ ಸಲ್ಲದ ಸುದ್ದಿಗಳನ್ನು ಹರಡಿ ಬಾಯಿತೀಟೆ ತೀರಿಸಿಕೊಳ್ಳುವ ಅಧಮರನ್ನು ಏನು ಮಾಡಬೇಕು..?

ಹಾಗೆ ವರ್ತಿಸುವವರ ಉದ್ದೇಶ ಯಾವುದೇ ಇರಬಹುದು. ಅದು ಅಸೂಯೆ, ಈರ್ಷ್ಯೆ, ದ್ವೇಷ, ಸ್ವಾರ್ಥ, ಇರಿಐ ಅಥವಾ ಜಿದ್ದು ಹೀಗೆ ಏನೇ ಆಗಿದ್ದರೂ ಅದರ ಡೈರೆಕ್ಟ್ ಎಫೆಕ್ಟ್ ನಿಮ್ಮ ಮೇಲಾಗಿ ಮನಸ್ಸು ಘಾಸಿಯಾಗುವುದಂತೂ ಹದಿನಾರಾಣೆ ನಿಜ.

ಈ ತರಹದ ಕಹಿ ಸಂಧರ್ಭಗಳು , ಅನಿರೀಕ್ಷಿತವಾಗಿ ಎರಗುವ ಅಯೋಗ್ಯತನದ ವರ್ತನೆಗಳು, ಧುತ್ತನೇ ಎದುರಾದಾಗ ಹೇಗೆ ರಿಯಾಕ್ಟ್ ಮಾಡಬೇಕೆಂಬುದೂ ಕೂಡಾ ಒಮ್ಮೊಮ್ಮೆ ಗೊಂದಲಮಯ ಸವಾಲಾಗಿ ಎದುರು ನಿಲ್ಲುತ್ತವೆ.

ಇಂತಹ ಸನ್ನಿವೇಶಗಳನ್ನು ಹೀಗೆಯೇ ಎದುರಿಸಬೇಕೆಂಬ ರೀತಿ –ರಿವಾಜು, ನೀತಿ –ನಿಯಮ ಅಥವಾ ಲೆಕ್ಕಾಚಾರದ ಅಳತೆಗೋಲು ಅಂತ ಯಾವುವೂ ಇರೋಲ್ಲ. ಅವುಗಳನ್ನು ಹೇಗೆ ಡೀಲ್ ಮಾಡಬೇಕೆಂಬುದು ವ್ಯಕ್ತಿಯಿಂದ ವ್ಯಕ್ತಿಗೆ , ಸನ್ನಿವೇಶದಿಂದ ಸನ್ನಿವೇಶಕ್ಕೆ ಭಿನ್ನವಾಗಿ ನಿಲ್ಲುತ್ತವೆಯಾದರೂ ಈ ತರಹದ ಸೀನುಗಳನ್ನು ಎರಡು ರೀತಿಯಿಂದ ಎದುರಿಸಬಹುದು.

ಒಂದು...ಹಾಗೆ ಅವಹೇಳನ ಮಾಡಿದವರ ಮಟ್ಟಕ್ಕೇ ನೀವೂ ಸಹಾ ನಿಂತು, ಅವರ ಭಾಷೆಯಲ್ಲೇ ಅವರದೇ ಆದ ಮಾರ್ಗದಲ್ಲೇ ತಕ್ಕ ಉತ್ತರ ಕೊಡುವುದು. ಅಂದರೆ " ನೀನು ಅಂದರೆ ನಿಮ್ಮಪ್ಪ " ಎನ್ನುವ ಹಾಗೆ ಕೇರ್ ಮಾಡದೇ ಕ್ಯಾಕರಿಸಿ ಉಗಿದು ಕ್ಲಾಸ್ ತೆಗೆದು ಕೊಡವುವುದು .

ಮತ್ತೊಂದು, ಚಾಡಿ ಮಾತುಗಳಿಗೆ, ಕಂತ್ರಿನಾಯಿಗಳ ಬೊಗಳುವಿಕೆಗೆ, ಅವಿವೇಕಿಗಳ ಅಪಪ್ರಚಾರಕ್ಕೆ ಯಾವುದೇ ರೀತಿಯಾಗಿ ಪ್ರತಿಕ್ರಿಯಿಸದೇ ಅಂಥವರನ್ನು, ಅವರ ಕೀಳುಪ್ರಚಾರವನ್ನು ಸಂಪೂರ್ಣವಾಗಿ ಉದಾಸೀನ ಮಾಡಿ ತಲೆಕೆಡಿಸಿಕೊಳ್ಳದೇ ಸುಮ್ಮನಾಗುವುದು.

ಇದರ ಜೊತೆಗೆ "ನಿಮ್ಮ ಹತ್ತಿರದ ವ್ಯಕ್ತಿಯೇ ನಿಮಗೆ ಷಾಕ್ ಆಗುವಂತೆ ಹೀಗೆಲ್ಲಾ ನಡೆದುಕೊಂಡಿದ್ದಾನೆ " ಎಂದು ಗೊತ್ತಾದಾಗ ಅವನಿಗೇ ನೇರವಾಗಿ ಮಾತಾಡಿ ಕ್ಲಾರಿಫೈ ಮಾಡಿಕೊಳ್ಳುವುದು ಇಲ್ಲವೇ ಅವನು ನಿಮಗೆ ಮಾಡಿದ ಅಪಮಾನದ ಕೆಲಸವನ್ನು ನೀವು ಅವನಿಗೆ ತಿರುಗಿಸಿ ಮಾಡುವುದು !

**ಊಫ್....ಎಷ್ಟೆಲ್ಲಾ ಕಾಂಪ್ಲಿಕೇಟೆಡ್ ಅಲ್ಲವೇ..?**

ವಾಸ್ತವ ವರ್ತಮಾನ

ಜೀವನ ಅಂದರೇ ಹಾಗೇನೇ. ನೀವೆಷ್ಟೇ ಒಳ್ಳೆಯವರಾಗಿರಬಹುದು, ಯಾರ ತಂಟೆಗೂ ಹೋಗದೇ ನಿಮ್ಮಷ್ಟಕ್ಕೆ ನೀವಿರಬಹುದು , ಯಾರ ಹಂಗಲ್ಲೂ ಇರದೇ ನಿಮ್ಮದೇ ಆದ ಸ್ವತಂತ್ರ ಬದುಕನ್ನು ಕಟ್ಟಿಕೊಂಡಿರಬಹುದು. ಇವೆಲ್ಲಾ




ಏನೇ ಆಗಿದ್ದರೂ ನಿಮ್ಮನ್ನು ಕಂಡು ಅಂಗಾಲಿನಿಂದ ಮಸ್ತಕದವರೆಗೂ ಕರುಬುವವರೂ, ಅಸೂಯೆ ಪಡುವವರು ಅಥವಾ ಅನಗತ್ಯವಾಗಿ ನಿಮ್ಮ ಹೆಸರಿಗೆ ಮಸಿ ಬಳಿಯುವ ಖರಾಬ್ ಕಜ್ಜಿ ನಾಯಿಗಳು ಸಾಕಷ್ಟು ಇದ್ದೇ ಇರುತ್ತಾರೆ. ಅಚ್ಚರಿಯೆಂದರೆ ಇಂತಹ ನಮಕ್ ಹರಾಮ್ ಕೆಲಸ ಮಾಡುವ ಹೊರಗೆ ಅಸಲಿ– ಒಳಗೆ ನಕಲಿಗಳು ಹೊರಗಡೆ ಪ್ರಪಂಚಕ್ಕಿಂತ ನಿಮ್ಮ ಸುತ್ತ ಮುತ್ತಲಿನ ಬಳಗದಲ್ಲೇ, ನಿಮ್ಮೆದುರೇ ನಿಮಗೆ ಗೊತ್ತಾಗದ ಹಾಗೆ ಅಥವಾ ನೀವೆಂದೂ ನಿರೀಕ್ಷಿಸದ ಹಾಗೆ ಓಡಾಡಿಕೊಂಡು ಇರುತ್ತಾರೆ .

ಡೋಂಟ್ ವರೀ..... ಎಲ್ಲಿಯವರೆಗೆ ನಿಮ್ಮಲ್ಲಿ ಒಂದು ಮಟ್ಟದ ಪ್ರಾಮಾಣಿಕತೆ, ಬದ್ದತೆ, ಸತ್ಯ, ಪಾರದರ್ಶಕತೆ ಹಾಗೂ ನೇರವಂತಿಕೆ ಇರುತ್ತದೆಯೋ ಅಲ್ಲಿಯವರೆಗೆ ಈ ತರಹದ ಯಾವ ಕುತಂತ್ರಿ ನರಿಗಳ ತಂತ್ರಗಳೂ ನಿಮ್ಮನ್ನು ಏನೂ ಮಾಡಲಾರವು. ಒಂದೊಮ್ಮೆ ಇಂಥವರ ಅಪಪ್ರಚಾರ, ಅಪಮಾನ ಅಥವಾ ಅನಿರೀಕ್ಷಿತ ಅಸಹನೆಗಳಿಂದ ನಿಮಗೆ ತಾತ್ಕಾಲಿಕ ಹಿನ್ನಡೆಯಾದಂತೆ ಕಂಡರೂ ಅಂತಿಮವಾಗಿ ಗಟ್ಟಿಯಾಗಿ ನಿಲ್ಲುವುದು ನಿಮ್ಮೊಳಗಿನ ಸ್ಪಷ್ಟತೆ, ಧೃಢತೆ ಹಾಗೂ ನ್ಯಾಯಯುತ ಮೌಲ್ಯಗಳೇ ಹೊರತು ಕೇಮಿಲ್ಲದ ಕುನ್ನಿಗಳ ಕುಂಯ್ ಗುಟ್ಟುವಿಕೆಯಲ್ಲ.

ಇವಕ್ಕೆಲ್ಲಾ ಧೃತಿಗೆಡದೆ ನಿಮ್ಮ ಗುರಿಯೆಡೆಗೆ ಮುಂದೆ ಸಾಗುತ್ತಲೇ ಇರುವುದರಲ್ಲೇ ಮನಸಿನ ನೆಮ್ಮದಿ ಅಡಗಿದೆ.

**ಮರೆಯುವ ಮುನ್ನ:** ಈ ಲೌಕಿಕ ಬದುಕಿನ ಅಸಲಿ ಸತ್ಯ ಏನಪ್ಪ ಅಂದರೆ, ಯಾರು ಜೀವನದಲ್ಲಿ ಪ್ರಾಮಾಣಿಕತೆಯಿಂದ, ಬದ್ಧತೆಯಿಂದ , ಕಷ್ಟಪಟ್ಟು ಒಂದು ಹಂತಕ್ಕೇರಿ ನೆಮ್ಮದಿಯಿಂದ, ಯಾವ ಕಿರಿಕ್ಕೂ ಇಲ್ಲದೇ, ಯಾರ ಕಿರಿಕ್ಕಿಗೂ ಹೋಗದೇ ಇದ್ದಿರಬಹುದೋ ಅಂಥವರ ಬುಡಕ್ಕೇ ಈ ರೀತಿಯ ಅಪಪ್ರಚಾರದ , ಅಸೂಯೆಯ ಆಲಾಪಗಳು ಹೆಚ್ಚಿಗೆ ಸುತ್ತಿಕೊಳ್ಳುತ್ತವೆ. ಅದೇ ರೀತಿಯಲ್ಲಿ, ಯಾರಿಗೆ ಒಬ್ಬರ ಏಳಿಗೆಯನ್ನು ಸಹಿಸದ ಕುತ್ಸಿತ, ಕ್ಷುಲ್ಲಕ ಬುದ್ದಿಯಿರುವುದೋ, ಯಾರಿಗೆ ಒಬ್ಬರಲ್ಲಿರುವ ಯಾವುದೇ ಪಾಸಿಟಿವ್ ಅಂಶಗಳು ತನ್ನಲ್ಲಿಲ್ಲ ಎಂಬ ಕೀಳರಿಮೆ ನಿರಂತರವಾಗಿ ಕಾಡುವುದೋ, ಯಾರಿಗೆ ಮತ್ತೊಬ್ಬರ ಹೆಸರು, ಕೀರ್ತಿ, ಒಳ್ಳೆಯತನಕ್ಕಾಗಿ ಸಿಕ್ಕ ಜನಪ್ರಿಯತೆಯನ್ನು ಸಹಿಸಿಕೊಳ್ಳುವ ಕನಿಷ್ಠ ಸೌಜನ್ಯ ಇಲ್ಲವೋ ಅಂಥವರೇ ಇಂತಹ ನಾಲಾಯಕ್ ಕೆಲಸಗಳಿಗೆ ಕೈ ಹಾಕುವುದು ಎಂಬುದೂ ಸೂರ್ಯನ ಬೆಳಕಿನಷ್ಟೇ ಸತ್ಯ.

ಅದರೆ , ಟೀಕೆ ಮಾಡದ ನಾಲಿಗೆಗಳು, ಅಪಪ್ರಚಾರ ಮಾಡದ ಅವಿವೇಕಿಗಳು, ಬೊಗಳದ ನಾಯಿಗಳು ಇರದ ಊರಿರಲು ಸಾಧ್ಯವೇ..? ಎಲ್ಲಿಯವರೆಗೆ ಈ ಭೂಮಿ ಮೇಲೆ ಮನುಷ್ಯನೆಂಬ ಜೀವಿ ಉಸಿರಾಡುತ್ತಲಿರುತ್ತಾನೋ ಅಲ್ಲಿಯವರೆಗೆ ಈ ಮಾತುಗಳು ಪ್ರಸ್ತುತ.



ನಿಮಗೆ ಇಂತಹ ಸಂದರ್ಭ ಎದುರಾದಾಗ ಅದನ್ನು ನಿರ್ಲಕ್ಷ್ಯ ಮಾಡುವಿರೋ, ಊಫ್ ಎಂದು ಉದಾಸೀನ ಮಾಡುವಿರೋ ಅಥವಾ ಮಸಿ ಬಳಿದವರ ಮುಖಕ್ಕೇ ನೀವೂ ಮಸಿ ಮೆತ್ತುವಿರೋ.....ಅವೆಲ್ಲವೂ ಆಯಾ ಸನ್ನಿವೇಶ ಸಂದರ್ಭ ಹಾಗೂ ನಿಮ್ಮ ಸ್ವಭಾವ ಮತ್ತು ವ್ಯಕ್ತಿತ್ವಗಳನ್ನು ಅವಲಂಬಿಸಿರುತ್ತದೆ. ಕೆಲವೊಮ್ಮೆ ಅಸೂಯೆಯಿಂದ ಉದ್ಭವಿಸಿದ ಅಪಪ್ರಚಾರಗಳನ್ನು ಉದಾಸೀನ ಮಾಡುವುದು ಒಳ್ಳೆಯದು ಎನಿಸಿದರೆ, ಮತ್ತೇ ಕೆಲವು ಸಂದರ್ಭಗಳಲ್ಲಿ ಅದೇ ನಿಮಗೆ ಮುಳುವಾಗಲೂ ಬಹುದು. ಏಕೆಂದರೆ ಅಕ್ಷರಗಳಲ್ಲಿ ಬರೆದಷ್ಟು ಸುಲಭವಾಗಿ ಮನಸಿಗೆ ಆದ ಗಾಯ ಮಾಯಲಾರದಲ್ಲವೇ.? ಏನೇ ಆಗಲೀ, ಇವುಗಳೆಲ್ಲವೂ ಬದುಕಿನ ಒಂದು ಭಾಗವೆಂದು ಸ್ವೀಕರಿಸಿ, ನಿಮ್ಮ ವ್ಯಕ್ತಿತ್ವಕ್ಕನುಗುಣವಾಗಿ ಸಮರ್ಥವಾಗಿ ಎದುರಿಸಿ ಮುನ್ನಡೆಯುವ ಪರಿಪಕ್ವತೆ ಬೆಳೆಸಿಕೊಳ್ಳುವುದಿದೆಯಲ್ಲಾ.....ಅದುವೇ ನಮ್ಮೆಲ್ಲರ ಬದುಕಿನ ಅತ್ಯಂತ ದೊಡ್ಡ ಸವಾಲು.!

**ಲಾಸ್ಟ್ ಪಂಚ್:** ನಿಮ್ಮ ಅತ್ಯಂತ ಕೆಟ್ಟ ದಿನಗಳು ಕಲಿಸಬಹುದಾದ ಒಳ್ಳೆಯ ಪಾಠ ಏನು ಗೊತ್ತಾ...ಅದು ಯಾರ್ಯಾರ ಬಣ್ಣ ಏನೆಂದು ಬಯಲು ಮಾಡುವುದು !

Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from No 170, Nirvikalpa Road, E&F block, Ramakrishna Nagar, Mysore - 570022, Editor K.N Ravi,